ಕರ್ನಾಟಕ ಸರ್ಕಾರ




# ಆಯವ್ಯಯ

## ೨೦೨೧-೨೨

೦೮ನೇ ಮಾರ್ಚ್ ೨೦೨೧

ಮಂಡಿಸಿದವರು
**ಶ್ರೀ ಬಿ.ಎಸ್. ಯಡಿಯೂರಪ್ಪ**
ಮಾನ್ಯ ಮುಖ್ಯಮಂತ್ರಿಗಳು

**ಸನ್ಮಾನ್ಯ ಸಭಾಧ್ಯಕ್ಷರೇ,**

1. ನಾನು ಕರ್ನಾಟಕ ಸರ್ಕಾರದ 2021–22ನೇ ಸಾಲಿನ ಮುಂಗಡ ಪತ್ರವನ್ನು ಮಂಡಿಸಲು ಹರ್ಷಿಸುತ್ತೇನೆ.

2. ಇದು ನಾನು ಮಂಡಿಸುತ್ತಿರುವ 8ನೆಯ ಮುಂಗಡ ಪತ್ರ. ಈ ಅವಕಾಶ ದೊರೆತಿದ್ದಕ್ಕೆ ರಾಜ್ಯದ ಜನತೆಗೆ ಋಣಿಯಾಗಿದ್ದೇನೆ.

3. ಈ ಹಿಂದಿನ ಮುಂಗಡ ಪತ್ರಗಳಲ್ಲಿ ಸ್ಪಷ್ಟಪಡಿಸಿರುವಂತೆ, ಕರ್ನಾಟಕದ ಸಮಗ್ರ ಅಭಿವೃದ್ಧಿಯೇ ನಮ್ಮ ಆದ್ಯತೆಯಾಗಿದೆ. ಸಾಮಾಜಿಕ ನ್ಯಾಯದ ಜೊತೆಗೆ ಸರ್ವರಿಗೂ ಸಮಬಾಳು ಮತ್ತು ಸಮಪಾಲು ನೀಡುವ ಧ್ಯೇಯ ನಮ್ಮದು.

4. ಎಲ್ಲರನ್ನೂ ಒಳಗೊಂಡ ಅಭಿವೃದ್ಧಿ (inclusive growth) ಸಾಧಿಸಲು ಪರಿಶಿಷ್ಟ ಜಾತಿ ಮತ್ತು ಪಂಗಡದವರು, ಹಿಂದುಳಿದವರು, ಅಲ್ಪಸಂಖ್ಯಾತರು, ಮಹಿಳೆಯರು ಮತ್ತು ಮಕ್ಕಳು, ಹಿರಿಯ ನಾಗರಿಕರು ಹಾಗೂ ವಿಕಲಚೇತನರ ಅಭ್ಯುದಯಕ್ಕೆ ಮುಂಗಡ ಪತ್ರದಲ್ಲಿ ಒತ್ತು ನೀಡಲಾಗಿದೆ.

5. ಅನ್ನದಾತ ರೈತ ಸದಾ ನೆಮ್ಮದಿ ಮತ್ತು ತೃಪ್ತಿಯಿಂದ ಬದುಕುವಂತಾಗಬೇಕು ಎಂಬುದು ನಮ್ಮ ಸರ್ಕಾರದ ಗುರಿಯಾಗಿದೆ. ಈ ಗುರಿ ತಲುಪಲು ಸಹಕಾರಿಯಾಗಬಲ್ಲ ಕಾರ್ಯಕ್ರಮಗಳನ್ನು ಪ್ರಸಕ್ತ ಮುಂಗಡ ಪತ್ರದಲ್ಲಿ ರೂಪಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿಜೀ ಅವರ ಆಶಯದಂತೆ ರೈತರ ಆದಾಯವನ್ನು ದುಪ್ಪಟ್ಟುಗೊಳಿಸುವ ದಿಶೆಯಲ್ಲಿ ನೂತನ ಕಾರ್ಯಕ್ರಮಗಳು ನೆರವಾಗಲಿವೆ.

6. ಕರ್ನಾಟಕ ರಾಜ್ಯ ಅತಿವೃಷ್ಟಿ ಮತ್ತು ಅನಾವೃಷ್ಟಿಗಳ ವೈಪರೀತ್ಯಗಳನ್ನು ನಿರಂತರ ಎದುರಿಸುತ್ತಾ ಬಂದಿದೆ. ಪ್ರತಿ ವರ್ಷವೂ ನೆರೆ ಮತ್ತು ಬರ ಪರಿಸ್ಥಿತಿ ಸಾಮಾನ್ಯ ಸಂಗತಿಗಳಾಗಿವೆ. ಇದರ ಜೊತೆಗೆ ಕಳೆದ ವರ್ಷ ಧುತ್ತೆಂದು ಎರಗಿದ ಕೋವಿಡ್–19 ಸಾಂಕ್ರಾಮಿಕ ಇಡೀ ವ್ಯವಸ್ಥೆಯನ್ನೇ ಬುಡಮೇಲು ಮಾಡಿದೆ. ಪ್ರಕೃತಿ ವಿಕೋಪ ಹಾಗೂ ಕೊರೋನಾ ಸಾಂಕ್ರಾಮಿಕದ ನಿರ್ವಹಣೆಯಲ್ಲಿ ಸರ್ಕಾರ ಸಮರ್ಥವಾಗಿ ಕಾರ್ಯನಿರ್ವಹಿಸಿದೆ. ಸಾಂಕ್ರಾಮಿಕದ ನಡುವೆಯೂ ವಿತ್ತೀಯ ಶಿಸ್ತು ಪಾಲನೆ ಮತ್ತು ಅಭಿವೃದ್ಧಿಯಲ್ಲಿ ಸಮತೋಲನ ಸಾಧಿಸುವುದು ಕತ್ತಿಯ ಅಲಗಿನ ಮೇಲಿನ ನಡಿಗೆಯ ಅನುಭವ ನೀಡಿದೆ.

**'ಅಳಿದೆ ಅವನತಿಯ ದಾರಿ**

**ಆತ್ಮವಿಶ್ವಾಸ ಯಶಸ್ಸಿನ ಪರಿ'**

7. ಇದು ಅನುಭವ ವಾಣಿ. ಸಂಕಷ್ಟಗಳಿಗೆ ಜಗ್ಗದೇ ಸವಾಲುಗಳನ್ನೇ ಅವಕಾಶಗಳನ್ನಾಗಿ ಪರಿಗಣಿಸಿ ಸಾಮರ್ಥ್ಯ ವೃದ್ಧಿಸಲು ಮತ್ತು ಆರೋಗ್ಯ ಮೂಲಸೌಕರ್ಯ ಹೆಚ್ಚಿಸಲು ನಮ್ಮ ಸರ್ಕಾರ ಶ್ರಮಿಸಿದೆ. ಪರಿಣಾಮವಾಗಿ ರಾಜ್ಯದಲ್ಲಿ ಪಿ.ಪಿ.ಇ. ಕಿಟ್, ವೆಂಟಿಲೇಟರ್ ಇತ್ಯಾದಿ ವೈದ್ಯಕೀಯ ಪರಿಕರಗಳ ಉತ್ಪಾದನೆ ವೃದ್ಧಿಸಿದೆ. ಪ್ರಯೋಗಾಲಯಗಳ ಸಂಖ್ಯೆ ಹೆಚ್ಚಿಸಿದೆ. ಸಾಂಕ್ರಾಮಿಕವನ್ನು ಎದುರಿಸಲು ರಾಜ್ಯದಾದ್ಯಂತ ಆಸ್ಪತ್ರೆಗಳನ್ನು ಸಜ್ಜುಗೊಳಿಸಲಾಗಿದೆ. ಸಾಂಕ್ರಾಮಿಕದ ವಿರುದ್ಧದ ಹೋರಾಟದಲ್ಲಿ ವೈದ್ಯರು, ದಾದಿಯರು, ಪೊಲೀಸರು, ಆರೋಗ್ಯ, ಕಂದಾಯ,

ನಗರಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಸಿಬ್ಬಂದಿಗಳು ಅಹರ್ನಿಶಿ ಶ್ರಮಿಸಿದ್ದಾರೆ. ಅವರೆಲ್ಲರಿಗೂ ರಾಜ್ಯ ಸರ್ಕಾರ ಮತ್ತು ಜನತೆ ಋಣಿಯಾಗಿದೆ.

8. ಕೊರೋನಾ ಸೃಷ್ಟಿಸಿದ ತಲ್ಲಣಗಳನ್ನು ಒಂದು ಕ್ಷಣವೂ ಮರೆಯುವಂತಿಲ್ಲ. ಅದೊಂದು ದು:ಸ್ವಪ್ನ. ಆದರೆ ಕೊರೋನಾ ನಿರ್ವಹಣೆ ಅವಧಿಯಲ್ಲಿ ನಾವು ಕಲಿತ ಪಾಠ ಜೀವನವಿಡೀ ನೆನಪಿಸಿಕೊಳ್ಳುವಂಥದ್ದು. ಇಡೀ ಮಾನವ ಸಂಕುಲವೇ ದಿಕ್ಕೆಟ್ಟು ಅಪರಿಮಿತ ಕತ್ತಲ ಕೂಪದಲ್ಲಿ ನರಳುವಂತಹ ಸ್ಥಿತಿ. ಅಗೋಚರ ಶತ್ರುವಿನೊಡನೆ ಯುದ್ಧ. ಚಿಕಿತ್ಸೆಗೆ ಸಿದ್ಧೌಷಧವಿಲ್ಲ, ಸಿದ್ಧ ಸೂತ್ರವೂ ಇಲ್ಲ. ಆದರೂ ಪ್ರತಿಕೂಲ ಸನ್ನಿವೇಶದಲ್ಲಿ ಆತ್ಮವಿಶ್ವಾಸದೊಂದಿಗೆ ಹತ್ತು ತಿಂಗಳ ಕಾಲ ಸೆಣಸಿ ಈ ಸಮರದಲ್ಲಿ ಮಾನವ ಕುಲ ಜಯಸಿದೆ. ಈ ಗೆಲುವಿನಲ್ಲಿ ಭಾರತದ ಕಾಣಿಕೆ ಜಾಗತಿಕ ಮನ್ನಣೆಗೆ ಪಾತ್ರವಾಗಿದೆ. ಕರ್ನಾಟಕದ ಕೊಡುಗೆ ಕೂಡ ಇದರಲ್ಲಿ ಗಮನಾರ್ಹವಾದುದು. ಪ್ರಧಾನಿ ನರೇಂದ್ರ ಮೋದಿಯವರು ಘೋಷಿಸಿದ 'ಆತ್ಮನಿರ್ಭರ' ಯೋಜನೆ ಈ ಅಗೋಚರ ಶತ್ರುವಿನೊಡನೆ ಸೆಣಸಲು ಒತ್ತಾಸೆಯಾಗಿದೆ. ಕರ್ನಾಟಕದಲ್ಲಿ ಕೊರೋನಾ ನಿರ್ವಹಣೆಗೆ ಸುಮಾರು 5,372 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿದೆ. ವಿವಿಧ ವರ್ಗಗಳ 63.59 ಲಕ್ಷ ಫಲಾನುಭವಿಗಳಿಗೆ ನೆರವಾಗಿದೆ.

9. ಫೆಬ್ರವರಿ ಅಂತ್ಯಕ್ಕೆ ಕೊರೋನಾ ಸೋಂಕನ್ನು ಪತ್ತೆ ಹಚ್ಚಲು 1.91 ಕೋಟಿ ಮಂದಿಗೆ ಆರ್.ಟಿ.ಪಿ.ಸಿ.ಆರ್. ಪರೀಕ್ಷೆಗಳನ್ನು ನಡೆಸಲಾಗಿದೆ. 9.53 ಲಕ್ಷ ಕೋವಿಡ್–19 ರೋಗಿಗಳಿಗೆ

ಉಚಿತ ಚಿಕಿತ್ಸೆಯನ್ನು ಒದಗಿಸಲಾಗಿದೆ. ಕಟ್ಟಡ ನಿರ್ಮಾಣ ಕಾರ್ಮಿಕರಿಗೆ 90 ಲಕ್ಷ ಆಹಾರ ಪೊಟ್ಟಣಗಳನ್ನು ವಿತರಿಸಲಾಗಿದೆ. 16.45 ಲಕ್ಷ ಕಟ್ಟಡ ನಿರ್ಮಾಣ ಕಾರ್ಮಿಕರಿಗೆ, 11,770 ಕುಶಲಕರ್ಮಿಗಳಿಗೆ ಹಾಗೂ 51 ಲಕ್ಷ ರೈತರಿಗೆ ನೆರವು ಒದಗಿಸಲಾಗಿದೆ.

10. ಕೊರೋನಾದ ನಿಯಂತ್ರಣ, ನಿರ್ವಹಣೆ ಮತ್ತು ಲಸಿಕೆ ಅಭಿಯಾನದಲ್ಲಿ ನಮ್ಮ ರಾಜ್ಯದ ಕಾರ್ಯಾಚರಣೆ ರಾಷ್ಟ್ರ ಮಟ್ಟದಲ್ಲಿ ಗಮನ ಸೆಳೆಯಿತು. ಪ್ರಧಾನಿಗಳ ಮೆಚ್ಚುಗೆಗೂ ಪಾತ್ರವಾಯಿತು. ಇದೀಗ ಪರಿಸ್ಥಿತಿ ಸುಧಾರಿಸಿದೆ. ಆದರೂ ಮೈಮರೆಯುವಂತಿಲ್ಲ. ಏಕೆಂದರೆ ಸೋಂಕು ಮತ್ತು ಸಾವಿನ ಹೊಸ ಪ್ರಕರಣಗಳು ವರದಿಯಾಗುತ್ತಲೇ ಇವೆ. ಸಾಂಕ್ರಾಮಿಕದ ಎರಡನೇ ಅಲೆಯ ಆತಂಕವೂ ಕಣ್ಣೆದುರಿಗಿದೆ. ಆದ್ದರಿಂದ ಕೋವಿಡ್ ನಿಯಮಗಳ ಪಾಲನೆ, ಸ್ವಚ್ಛತೆ, ದೈಹಿಕ ಅಂತರ, ಮುಖಗವಸು ಧಾರಣೆಯನ್ನು ಮುಂದುವರೆಸಲೇಬೇಕು. ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಚಟುವಟಿಕೆಗಳನ್ನು ಸಹಜಗೊಳಿಸುತ್ತಲೇ ಜಾಗ್ರತೆ ವಹಿಸುವುದು ಅನಿವಾರ್ಯ. ಜೀವ–ಜೀವನಗಳ ಸಮತೋಲನ ಕಾಯ್ದುಕೊಳ್ಳಬೇಕಾದ ಅಗತ್ಯವನ್ನು ಮನಗಾಣಬೇಕು.

11. ಕೊರೋನಾ ಕಾಲದ ಹತ್ತು ತಿಂಗಳ ಅವಧಿಯಲ್ಲಿ ಮೊದಲ ಮೂರು ತಿಂಗಳು ಲಾಕ್‌ಡೌನ್ ಮತ್ತಿತರ ಕಾರಣಗಳಿಂದ ರಾಜಸ್ವ ಸಂಗ್ರಹದಲ್ಲಿ ತೀವ್ರ ಹಿಂಜರಿಕೆಯುಂಟಾಗಿತ್ತು. ಲಾಕ್‌ಡೌನ್ ತೆರವುಗೊಳಿಸಿದ ನಂತರ ಆರ್ಥಿಕ ಮತ್ತು ಸಾಮಾಜಿಕ ಚಟುವಟಿಕೆಗಳು ಚೇತರಿಸಿ, ಪರಿಸ್ಥಿತಿಯು

ಸಾಮಾನ್ಯ ಸ್ಥಿತಿಗೆ ಮರಳುತ್ತಿದ್ದರೂ ಸಹ ರಾಜಸ್ವ ಸಂಗ್ರಹಣೆ ಆಯವ್ಯಯ ಅಂದಾಜಿಗೆ ತಲುಪುವ ನಿರೀಕ್ಷೆಯಿಲ್ಲ. ಹಿಂದಿನ ಕೆಲವು ತಿಂಗಳುಗಳಲ್ಲಿ ರಾಜಸ್ವ ಸಂಗ್ರಹಣೆಯಲ್ಲಿ ಏರುಗತಿ ಕಂಡುಬಂದಿದೆಯಾದರೂ ಇಡೀ ಆರ್ಥಿಕ ವರ್ಷದ ಬಹುತೇಕ ಅವಧಿಯಲ್ಲಿ ರಾಜಸ್ವ ಸಂಗ್ರಹದಲ್ಲಿ ಕೊರತೆ ಇದ್ದ ಕಾರಣ ವಾರ್ಷಿಕ ಆದಾಯ ಮತ್ತು ವೆಚ್ಚಗಳಲ್ಲಿ ಅಸಮತೋಲನ ಉಂಟಾಗಿರುವುದನ್ನು ಒಪ್ಪಿಕೊಳ್ಳಲೇಬೇಕು.

12. ಕೊರೋನಾ ಸಾಂಕ್ರಾಮಿಕದ ಹಠಾತ್ ದಾಳಿಯಿಂದ ಆರ್ಥಿಕ ಚಟುವಟಿಕೆಗಳು ಸ್ಥಗಿತಗೊಂಡು ಪ್ರಗತಿಯಲ್ಲಿ ಹಿನ್ನಡೆ ಅನುಭವಿಸಿದ್ದರೂ ಕೂಡ, ರಾಜ್ಯದಲ್ಲಿ ಆಹಾರ ಧಾನ್ಯಗಳ ಉತ್ಪಾದನೆಯಲ್ಲಿ ನೂತನ ದಾಖಲೆ ಬರೆಯಲಾಗಿದೆ. ಪ್ರವಾಹದ ಕಾರಣ ಬೆಳೆಗಳು ಕೊಚ್ಚಿಹೋಗಿ ಶೇ. 20ರಷ್ಟು ಬೆಳೆ ನಷ್ಟವಾದರೂ ಕೂಡ 2020-21ನೇ ಸಾಲಿನಲ್ಲಿ ನಮ್ಮ ಆಹಾರ ಧಾನ್ಯಗಳ ಉತ್ಪಾದನೆ 140 ಲಕ್ಷ ಟನ್‌ಗೆ ಹೆಚ್ಚಿದೆ. ಇದು, ಈವರೆಗಿನ ದಾಖಲೆಗಿಂತ 1.04 ಲಕ್ಷ ಟನ್‌ಗಳಷ್ಟು ಅಧಿಕವಾಗಿದೆ.

**ಹುಲ್ಲಾಗು ಬೆಟ್ಟದಡಿ, ಮನೆಗೆ ಮಲ್ಲಿಗೆಯಾಗು**
**ಕಲ್ಲಾಗು ಕಷ್ಟಗಳ ಮಳೆಯ ವಿಧಿ ಸುರಿಯೆ**
**ಬೆಲ್ಲ ಸಕ್ಕರೆಯಾಗು ದೀನದುರ್ಬಲರಿಂಗೆ**
**ಎಲ್ಲರೊಳಗೊಂದಾಗು ಮಂಕುತಿಮ್ಮ**

ಡಿ.ವಿ.ಜಿ.ಯವರ ಮಂಕುತಿಮ್ಮನ ಕಗ್ಗದ ಈ ಸಾಲುಗಳು ನನಗೆ ಸದಾ ಸ್ಫೂರ್ತಿ. ಕಷ್ಟಕಾರ್ಪಣ್ಯಗಳಿಗೆ ಅಂಜದೇ ಆತ್ಮವಿಶ್ವಾಸದಿಂದ ಮುನ್ನುಗ್ಗಲು ಪ್ರೇರಕ.

13. ಪ್ರಕೃತಿ ವಿಕೋಪ ಹಾಗೂ ಸಾಂಕ್ರಾಮಿಕದ ಪಿಡುಗಿನಿಂದ ನಮ್ಮ ಸರ್ಕಾರ ಕಂಗೆಟ್ಟು ಕೂರಲಿಲ್ಲ. ವ್ಯವಸ್ಥಿತ ಕಾರ್ಯತಂತ್ರ ಹಾಗೂ ಕೇಂದ್ರದ ನೆರವಿನೊಂದಿಗೆ ಸಮರ್ಥವಾಗಿ ಪರಿಸ್ಥಿತಿಯನ್ನು ನಿರ್ವಹಿಸಿದೆ. ರಾಜಸ್ವ ಕೊರತೆಯ ನಡುವೆಯೂ ಸಂಬಳ, ಪಿಂಚಣಿ, ಸಾಮಾಜಿಕ ಭದ್ರತಾ ಪಿಂಚಣಿ, ಸಬ್ಸಿಡಿಗಳು, ಸಾಲ ಮರುಪಾವತಿ ಇತ್ಯಾದಿ ಬದ್ಧ ವೆಚ್ಚಗಳನ್ನು ಸಕಾಲದಲ್ಲಿ ನಿರ್ವಹಿಸಲಾಗಿದೆ. ನೀತಿ ಆಯೋಗದ ನಾವೀನ್ಯತೆ ಸೂಚ್ಯಂಕದಲ್ಲಿ ರಾಜ್ಯಕ್ಕೆ ಸತತ ಎರಡನೇ ವರ್ಷ ಮೊದಲನೇ ಸ್ಥಾನ ಸಂದಿದೆ. ಹಾಲು ಉತ್ಪಾದನೆಯಲ್ಲಿ ಎರಡನೇ ಸ್ಥಾನ, ಸುಸ್ಥಿರ ಅಭಿವೃದ್ಧಿ ಸೂಚ್ಯಂಕಗಳಲ್ಲಿ ನಾಲ್ಕನೇ ಸ್ಥಾನ, ಸಾರ್ವಜನಿಕ ವ್ಯವಹಾರ ಸೂಚ್ಯಂಕದಲ್ಲಿ (ಬೆಳವಣಿಗೆ, ಸಮಾನತೆ ಹಾಗೂ ಸುಸ್ಥಿರತೆ) ನಾಲ್ಕನೇ ಸ್ಥಾನ, ಎಸ್.ಡಿ.ಜಿ. ಭಾರತ ಸೂಚ್ಯಂಕದಲ್ಲಿ ಆರನೇ ಸ್ಥಾನ ದೊರೆತಿದೆ. ರಾಷ್ಟ್ರೀಯ ಒಟ್ಟು ಆಂತರಿಕ ಉತ್ಪನ್ನಕ್ಕೆ ಶೇ. 8ರಷ್ಟು ಮತ್ತು ಮಾಹಿತಿ ತಂತ್ರಜ್ಞಾನ ರಫ್ತಿಗೆ ಶೇ. 40 ರಷ್ಟು ಕೊಡುಗೆ ಕರ್ನಾಟಕದ್ದಾಗಿದೆ. ಇದು ಕೊರೋನೋತ್ತರ ಕಾಲದಲ್ಲಿ ಮೂಡಿಬಂದಿರುವ ಭರವಸೆಯ ಆಶಾಕಿರಣವಾಗಿದೆ.

14. **ನಮ್ಮ ಸರ್ಕಾರದ ಅಭಿವೃದ್ಧಿ ಕಾರ್ಯತಂತ್ರದ ನೋಟ ಹೀಗಿದೆ :**

- ಸಾಮಾಜಿಕ ನ್ಯಾಯದೊಂದಿಗೆ ಸಮ ಸಮಾಜದ ನಿರ್ಮಾಣಕ್ಕೆ ಬುನಾದಿ.
- ಸಮರ್ಥ ಕಾನೂನು ಸುವ್ಯವಸ್ಥೆ ನಿರ್ವಹಣೆಯೊಂದಿಗೆ ಸಾಮಾಜಿಕ ಸಾಮರಸ್ಯಕ್ಕೆ ಗಮನ.

- ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ವಿಶೇಷ ಆದ್ಯತೆ.
- ಕೃಷಿ, ನೀರಾವರಿ, ಮೂಲಸೌಕರ್ಯ ಸುಧಾರಣೆ ಜೊತೆಗೆ ಶಿಕ್ಷಣ ಮತ್ತು ಆರೋಗ್ಯಕ್ಕೆ ಅಗ್ರ ಪ್ರಾಶಸ್ತ್ಯ.
- ಕೋವಿಡ್-19ರಿಂದ ನಿಸ್ತೇಜಗೊಂಡ ಆರ್ಥಿಕ ಚಟುವಟಿಕೆಗಳ ವೇಗ ವರ್ಧನೆ.
- ಜಲಮೂಲ-ಜಲಕಾಯಗಳ ರಕ್ಷಣೆ ಜೊತೆಗೆ ಪರಿಣಾಮಕಾರಿ ಬಳಕೆ.
- ಪ್ರವಾಸೋದ್ಯಮ ಹಾಗೂ ಎಂ.ಎಸ್.ಎಂ.ಇ.ಗಳ ಬೆಳವಣಿಗೆಗೆ ಹೊಸ ವೇಗ.
- ಅನುತ್ಪಾದಕ ವೆಚ್ಚಗಳ ಕಡಿತ ಹಾಗೂ ಉತ್ಪಾದಕತೆಗೆ ಒತ್ತು.
- ನಾಡಿನ ನೆಲ, ಜಲ, ಭಾಷೆ, ಸಂಸ್ಕೃತಿ ಮತ್ತು ಗಡಿಗಳ ಸಂರಕ್ಷಣೆ.
- ಆತ್ಮನಿರ್ಭರ ಭಾರತದ ಬೆಳಕಿನಲ್ಲಿ ಸ್ವಾವಲಂಬಿ ಕರ್ನಾಟಕ ರೂಪಿಸುವುದು.

## ರಾಜ್ಯದ ಅರ್ಥವ್ಯವಸ್ಥೆ

15. 2020-21ನೇ ಸಾಲಿನಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗವನ್ನು ನಿಯಂತ್ರಿಸಲು ತೆಗೆದುಕೊಂಡ ಲಾಕ್‌ಡೌನ್ ಕ್ರಮಗಳಿಂದಾಗಿ ರಾಜ್ಯದ ಒಟ್ಟಾರೆ ಆಂತರಿಕ ಉತ್ಪನ್ನವು

(ಜಿ.ಎಸ್.ಡಿ.ಪಿ) ಕುಸಿತ ಕಂಡಿದೆ. ಮುಂಗಡ ಅಂದಾಜುಗಳ ಪ್ರಕಾರ ಸ್ಥಿರ ಬೆಲೆಗಳಲ್ಲಿ ರಾಜ್ಯದ ಒಟ್ಟಾರೆ ಆಂತರಿಕ ಉತ್ಪನ್ನವು 2019–20ನೇ ಸಾಲಿಗೆ ಹೋಲಿಸಿದರೆ ಶೇ. 2.6 ರಷ್ಟು ಕುಸಿತ ಕಂಡಿದೆ.

16. 2020–21ರ ಅವಧಿಯಲ್ಲಿ, ಕೋವಿಡ್–19 ಸಾಂಕ್ರಾಮಿಕ ಮತ್ತು ಉತ್ತರ ಕರ್ನಾಟಕ ಭಾಗದಲ್ಲಿ ಕಂಡುಬಂದ ಪ್ರವಾಹದ ನಡುವೆಯೂ ಕೃಷಿ ಕ್ಷೇತ್ರದಲ್ಲಿ ಶೇ. 6.4 ರಷ್ಟು ಗಣನೀಯ ಬೆಳವಣಿಗೆ ಕಂಡುಬಂದಿದೆ. ಆದರೆ ಕೈಗಾರಿಕೆ ಮತ್ತು ಸೇವಾ ವಲಯವು ಕಳೆದ ಸಾಲಿಗೆ ಹೋಲಿಸಿದರೆ ಪ್ರಸಕ್ತ ಸಾಲಿನಲ್ಲಿ ಕುಸಿತ ಕಂಡಿದೆ. 2020–21ನೇ ಸಾಲಿನಲ್ಲಿ ಕೈಗಾರಿಕೆ ವಲಯವು ಶೇ. 5.1 ರಷ್ಟು ಹಾಗೂ ಸೇವಾ ವಲಯವು ಶೇ. 3.1 ರಷ್ಟು ಇಳಿಕೆ ಕಂಡಿದೆ.

## ರಾಜ್ಯದ ಹಣಕಾಸು ಪರಿಸ್ಥಿತಿ

17. ರಾಜ್ಯ ಸರ್ಕಾರದ ರಾಜಸ್ವ ಸಂಪನ್ಮೂಲವು ರಾಜ್ಯದ ಸ್ವಂತ ತೆರಿಗೆ, ತೆರಿಗೆಯೇತರ ಸ್ವೀಕೃತಿ, ಕೇಂದ್ರದ ತೆರಿಗೆ ಪಾಲು ಮತ್ತು ಕೇಂದ್ರದ ಸಹಾಯಾನುದಾನವನ್ನು ಒಳಗೊಂಡಿರುತ್ತದೆ. ಆದರೆ, 2020–21ರಲ್ಲಿ ಕೋವಿಡ್–19 ವೈರಾಣು ಹರಡುವುದನ್ನು ತಡೆಗಟ್ಟಲು ದೇಶವ್ಯಾಪಿ ಲಾಕ್‌ಡೌನ್ ಘೋಷಿಸಲಾಗಿತ್ತು. ಲಾಕ್‌ಡೌನ್‌ನಿಂದ ಆರ್ಥಿಕ ಚಟುವಟಿಕೆಗಳು ಸಂಪೂರ್ಣ ಸ್ಥಗಿತಗೊಂಡ ಕಾರಣ ರಾಜ್ಯ ಹಾಗೂ ಕೇಂದ್ರ ಸರ್ಕಾರದ ತೆರಿಗೆ ಸಂಗ್ರಹವು ಆಯವ್ಯಯ ಅಂದಾಜಿಗಿಂತ ಕಡಿಮೆಯಾಗಿರುತ್ತದೆ. ಇದರ ಪರಿಣಾಮವಾಗಿ ರಾಜ್ಯಗಳಿಗೆ ನೀಡುವ ತೆರಿಗೆ ಪಾಲನ್ನು ಕೇಂದ್ರ ಸರ್ಕಾರದ

ಆಯವ್ಯಯದ ಪರಿಷ್ಕೃತ ಅಂದಾಜಿನಲ್ಲಿ ಕಡಿಮೆ ಮಾಡಲಾಗಿದೆ. ಇದರಿಂದ ರಾಜ್ಯದ ತೆರಿಗೆ ಪಾಲು 2020–21ನೇ ಸಾಲಿನ ಆಯವ್ಯಯದಲ್ಲಿ ಅಂದಾಜಿಸಿದ್ದ 28,591 ಕೋಟಿ ರೂ.ಗಳಿಗೆ ಎದುರಾಗಿ ಪರಿಷ್ಕೃತ ಅಂದಾಜಿನಲ್ಲಿ 20,053 ಕೋಟಿ ರೂ.ಗಳಿಗೆ ಇಳಿಕೆಯಾಗಿದೆ. ಈ ಎಲ್ಲಾ ಕಾರಣಗಳಿಂದ 2020–21ನೇ ಸಾಲಿನಲ್ಲಿ ರಾಜ್ಯದ ರಾಜಸ್ವ ಸಂಪನ್ಮೂಲವು ಆಯವ್ಯಯದ ಗುರಿಗಳನ್ನು ತಲುಪಲು ಕಷ್ಟವಾಗಿದೆ. 2021–22ನೇ ಸಾಲಿಗೆ ರಾಜ್ಯಕ್ಕೆ 24,273 ಕೋಟಿ ರೂ.ಗಳ ತೆರಿಗೆ ಪಾಲನ್ನು ನೀಡುವುದಾಗಿ ಕೇಂದ್ರ ಸರ್ಕಾರ ತನ್ನ ಆಯವ್ಯಯದಲ್ಲಿ ತಿಳಿಸಿದೆ.

18. ರಾಜ್ಯದ ಜಿ.ಎಸ್.ಟಿ ಸಂಗ್ರಹಣೆಯು ಕೋವಿಡ್–19 ಕಾರಣದಿಂದ ಇಳಿಕೆಯಾಗಿರುತ್ತದೆ. ಈ ನಷ್ಟವನ್ನು ಕೇಂದ್ರ ಸರ್ಕಾರವು ರಾಜ್ಯಕ್ಕೆ ಜಿ.ಎಸ್.ಟಿ ಪರಿಹಾರವಾಗಿ ನೀಡಬೇಕಾಗಿದೆ. ಆದರೆ, ಕೇಂದ್ರ ಸರ್ಕಾರದ ಜಿ.ಎಸ್.ಟಿ. ಪರಿಹಾರ ಉಪಕರದಲ್ಲಿನ (Compensation cess) ನಿರೀಕ್ಷಿತ ಸಂಗ್ರಹಣೆಯಿಲ್ಲದ ಕಾರಣ, ರಾಜ್ಯದ ಜಿ.ಎಸ್.ಟಿ. ನಷ್ಟ ಭರಿಸಲು ಕೇಂದ್ರ ಸರ್ಕಾರವು ಸಾಲ ಪಡೆದು ರಾಜ್ಯಗಳಿಗೆ ಹಂಚಿಕೆ ಮಾಡುವುದಾಗಿ ತಿಳಿಸಿದೆ ಹಾಗೂ ಈ ಸಾಲದ ಮರುಪಾವತಿಯನ್ನು ಜಿ.ಎಸ್.ಟಿ. ಪರಿಹಾರ ಉಪಕರದಿಂದ ಭರಿಸಲಾಗುವುದು. 2020–21ನೇ ಸಾಲಿನಲ್ಲಿ 12,407 ಕೋಟಿ ರೂ.ಗಳನ್ನು ಕೇಂದ್ರ ಸರ್ಕಾರವು ಸಾಲ ಪಡೆದು ರಾಜ್ಯಕ್ಕೆ ಜಿ.ಎಸ್.ಟಿ. ಪರಿಹಾರವಾಗಿ ನೀಡುತ್ತದೆ.

19. ಕೋವಿಡ್–19 ಕಾರಣದಿಂದಾಗಿ ಉಂಟಾಗಿರುವ ಆರ್ಥಿಕ ಸಂಕಷ್ಟವನ್ನು ಎದುರಿಸಲು ಕೇಂದ್ರ ಸರ್ಕಾರವು ರಾಜ್ಯಗಳಿಗೆ 2020–21ನೇ ಸಾಲಿನಲ್ಲಿ ಜಿ.ಎಸ್.ಡಿ.ಪಿ.ಯ ಶೇ. 5 ರವರೆಗೆ ಸಾಲ ಪಡೆಯಲು ಅನುಕೂಲ ಮಾಡಿಕೊಟ್ಟಿದೆ. ಅದರಂತೆ ನಮ್ಮ ರಾಜ್ಯವು ಈ ಸೌಲಭ್ಯವನ್ನು ಪಡೆಯಲು ವಿಧಾನ ಮಂಡಲದ ಅನುಮೋದನೆ ಪಡೆದು ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಅಧಿನಿಯಮ 2002ಕ್ಕೆ ತಿದ್ದುಪಡಿ ತಂದಿದೆ. ಆದರೆ, ಮುಂದೆ ರಾಜ್ಯದ ಆರ್ಥಿಕತೆಯ ಮೇಲೆ ಉಂಟಾಗುವ ಹೊಣೆಗಾರಿಕೆಯನ್ನು ಗಮನದಲ್ಲಿಟ್ಟುಕೊಂಡು ಪ್ರಸ್ತುತ ವರ್ಷ ರಾಜ್ಯ ಸರ್ಕಾರವು ಸಾಲವನ್ನು ಜಿ.ಎಸ್.ಡಿ.ಪಿ.ಯ ಶೇ. 4 ರೊಳಗೆ ಸೀಮಿತಗೊಳಿಸಿದೆ.

20. 15ನೇ ಹಣಕಾಸು ಆಯೋಗವು 2021–26ಕ್ಕೆ ಸಂಬಂಧಿಸಿದಂತೆ ಕೇಂದ್ರ ಹಾಗೂ ರಾಜ್ಯಗಳ ನಡುವೆ ಸಂಪನ್ಮೂಲಗಳ ಹಂಚಿಕೆಯ ಕುರಿತು ವರದಿ ನೀಡಿದೆ. 15ನೇ ಹಣಕಾಸು ಆಯೋಗವು 2020–21ರ ವರದಿಯಲ್ಲಿ ನೀಡಿದ ಹಂಚಿಕೆಯನ್ನೇ 2021–26ರ ವರದಿಯಲ್ಲೂ ಮುಂದುವರೆಸಿರುತ್ತದೆ. ಅದರಂತೆ ನಮ್ಮ ರಾಜ್ಯಕ್ಕೆ ಶೇ. 3.64 ರಷ್ಟು ತೆರಿಗೆ ಹಂಚಿಕೆಯ ಪಾಲು ಸಿಗಲಿದೆ. 15ನೇ ಹಣಕಾಸು ಆಯೋಗವು ತನ್ನ ವರದಿಯಲ್ಲಿ 2021–22ನೇ ಸಾಲಿಗೆ ನಮ್ಮ ರಾಜ್ಯಕ್ಕೆ 3,548 ಕೋಟಿ ರೂ.ಗಳ ಅನುದಾನವನ್ನು ಸ್ಥಳೀಯ ಸಂಸ್ಥೆಗಳಿಗೆ, 791 ಕೋಟಿ ರೂ.ಗಳನ್ನು ರಾಜ್ಯ ವಿಪತ್ತು ಪರಿಹಾರ ನಿಧಿಗೆ ಹಾಗೂ 1,631 ಕೋಟಿ ರೂ.ಗಳ ರಾಜಸ್ವ ಕೊರತೆ ಅನುದಾನವನ್ನು ನೀಡಿದೆ. ಇದಲ್ಲದೆ 3,000 ಕೋಟಿ ರೂ.ಗಳನ್ನು ಬೆಂಗಳೂರು ನಗರದ ಪೆರಿಫೆರಲ್ ರಿಂಗ್

ರಸ್ತೆಗಾಗಿ ಹಾಗೂ 3,000 ಕೋಟಿ ರೂ.ಗಳನ್ನು ರಾಜ್ಯದ ಕೆರೆಗಳ ಮತ್ತು ಇತರೆ ಜಲಮೂಲಗಳ ಸಮಗ್ರ ಅಭಿವೃದ್ಧಿಗಾಗಿ ಆಯೋಗವು ಶಿಫಾರಸ್ಸು ಮಾಡಿದೆ. ಬೆಂಗಳೂರು ನಗರ ತಂತ್ರಜ್ಞಾನ ಕ್ಷೇತ್ರದಲ್ಲಿ ದೇಶದಲ್ಲೇ ಮುಂಚೂಣಿಯಲ್ಲಿದ್ದು, ನಗರದ ಅಭಿವೃದ್ಧಿಗಾಗಿ ಹಣಕಾಸು ಆಯೋಗವು ನೀಡಿರುವ ಈ ಅನುದಾನವನ್ನು ಪಡೆಯಲು ಸರ್ಕಾರವು ಶ್ರಮಿಸಲಿದೆ.

21. 2020-21ನೇ ಸಾಲಿನಲ್ಲಿ ನಮ್ಮ ಸರ್ಕಾರವು ಹಲವಾರು ಸವಾಲುಗಳನ್ನು ಎದುರಿಸಿತ್ತು. ಈಗ ಚೇತರಿಕೆಯ ಹಸಿರು ಚಿಗುರುಗಳ ಸ್ಪಷ್ಟ ಚಿಹ್ನೆಗಳು ಕಾಣಿಸುತ್ತಿದ್ದರೂ 2021-22ನೇ ಸಾಲು ಕೂಡ ಹಲವಾರು ಸವಾಲುಗಳು ಎದುರಾಗಬಹುದು. ನಾವು ವರ್ಷದಿಂದ ವರ್ಷಕ್ಕೆ ತೆಗೆದುಕೊಳ್ಳುವ ಶೇ. 14 ರಷ್ಟು ನಿರೀಕ್ಷಿತ ಬೆಳವಣಿಗೆ ಮುಂದಿನ ವರ್ಷದ ರಾಜಸ್ವ ಸ್ವೀಕೃತಿಯಲ್ಲಿ ಆಗುವುದಿಲ್ಲ. ಅದೇ ರೀತಿ ಕೋವಿಡ್-19 ಅನ್ನು ನಿಭಾಯಿಸಲು ತೆಗೆದುಕೊಂಡ ಹೊಣೆಗಾರಿಕೆಗಳು 2021-22ರಲ್ಲಿ ತನ್ನದೇ ಆದ ಪರಿಣಾಮ ಬೀರುವುದರಿಂದ 2021-22ನೇ ಆಯವ್ಯಯ ತಯಾರಿಕೆ ಪ್ರಕ್ರಿಯೆಯು ಕಠಿಣವಾಯಿತು. 2021-22 ನೇ ಸಾಲಿಗೆ ಕೇಂದ್ರ ಸರ್ಕಾರವು ರಾಜ್ಯಗಳಿಗೆ ಜಿ.ಎಸ್.ಡಿ.ಪಿ.ಯ ಶೇ. 4 ರವರೆಗೆ ಸಾಲ ಪಡೆಯಲು ಅನುಮತಿಸಿದ್ದು, ಅದರಂತೆ ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಅಧಿನಿಯಮ 2002ಕ್ಕೆ ತಿದ್ದುಪಡಿ ಮಾಡಲು ಪ್ರಸ್ತುತ ಬಜೆಟ್ ಅಧಿವೇಶನದಲ್ಲಿ ತಿದ್ದುಪಡಿ ವಿಧೇಯಕವನ್ನು ಮಂಡಿಸಲಾಗುವುದು.

22. ಇಂತಹ ಕಠಿಣ ಪರಿಸ್ಥಿತಿಯಲ್ಲಿ ರಾಜ್ಯದ ಆಯವ್ಯಯವನ್ನು ರೂಪಿಸುವ ಸಂದರ್ಭ ಹಿಂದೆಂದೂ ಎದುರಾಗಿರಲಿಲ್ಲ. ಅದಾಗ್ಯೂ ಸಕಾರಾತ್ಮಕ ಚಿಂತನೆಯೊಂದಿಗೆ ಅಭಿವೃದ್ಧಿಯ ಕನಸನ್ನು ನನಸುಗೊಳಿಸುವ ಗುರಿಯೊಂದಿಗೆ ಈ ಆಯವ್ಯಯವನ್ನು ಮಂಡಿಸುತ್ತಿದ್ದೇನೆ.

## 2021–22ನೇ ಸಾಲಿನ ಹೊಸ ಘೋಷಣೆಗಳು

### ಮಹಿಳಾ ದಿನಾಚರಣೆ ವಿಶೇಷ

23. ಇಂದು ವಿಶ್ವದಾದ್ಯಂತ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಒಟ್ಟು ಜನಸಂಖ್ಯೆಯ ಅರ್ಧಭಾಗದಷ್ಟಿರುವ ಮಹಿಳೆಯರು ರಾಷ್ಟ್ರ ನಿರ್ಮಾಣ ಹಾಗೂ ಆರ್ಥಿಕ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಾಗ ಸಮೃದ್ಧಿಯ ವಾತಾವರಣ ಮೂಡುವುದು ಕಠಿಣವಲ್ಲ. ಇದರಿಂದ ಮಹಿಳೆಯರ ಆತ್ಮಬಲವೂ ವೃದ್ಧಿಯಾಗುವುದು. ಈ ಹಿನ್ನೆಲೆಯಲ್ಲಿ ಮಹಿಳೆಯರ ಸಮಾನತೆ ಮತ್ತು ಸಬಲೀಕರಣಕ್ಕೆ ನಮ್ಮ ಸರ್ಕಾರ ಬದ್ಧವಾಗಿದೆ.

24. ನಗರ ಪ್ರದೇಶದ ಉದ್ಯೋಗಸ್ಥ ಮಹಿಳೆಯರಿಗೆ ಮಕ್ಕಳ ಆರೈಕೆಗೆ ನೆರವಾಗಲು ನಮ್ಮ ಸರ್ಕಾರವು ಬೆಂಗಳೂರು ಮತ್ತು ಇತರ ಮಹಾನಗರಗಳಲ್ಲಿರುವ ಅಂಗನವಾಡಿಗಳನ್ನು ಹಂತ ಹಂತವಾಗಿ ಶಿಶುಪಾಲನಾ ಕೇಂದ್ರಗಳಾಗಿ ಉನ್ನತೀಕರಿಸಲಿದೆ.

25. ಜಿಲ್ಲಾ ಕೇಂದ್ರಗಳಲ್ಲಿ ತಲಾ ಎರಡು ಪ್ರಮುಖ ಸರ್ಕಾರಿ ಕಛೇರಿಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ತೆರೆಯುವ ಮೂಲಕ ಉದ್ಯೋಗಿಗಳಿಗೆ ಅನುಕೂಲ ಕಲ್ಪಿಸಲಾಗುವುದು.

26. ಮಹಿಳಾ ಉದ್ಯಮಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಆಸ್ಪತ್ರೆ, ವೈದ್ಯಕೀಯ ಆರೈಕೆ ಮತ್ತಿತರ ಸೇವಾ ವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಉದ್ಯಮಿಗಳಿಗೆ ಮಹಿಳಾ ಅಭಿವೃದ್ಧಿ ನಿಗಮ/ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಎರಡು ಕೋಟಿ ರೂ.ಗಳ ವರೆಗೆ ಶೇ. 4 ರ ರಿಯಾಯಿತಿ ಬಡ್ಡಿದರದಲ್ಲಿ ಸಾಲ ಸೌಲಭ್ಯ ಒದಗಿಸಲಾಗುವುದು.

27. ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ 'ಸಂಜೀವಿನಿ' ವ್ಯಾಪ್ತಿಯ ಗ್ರಾಮೀಣ ಮಹಿಳಾ ಸ್ವಸಹಾಯ ಸಂಘಗಳು ಕೇಟರಿಂಗ್, ಸ್ವಚ್ಛತಾ ಕಾರ್ಯ, ಕೋಳಿ ಸಾಕಾಣಿಕೆ, ಕುರಿ ಸಾಕಾಣಿಕೆ, ಘನ ತ್ಯಾಜ್ಯ ನಿರ್ವಹಣೆ, ಸ್ವಚ್ಛತೆ, ನಿರ್ಮಾಣ ಕಾರ್ಯ ಮತ್ತಿತರ ಕ್ಷೇತ್ರಗಳ ಆರು ಸಾವಿರ ಅತಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಲು ಪಂಚಾಯತ್ ರಾಜ್ ಸಂಸ್ಥೆಗಳ ಮೂಲಕ ಬೆಂಬಲ ನೀಡಲಾಗುವುದು. ಇದರಿಂದ 60 ಸಾವಿರ ಮಹಿಳೆಯರಿಗೆ ಸ್ವಯಂ ಉದ್ಯೋಗದ ಅವಕಾಶ ದೊರೆಯಲಿದೆ.

28. ಹಪ್ಪಳ, ಉಪ್ಪಿನಕಾಯಿ, ರೊಟ್ಟಿ, ಮಸಾಲೆಪುಡಿ ಮತ್ತಿತರ ಆಹಾರ ಪದಾರ್ಥಗಳನ್ನು ತಯಾರಿಸುವ ಮಹಿಳೆಯರ ಸಣ್ಣ ಉದ್ಯಮಗಳಿಗೆ ಆಹಾರ ಸುರಕ್ಷತೆ, ಪ್ಯಾಕೇಜಿಂಗ್, ಬ್ರಾಂಡಿಂಗ್, ರಸ್ತೆ ಬದಿ ಮಳಿಗೆಗಳ ಮತ್ತು ಆನ್‌ಲೈನ್ ಮೂಲಕ

ಮಾರುಕಟ್ಟೆ ಸಂಪರ್ಕ ಮತ್ತಿತರ ತಾಂತ್ರಿಕ ನೆರವು ನೀಡಲಾಗುವುದು. ಪ್ರತಿ ತಾಲ್ಲೂಕಿನಲ್ಲಿ 10 ರಂತೆ 2260 ಕಿರು ಉದ್ದಿಮೆಗಳ ಮೂಲಕ 25 ಸಾವಿರ ಮಹಿಳೆಯರಿಗೆ ಉತ್ತೇಜನ ನೀಡಲಾಗುವುದು.

29. ಮಹಿಳಾ ಸ್ವಸಹಾಯ ಸಂಘಗಳು ಹಾಗೂ ಮಹಿಳಾ ಉದ್ಯಮಿಗಳು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲು ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ನಗರಗಳಲ್ಲಿ ಒಂದು ವಾರದ ಅವಧಿಗೆ ವಾರ್ಷಿಕ ಮಾರಾಟ ಮೇಳ ಹಮ್ಮಿಕೊಳ್ಳಲಾಗುವುದು. ಇಳಕಲ್, ಉಡುಪಿ ಮತ್ತು ಬನಹಟ್ಟಿ ಕೈಮಗ್ಗದ ಸೀರೆಗಳು, ಚನ್ನಪಟ್ಟಣ ಮತ್ತು ಕಿನ್ನಾಳ ಆಟಿಕೆಗಳು, ನವಲಗುಂದ ಕಾರ್ಪೆಟ್ಟುಗಳು, ಗಿರಿಜನ ಮಹಿಳೆಯರು ಸಂಗ್ರಹಿಸುವ ಜೇನು, ಲಂಬಾಣಿ ಕಸೂತಿ ಮುಂತಾದ ಪಾರಂಪರಿಕ ಕರಕುಶಲ ಉತ್ಪನ್ನಗಳೂ ಸೇರಿದಂತೆ ಮಹಿಳಾ ಸ್ತ್ರೀ ಶಕ್ತಿ ಗುಂಪುಗಳ ಉತ್ಪನ್ನಗಳಿಗೆ ವ್ಯಾಪಕ ಪ್ರಚಾರ ನೀಡಿ ಜನಪ್ರಿಯಗೊಳಿಸಲು ಹಾಗೂ ಉತ್ತಮ ಬೆಲೆ ಒದಗಿಸಲು ಇ–ಮಾರುಕಟ್ಟೆ ಸೌಲಭ್ಯವನ್ನು ಜಾರಿಗೊಳಿಸಲಾಗುವುದು.

30. ಬೆಂಗಳೂರಿನಲ್ಲಿ ಗಾರ್ಮೆಂಟ್ ಉದ್ಯಮದಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿರುವ ಮಹಿಳಾ ಕಾರ್ಮಿಕರಿಗೆ ಬಿಎಂಟಿಸಿ ಹಾಗೂ ಕಾರ್ಮಿಕ ಇಲಾಖೆಗಳ ಸಹಭಾಗಿತ್ವದಲ್ಲಿ ರಿಯಾಯಿತಿ ದರದಲ್ಲಿ ಬಿಎಂಟಿಸಿ ಬಸ್ ಪಾಸ್ ನೀಡುವ 'ವನಿತಾ ಸಂಗಾತಿ' ಯೋಜನೆಯನ್ನು ಹಿಂದಿನ ವರ್ಷದ ಆಯವ್ಯಯದಲ್ಲಿ ಘೋಷಿಸಲಾಗಿದ್ದರೂ ಕೋವಿಡ್–19

ಸಾಂಕ್ರಾಮಿಕದಿಂದ ಅನುಷ್ಠಾನಗೊಳಿಸಲು ಸಾಧ್ಯವಾಗಲಿಲ್ಲ. ಆದ್ದರಿಂದ ಪ್ರಸಕ್ತ ಸಾಲಿನಲ್ಲಿ 30 ಕೋಟಿ ರೂ. ವೆಚ್ಚದಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

31. ಉದ್ಯೋಗದಲ್ಲಿ ಸಮಾನ ಅವಕಾಶ ನೀಡುವ ನಿಟ್ಟಿನಲ್ಲಿ ಮಹಿಳೆಯರು ರಾತ್ರಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸಲು ಅನುವಾಗುವಂತೆ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕಾರ್ಮಿಕ ಕಾಯಿದೆಗೆ ತಿದ್ದುಪಡಿ ಮಾಡಲಾಗಿದೆ. ಕಾನೂನು ತೊಡಕುಗಳ ಕಾರಣ ಮಹಿಳೆಯರು ಕೈಗೊಳ್ಳಲು ಸಾಧ್ಯವಾಗದ ಉದ್ಯೋಗಗಳ ಕುರಿತ ನಿಯಮಾವಳಿಗಳನ್ನು ಮರುಪರಿಶೀಲಿಸಲಾಗುವುದು.

32. ಕರ್ನಾಟಕ ಸರ್ಕಾರವು ಮಹಿಳಾ ಮತ್ತು ಮಕ್ಕಳ ಆಯವ್ಯಯ ರೂಪಿಸುವಲ್ಲಿ ಮುಂಚೂಣಿಯಲ್ಲಿದೆ. ನಮ್ಮ ಸರ್ಕಾರವು ಇನ್ನೂ ಒಂದು ಹೆಜ್ಜೆ ಮುಂದುವರೆದು ಮಹಿಳಾ ಆಯವ್ಯಯ ಮತ್ತು ಮಕ್ಕಳ ಆಯವ್ಯಯವನ್ನು ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಅಳವಡಿಸಲು ಉದ್ದೇಶಿಸಿದೆ. ಇದರಿಂದ ತಳಹಂತದಲ್ಲಿ ಲಿಂಗ ಸಮಾನತೆಯ ಕುರಿತು ಸಂವೇದನೆ ಮೂಡಿಸಲು ಸಾಧ್ಯವಾಗುವುದು.

33. ನಿರ್ಭಯಾ ಯೋಜನೆಯಡಿ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಸೇಫ್ ಸಿಟಿ ಯೋಜನೆಯನ್ನು ಚುರುಕುಗೊಳಿಸಿ, ಬೆಂಗಳೂರು ನಗರದ ಸಾರ್ವಜನಿಕ ಸ್ಥಳಗಳಲ್ಲಿ 7500 ಕ್ಯಾಮರಾಗಳನ್ನು ಅಳವಡಿಸುವ ಮೂಲಕ ಮಹಿಳೆಯರಿಗೆ ಹೆಚ್ಚಿನ ಸುರಕ್ಷತೆಯನ್ನು ಖಾತರಿಪಡಿಸಲಾಗುವುದು.

34. ರಾಜ್ಯದ ಎಲ್ಲೆಡೆ ಮಹಿಳೆಯರ ಸುರಕ್ಷತೆಯ ದೃಷ್ಟಿಯಿಂದ ರಾತ್ರಿ ಗಸ್ತನ್ನು ತಂತ್ರಜ್ಞಾನ ಆಧಾರಿತ ಇ–ಬೀಟ್ ಮೂಲಕ ತೀವ್ರಗೊಳಿಸಲಾಗುವುದು. ಇದರಿಂದ ಬೀಟ್ ವ್ಯವಸ್ಥೆ ಇನ್ನಷ್ಟು ಉತ್ತಮವಾಗಲಿದೆ.

35. ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಸೂಕ್ತ ನೆರವು ಹಾಗೂ ಮಾರ್ಗದರ್ಶನ ನೀಡಲು ನಿಮ್ಹಾನ್ಸ್ ಮತ್ತು ರಾಷ್ಟ್ರೀಯ ಕಾನೂನು ಶಾಲೆಯ ಸಹಯೋಗದೊಂದಿಗೆ ಹೊಸೂರು ರಸ್ತೆಯ ಸುಧಾರಣಾ ಸಂಸ್ಥೆಗಳ ಆವರಣದಲ್ಲಿ ಒಂದು ಉತ್ಕೃಷ್ಟತಾ ಕೇಂದ್ರವನ್ನು ಸ್ಥಾಪಿಸಲಾಗುವುದು. ಈ ಕೇಂದ್ರವು ಮಹಿಳೆಯರ ರಕ್ಷಣೆಯ ಕುರಿತ ನೀತಿ ನಿರೂಪಣೆಯಲ್ಲಿಯೂ ಸರ್ಕಾರಕ್ಕೆ ನೆರವಾಗಲಿದೆ.

36. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಲೈಸನ್ಸ್ ಪಡೆದು ಕಾರ್ಯನಿರ್ವಹಿಸುವ ಮಹಿಳೆಯರಿಗೆ ಉತ್ತೇಜನ ನೀಡಲು ಪ್ರಾಂಗಣದಲ್ಲಿನ ನಿವೇಶನ, ಗೋದಾಮು, ಅಂಗಡಿ, ಅಂಗಡಿ–ವ–ಗೋದಾಮುಗಳ ಹಂಚಿಕೆಯಲ್ಲಿ ಶೇ. 10ರಷ್ಟು ಮೀಸಲಾತಿ ಕಲ್ಪಿಸಲಾಗುವುದು.

37. ರಾಜ್ಯ ಸರ್ಕಾರದ ಮಹಿಳಾ ಉದ್ಯೋಗಿಗಳಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಒಟ್ಟು ಸೇವಾವಧಿಯಲ್ಲಿ ಆರು ತಿಂಗಳವರೆಗೆ ಮಕ್ಕಳ ಆರೈಕೆ ರಜೆಯನ್ನು ಒದಗಿಸಲಾಗುವುದು. ಆಡಳಿತ ಯಂತ್ರದ ಬಹುಮುಖ್ಯ ಭಾಗವಾಗಿರುವ ಮಹಿಳೆಯರ ಕ್ಷೇಮಾಭಿವೃದ್ಧಿಗೆ ಇದು ಪೂರಕ ಹೆಜ್ಜೆಯಾಗಲಿದ್ದು, ಮಹಿಳೆಯರ ಕಾರ್ಯಕ್ಷಮತೆಯೂ ಇದರಿಂದ ಹೆಚ್ಚಾಗಲಿದೆ.

38. ರಾಜ್ಯದಲ್ಲಿ ಮಹಿಳಾ ವಾಣಿಜ್ಯೋದ್ಯಮಿಗಳನ್ನು ಬೆಂಬಲಿಸಲು, ಐದು ಕೋಟಿ ರೂ. ವೆಚ್ಚದಲ್ಲಿ Elevate Women Entrepreneurship (Elevate WomEN) ಎಂಬ ಕಾರ್ಯಕ್ರಮವನ್ನು ಜಾರಿಗೆ ತರಲಾಗುವುದು. ಈ ಕಾರ್ಯಕ್ರಮದಡಿ ಹಣಕಾಸು ಸೌಲಭ್ಯ, ಪರಿಪೋಷಣೆ/ ವೇಗವರ್ಧನೆಯ ಬೆಂಬಲ, ಜಾಗತಿಕ ಸಂಪರ್ಕ, ಆಪ್ತ ಸಲಹೆ ನೀಡಲಾಗುವುದು.

39. ರಾಜ್ಯದ ಸ್ವ–ಸಹಾಯ ಗುಂಪುಗಳು ಮತ್ತು ಅವುಗಳ ಒಕ್ಕೂಟವನ್ನು ಬಲಪಡಿಸಲು ಸ್ವಸಹಾಯ ಗುಂಪುಗಳ ನೀತಿಯನ್ನು ರೂಪಿಸಲಾಗುವುದು. ಈ ನೀತಿಯ ಮೂಲಕ ಪ್ರಯೋಜನಗಳ ಪುನರಾವರ್ತನೆಯನ್ನು ತಪ್ಪಿಸಲು ರಾಜ್ಯದ ಎಲ್ಲ ಸ್ವ–ಸಹಾಯ ಗುಂಪುಗಳನ್ನು ಜೀವನೋಪಾಯ ಅಭಿಯಾನದಡಿ ತರಲಾಗುವುದು.

40. ನಮ್ಮ ಸರ್ಕಾರದ ಮಹಿಳಾ ಪರ ಚಿಂತನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ನೇರ ಮೇಲ್ವಿಚಾರಣೆಯಲ್ಲಿ 'ಮಹಿಳೆಯರ ರಕ್ಷಣೆ ಮತ್ತು ಸಬಲೀಕರಣ ಅಭಿಯಾನ'ವನ್ನು ಪ್ರಾರಂಭಿಸಲಾಗುವುದು. ಇದರಿಂದ ಮಹಿಳೆಯರ ಸುರಕ್ಷತೆ ಹಾಗೂ ಸಬಲೀಕರಣಕ್ಕೆ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳನ್ನು ವಿವಿಧ ಇಲಾಖೆಗಳ ಮಧ್ಯೆ ಸಮನ್ವಯವನ್ನು ಸಾಧಿಸಿ, ಜಾರಿಗೊಳಿಸಲು ಅನುಕೂಲವಾಗುವುದು.

41. ಮಹಿಳಾ ಉದ್ದೇಶಿತ ಯೋಜನೆಗಳಿಗೆ 2021–22ನೇ ಸಾಲಿನಲ್ಲಿ ಒಟ್ಟಾರೆಯಾಗಿ 37,188 ಕೋಟಿ ರೂ. ಅನುದಾನ ಒದಗಿಸಲಾಗಿದೆ.

**ಅಭಿವೃದ್ಧಿಯ ದೃಷ್ಟಿಯಿಂದ ಆಯವ್ಯಯವನ್ನು ಇಲಾಖಾವಾರು ವಿಂಗಡಿಸದೆ, ವಲಯವಾರು ವಿಂಗಡಿಸಿ ಕಳೆದ ವರ್ಷ ಮಂಡಿಸಿದ್ದೆನು. ಈ ಬಾರಿಯೂ ಇದೇ ಮಾದರಿಯಲ್ಲಿ ವಲಯವಾರು ಆಯವ್ಯಯವನ್ನು ಸದನದ ಮುಂದಿಡುತ್ತಿದ್ದೇನೆ.**

## ವಲಯ 1: ಕೃಷಿ ಮತ್ತು ಪೂರಕ ಚಟುವಟಿಕೆಗಳು

42. ಕೃಷಿಕರ ಆದಾಯವನ್ನು 2023ರ ವೇಳೆಗೆ ದ್ವಿಗುಣಗೊಳಿಸುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಕೇಂದ್ರದೊಂದಿಗೆ ಕೈಜೋಡಿಸಿ ಹಲವು ಕ್ರಮಗಳನ್ನು ಕೈಗೊಂಡಿದೆ. ಗುಣಮಟ್ಟದ ಬಿತ್ತನೆ ಬೀಜದ ಲಭ್ಯತೆ, ಬೆಳೆ ನಿರ್ವಹಣೆ, ಕೊಯ್ಲೋತ್ತರ ನಿರ್ವಹಣೆ, ಸಂಗ್ರಹಣೆ, ಸಂಸ್ಕರಣೆ, ಮಾರಾಟ ಹೀಗೆ ಪ್ರತಿ ಹಂತದಲ್ಲೂ ರೈತರಿಗೆ ಅಗತ್ಯ ಮೂಲಸೌಲಭ್ಯ ಒದಗಿಸಿ ಬೆಂಬಲ ನೀಡಲು ಸರ್ಕಾರ ಬದ್ಧವಾಗಿದೆ.

43. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ರೈತರಿಗೆ ಕೇಂದ್ರ ಸರ್ಕಾರ ವಾರ್ಷಿಕ ತಲಾ 6,000 ರೂ.ಗಳ ನೆರವು ನೀಡಿದರೆ, ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ವಾರ್ಷಿಕ ತಲಾ 4,000 ರೂ.ಗಳ ನೆರವು ನೀಡಲಾಗುತ್ತಿದೆ. ರಾಜ್ಯದಲ್ಲಿ ಇಲ್ಲಿಯವರೆಗೆ 53 ಲಕ್ಷಕ್ಕೂ ಹೆಚ್ಚು ರೈತರಿಗೆ

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಒಟ್ಟಾರೆ 7,730 ಕೋಟಿ ರೂ.ಗಳ ಆರ್ಥಿಕ ನೆರವನ್ನು ವರ್ಗಾಯಿಸಲಾಗಿದೆ. ಈ ಯೋಜನೆಯಡಿ ದೇಶದಲ್ಲಿಯೇ ಅತ್ಯಂತ ಹೆಚ್ಚು ಆಧಾರ್ ದೃಢೀಕೃತ ಮಾಹಿತಿ (ಶೇ. 97) ಹಾಗೂ ಆಧಾರ್ ಆಧಾರಿತ ನೇರ ನಗದು ವರ್ಗಾವಣೆಗಾಗಿ (ಶೇ. 90) ರಾಜ್ಯವು ಕೇಂದ್ರ ಸರ್ಕಾರದ ಪ್ರಶಸ್ತಿಗೆ ಭಾಜನವಾಗಿದೆ.

44. ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಮುಂತಾದ ಕೇಂದ್ರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ಕ್ರಮವಹಿಸಿದೆ. ಪ್ರಸಕ್ತ ಸಾಲಿನಲ್ಲಿ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಗೆ 900 ಕೋಟಿ ರೂ.ಗಳನ್ನು ಹಾಗೂ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಗೆ 831 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

45. ರಾಜ್ಯ ಸರ್ಕಾರವು ಕೃಷಿ ಉತ್ಪನ್ನಗಳಿಗೆ ಮುಕ್ತ ಮಾರುಕಟ್ಟೆ ಸೌಲಭ್ಯ ಒದಗಿಸಲು ಎಪಿಎಂಸಿ ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ. ರೈತರ ಮೇಲಿನ ಹೊರೆಯನ್ನು ಕಡಿಮೆ ಮಾಡಲು ಮಾರುಕಟ್ಟೆ ಶುಲ್ಕವನ್ನು ಶೇ. 1.5 ರಿಂದ ಶೇ. 0.60 ಗೆ ಇಳಿಸಲಾಗಿದೆ. ಇದಲ್ಲದೆ, ಕೃಷಿ ಉತ್ಪನ್ನ ಸಂಗ್ರಹಣೆ ಹಾಗೂ ಸಂಸ್ಕರಣೆಗೆ ಕೂಡ ಆದ್ಯತೆ ನೀಡಿದೆ.

46. ಜನರಿಗೆ ಆರೋಗ್ಯಕರ ಹಾಗೂ ರಾಸಾಯನಿಕ ಮುಕ್ತ ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳನ್ನು ದೊರಕಿಸಲು ಹಾಗೂ

ಸಾವಯವ ಕೃಷಿಯನ್ನು ಉತ್ತೇಜಿಸಲು 500 ಕೋಟಿ ರೂ.ಗಳ ಯೋಜನೆಯನ್ನು ರೂಪಿಸಲಾಗುವುದು.

47. ಕೃಷಿ ನವೋದ್ಯಮಗಳ ಮತ್ತು ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳ ಸ್ಥಾಪನೆಗೆ ಅವಕಾಶ ಕಲ್ಪಿಸಲು ಹಾಗೂ ಸ್ಥಳೀಯ ಉತ್ಪನ್ನಗಳ ಸಂಸ್ಕರಣೆಗೆ ಉತ್ತೇಜನ ನೀಡಲು ವಿಜಯಪುರ ಜಿಲ್ಲೆಯ ಇಟ್ಟಂಗಿಹಾಳ ಗ್ರಾಮದಲ್ಲಿ ಆತ್ಮನಿರ್ಭರ ಭಾರತ ಅಭಿಯಾನ ಯೋಜನೆಯಡಿ ಆಹಾರ ಪಾರ್ಕನ್ನು ಸ್ಥಾಪಿಸಲಾಗುವುದು.

48. ಕೃಷಿ ವಿಶ್ವವಿದ್ಯಾನಿಲಯಗಳಲ್ಲಿ ರೈತರ ಮಕ್ಕಳಿಗೆ ನೀಡುತ್ತಿರುವ ಮೀಸಲಾತಿಯನ್ನು ಶೇ.40 ರಿಂದ ಶೇ.50ಕ್ಕೆ ಹೆಚ್ಚಿಸಲಾಗುವುದು.

49. ರೈತರು ಮಿತವ್ಯಯದಲ್ಲಿ ಆಧುನಿಕ ಕೃಷಿ ಪದ್ಧತಿ ಅಳವಡಿಸಿಕೊಳ್ಳಲು ನೆರವಾಗುವಂತೆ ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಬಲಪಡಿಸಲಾಗುವುದು. ಈ ಉದ್ದೇಶಕ್ಕಾಗಿ ಅವಶ್ಯವಿರುವ ಆಧುನಿಕ ಕೃಷಿ ಹಾಗೂ ಕೊಯ್ಲೋತ್ತರ ಯಂತ್ರೋಪಕರಣಗಳನ್ನು ಒದಗಿಸಲಾಗುವುದು. ವಿವಿಧ ಕೃಷಿ ಬೆಳೆಗಳನ್ನು ಒಕ್ಕಲು ಮಾಡಲು ಕಂಬೈನ್ಡ್ ಹಾರ್ವೆಸ್ಟರ್‌ಗಳನ್ನೂ ಸಹ ಪೂರೈಸಲಾಗುವುದು.

50. ಕೃಷಿ ಯಾಂತ್ರೀಕರಣ ಯೋಜನೆಯಡಿ ಸಣ್ಣ ಟ್ರ್ಯಾಕ್ಟರ್‌ಗಳಿಗೆ ಸಹಾಯಧನ ನೀಡುತ್ತಿದ್ದು, ಇದನ್ನು 25–45 PTO HP ಟ್ರ್ಯಾಕ್ಟರ್‌ಗಳಿಗೂ ವಿಸ್ತರಿಸಲಾಗುವುದು.

51. ಸಾವಯವ ಮತ್ತು ಸಿರಿಧಾನ್ಯಗಳನ್ನು ವೈಜ್ಞಾನಿಕವಾಗಿ ಮಾರಾಟ ಮಾಡಲು ಹಾಗೂ ರೈತರಿಗೆ ಗರಿಷ್ಠ ಬೆಲೆ ದೊರಕಿಸಲು ರಾಷ್ಟ್ರೀಯ ಇ–ಮಾರುಕಟ್ಟೆ ಪ್ರೈವೇಟ್ ಲಿಮಿಟೆಡ್ ಮೂಲಕ ಅವಕಾಶ ಕಲ್ಪಿಸಲಾಗುವುದು.

52. ದ್ವಿದಳ ಧಾನ್ಯಗಳ ಉತ್ಪಾದನೆಯನ್ನು ಹೆಚ್ಚಿಸಲು ಬಿತ್ತನೆ ಬೀಜ ಹಾಗೂ ಹಸಿರೆಲೆ ಗೊಬ್ಬರ ವಿತರಣೆ ಮಾಡಿ ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ ಕಾರ್ಯಕ್ರಮವನ್ನು 75 ಕೋಟಿ ರೂ. ವೆಚ್ಚದಲ್ಲಿ ಮುಂದಿನ ಐದು ವರ್ಷಗಳಲ್ಲಿ ಅನುಷ್ಠಾನಗೊಳಿಸಲಾಗುವುದು. ಈ ಉದ್ದೇಶಕ್ಕೆ 2021–22ನೇ ಸಾಲಿನಲ್ಲಿ 10 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

53. ಆತ್ಮ ನಿರ್ಭರ ಭಾರತ ಅಭಿಯಾನದ ಅಡಿಯಲ್ಲಿ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣೆ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ ಹಾಗೂ ಇತರ ಕಾರ್ಯಕ್ರಮಗಳಡಿಯಲ್ಲಿ ಶೇ. 35ರಷ್ಟು ಸಹಾಯಧನವನ್ನು ವಿವಿಧ ಚಟುವಟಿಕೆಗಳಾದ ಶೀತಲಗೃಹ ನಿರ್ಮಾಣ, ಕೊಯ್ಲೋತ್ತರ ನಿರ್ವಹಣೆ ಮತ್ತು ಸಂಸ್ಕರಣಾ ಘಟಕಗಳ ಸ್ಥಾಪನೆಗೆ ನೀಡಲಾಗುತ್ತಿದೆ. ಈ ಸಹಾಯಧನವನ್ನು ಶೇ.50ಕ್ಕೆ ಹೆಚ್ಚಿಸಲು ರಾಜ್ಯ ಸರ್ಕಾರವು ಶೇ.15ರಷ್ಟು ಹೆಚ್ಚುವರಿ ಸಹಾಯಧನ ನೀಡಲಿದೆ. ಈ ಯೋಜನೆಗೆ 50 ಕೋಟಿ ರೂ. ಗಳನ್ನು ಹಂಚಿಕೆ ಮಾಡಲಾಗುವುದು.

54. ಅತ್ಯುತ್ತಮ ತರಬೇತಿ, ನೂತನ ಆವಿಷ್ಕಾರಗಳು ಹಾಗೂ ತಂತ್ರಜ್ಞಾನಗಳನ್ನು ಪರಿಚಯಿಸುವ ಮೂಲಕ ತೋಟಗಾರಿಕಾ

ಬೆಳೆಗಾರರ ಆರ್ಥಿಕ ಅಭಿವೃದ್ಧಿಗೆ ನೆರವು ನೀಡಲು ಕೊಪ್ಪಳ ಜಿಲ್ಲೆಯ ಸಿರಿವಾರ ಗ್ರಾಮದಲ್ಲಿ ತೋಟಗಾರಿಕೆ ತಂತ್ರಜ್ಞಾನ ಪಾರ್ಕ್ ಅನ್ನು ಅಭಿವೃದ್ಧಿಪಡಿಸಲಾಗುವುದು.

55. ವಿನೂತನ ತಂತ್ರಜ್ಞಾನ, ಹೊಸ ಬೆಳೆ ತಳಿಗಳು, ಉತ್ತಮ ನಿರ್ವಹಣಾ ಪದ್ಧತಿಗಳನ್ನು ರೈತರಿಗೆ ಪರಿಚಯಿಸಲು ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ (I.I.H.R) ಮತ್ತು ರಾಜ್ಯದ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯಗಳ ಸಹಯೋಗದೊಂದಿಗೆ ಪ್ರಾತ್ಯಕ್ಷಿಕಾ ಕ್ಷೇತ್ರಗಳನ್ನು ಅಭಿವೃದ್ಧಿಪಡಿಸಲಾಗುವುದು.

56. ರೈತ ಉತ್ಪಾದಕರ ಸಂಸ್ಥೆಗಳು ಮಾರಾಟ ಮಾಡುವ ತೋಟಗಾರಿಕೆ ಉತ್ಪನ್ನಗಳಿಗೆ ಏಕರೂಪದ ಬ್ರಾಂಡಿಂಗ್ ಮತ್ತು ಮಾರುಕಟ್ಟೆ ಸೌಲಭ್ಯಗಳನ್ನು ಒದಗಿಸಿ 'ಬ್ರಾಂಡ್ ವ್ಯಾಲ್ಯೂ' ಹೆಚ್ಚಿಸಲಾಗುವುದು. ರೈತ ಉತ್ಪಾದಕರ ಸಂಸ್ಥೆಗಳ ತೋಟಗಾರಿಕೆ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ, ಸಂಪರ್ಕ ಮತ್ತು ಪ್ರಚಾರಕ್ಕಾಗಿ ಏಕೀಕೃತ ಮಾರುಕಟ್ಟೆ ವೇದಿಕೆ ಕಲ್ಪಿಸಿ ತಂತ್ರಜ್ಞಾನ ಅಳವಡಿಕೆಯನ್ನು ಉತ್ತೇಜಿಸಲಾಗುವುದು.

57. ಸಣ್ಣ ಮತ್ತು ಅತೀ ಸಣ್ಣ ಹಿಡುವಳಿದಾರರು ಕಡಿಮೆ ಜಮೀನಿನಲ್ಲಿ ಕೃಷಿ, ತೋಟಗಾರಿಕೆ ಮತ್ತಿತರ ಉಪಕಸುಬುಗಳನ್ನು ಕೈಗೊಳ್ಳುವ ಮೂಲಕ ಸುಸ್ಥಿರವಾಗಿ ವರ್ಷವಿಡೀ ವರಮಾನ ಪಡೆಯಲು 'ಸಮಗ್ರ ಕೃಷಿ ಪದ್ಧತಿ' ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದು.

58. ರೈತರಿಗೆ ಉತ್ತಮ ಗುಣಮಟ್ಟದ ಹೈಬ್ರಿಡ್ ಬೀಜ ಮತ್ತು ಬೀಜ ತಂತ್ರಜ್ಞಾನವನ್ನು ಸುಲಭವಾಗಿ ಒದಗಿಸಲು, ಅವುಗಳ

ಉತ್ಪಾದಕತೆ, ಲಾಭದಾಯಕತೆ ಮತ್ತು ಜನಪ್ರಿಯತೆಯನ್ನು ಹೆಚ್ಚಿಸಲು ಹೊಸ ಹೈಬ್ರಿಡ್ ಬೀಜ ನೀತಿಯನ್ನು ರೂಪಿಸಲಾಗುವುದು.

59. ಚಿಕ್ಕಮಗಳೂರು, ದಕ್ಷಿಣ ಕನ್ನಡ, ಶಿವಮೊಗ್ಗ, ಕೊಡಗು ಜಿಲ್ಲೆಯ ಅಡಿಕೆ ಬೆಳೆಗಾರರನ್ನು ತೀವ್ರವಾಗಿ ಬಾಧಿಸುತ್ತಿರುವ ಹಳದಿ ಎಲೆ ರೋಗದ ಕುರಿತು ಸಂಶೋಧನೆ ತೀವ್ರಗೊಳಿಸಲು ಹಾಗೂ ಪರ್ಯಾಯ ಬೆಳೆಯನ್ನು ಪ್ರೋತ್ಸಾಹಿಸಲು 25 ಕೋಟಿ ರೂ.ಗಳಲ್ಲಿ ಕಾರ್ಯಕ್ರಮವನ್ನು ಯೋಜಿಸಲಾಗುವುದು.

60. ರಾಜ್ಯದಾದ್ಯಂತ ಸುವಾಸನೆಯುಕ್ತ ಮತ್ತು ವೈದ್ಯಕೀಯ ಗಿಡಗಳು, ಹಣ್ಣು ಹಂಪಲು, ತರಕಾರಿಗಳು ಮತ್ತು ಸಂಬಾರ ಪದಾರ್ಥಗಳಿಗಾಗಿ ಹೊಸ ಕೃಷಿ ರಫ್ತು ವಲಯ ಸ್ಥಾಪಿಸಲಾಗುವುದು. ಈ ಉತ್ಪನ್ನಗಳ ರಫ್ತಿಗೆ ಅನುವಾಗುವಂತೆ ರಾಜ್ಯದ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುವುದು.

61. ದ್ರಾಕ್ಷಿ ಬೆಳೆಯ ಮೌಲ್ಯವರ್ಧನೆ, ಬ್ರಾಂಡಿಂಗ್ ಹಾಗೂ ಮಾರ್ಕೆಟಿಂಗ್ ಕ್ಷೇತ್ರಗಳ ಉನ್ನತೀಕರಣವನ್ನು ಒಳಗೊಂಡಂತೆ ದ್ರಾಕ್ಷಿ ಕೃಷಿಯನ್ನು ಪ್ರೋತ್ಸಾಹಿಸಲು ಕರ್ನಾಟಕ ದ್ರಾಕ್ಷಾರಸ ಮಂಡಳಿಯನ್ನು ಕರ್ನಾಟಕ ದ್ರಾಕ್ಷಿ ಹಾಗೂ ದ್ರಾಕ್ಷಾರಸ ಮಂಡಳಿಯನ್ನಾಗಿ ಪುನರ್ ರಚಿಸಲಾಗುವುದು.

62. ನಮ್ಮ ಸರ್ಕಾರವು ಓಕಳೀಪುರಂನಲ್ಲಿ ರೇಷ್ಮೆ ಇಲಾಖೆಗೆ ಸೇರಿದ ಜಮೀನಿನಲ್ಲಿ ಇಲಾಖೆಯ ಎಲ್ಲಾ ಕಛೇರಿಗಳು, ಸಂಬಂಧಿತ ಸಂಸ್ಥೆಗಳು ಹಾಗೂ ವಾಣಿಜ್ಯ ಮಳಿಗೆಗಳಿಗೆ

ಸ್ಥಳಾವಕಾಶ ಕಲ್ಪಿಸಲು ಖಾಸಗಿ ಸಹಭಾಗಿತ್ವದಲ್ಲಿ 150 ಕೋಟಿ ರೂ.ಗಳ ವೆಚ್ಚದಲ್ಲಿ ರೇಷ್ಮೆ ಭವನವನ್ನು ನಿರ್ಮಿಸಲಿದೆ.

63. ರಾಮನಗರದಲ್ಲಿ ಅತ್ಯಾಧುನಿಕ ಸೌಲಭ್ಯಗಳನ್ನು ಒಳಗೊಂಡ ಹೈ–ಟೆಕ್ ರೇಷ್ಮೆಗೂಡು ಮಾರುಕಟ್ಟೆಯನ್ನು ರೇಷ್ಮೆ ಭಾಗೀದಾರರ ಹಿತಕ್ಕಾಗಿ ನಬಾರ್ಡ್ ಸಹಾಯದೊಂದಿಗೆ 75 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುವುದು.

64. ರಾಜ್ಯದಲ್ಲಿ ಗೋ ಸಂಪತ್ತಿನ ರಕ್ಷಣೆಗಾಗಿ ಗೋಹತ್ಯಾ ನಿಷೇಧ ಕಾಯ್ದೆ ಜಾರಿಗೆ ತರಲಾಗಿದೆ. ಇದಕ್ಕೆ ಪೂರಕವಾಗಿ ಗೋಹತ್ಯೆ ತಡೆಯಲು ಹಾಗೂ ಜಾನುವಾರುಗಳನ್ನು ಸಂರಕ್ಷಿಸಲು ಪ್ರತಿ ಜಿಲ್ಲೆಗೆ ಒಂದರಂತೆ ಗೋಶಾಲೆ ಸ್ಥಾಪಿಸಲಾಗುವುದು.

65. ದೇಶಿಯ ಜಾನುವಾರುಗಳ, ಕುರಿ/ಮೇಕೆ ತಳಿಗಳ ಮತ್ತು ಕುಕ್ಕುಟ ತಳಿಗಳ ಶಾಶ್ವತ ಪ್ರದರ್ಶನ ಮತ್ತು ಪ್ರಾತ್ಯಕ್ಷಿಕೆಯೊಂದಿಗೆ ಮಾಹಿತಿ ಹಾಗೂ ತರಬೇತಿ ನೀಡಲು **'ಥೀಮ್ ಪಾರ್ಕ್'** ಅನ್ನು ಬೆಂಗಳೂರಿನ ಹೆಸರಘಟ್ಟದ 100 ಎಕರೆ ಪ್ರದೇಶದಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

66. ರಾಜ್ಯದಲ್ಲಿ ಹೆಚ್ಚಿನ ಮಾಂಸ ಉತ್ಪಾದನೆ ಮತ್ತು ಅಧಿಕ ಮರಿಗಳನ್ನು ನೀಡುವ ಉತ್ತಮ ನಂದಿದುರ್ಗ ಮೇಕೆ ತಳಿಗಳ ಅಭಿವೃದ್ಧಿ ಮಾಡಿ ಉತ್ಕೃಷ್ಟ ದರ್ಜೆಯ ಹೋತಗಳನ್ನು ರೈತರಿಗೆ ವಿತರಿಸಲು ಒಂದು ಕೋಟಿ ರೂ. ಅನುದಾನವನ್ನು ನೀಡಲಾಗುವುದು.

67. ಹೊರರಾಜ್ಯದ ದೇಶಿ ತಳಿಗಳಾದ ಗಿರ್, ಸಾಹಿವಾಲ್, ಒಂಗೋಲ್, ಥಾರ್‌ಪಾರ್ಕರ್ ಮತ್ತು ದೇವಣಿ ತಳಿಗಳನ್ನು ಅಭಿವೃದ್ಧಿಪಡಿಸಿ ರಾಜ್ಯದ ರೈತರಿಗೆ ಪರಿಚಯಿಸಲು 'ಸಮಗ್ರ ಗೋಸಂಕುಲ ಸಮೃದ್ಧಿ' ಯೋಜನೆಯನ್ನು ಜಾರಿಗೊಳಿಸಲಾಗುವುದು.

68. ಕೊಪ್ಪಳದಲ್ಲಿ ನಾರಿ ಸುವರ್ಣ ಕುರಿ ತಳಿಯ ಸಂವರ್ಧನಾ ಕೇಂದ್ರವನ್ನು ಸ್ಥಾಪಿಸಲಾಗುವುದು.

69. ಆಕಸ್ಮಿಕ ಮರಣ ಹೊಂದುವ ಕುರಿ ಮತ್ತು ಮೇಕೆಗಳಿಗೆ ಪರಿಹಾರ ಧನ ನೀಡುವ 'ಅನುಗ್ರಹ ಕೊಡುಗೆ' ಕಾರ್ಯಕ್ರಮವನ್ನು ಮುಂದುವರೆಸಲಾಗುವುದು.

70. ಪಶುವೈದ್ಯಕೀಯ ವಿಜ್ಞಾನದಲ್ಲಿ ಆಯುರ್ವೇದ ಔಷಧಿಗಳ ಅಳವಡಿಕೆಯನ್ನು ಉತ್ತೇಜಿಸಲು ಶಿವಮೊಗ್ಗದ ಪಶುವೈದ್ಯಕೀಯ ಕಾಲೇಜಿನಲ್ಲಿ ಹೊಸದಾಗಿ ಒಂದು ಸಂಶೋಧನಾ ಕೇಂದ್ರವನ್ನು ಎರಡು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

71. 2015-16 ರಿಂದ ಯಾಂತ್ರೀಕೃತ ದೋಣಿಗಳಿಗೆ 1.5 ಲಕ್ಷ ಕಿಲೋಲೀಟರ್ ಡೀಸೆಲ್ ಮೇಲಿನ ಮಾರಾಟ ಕರವನ್ನು ಮರುಪಾವತಿಸಲಾಗುತ್ತಿತ್ತು. ಈ ಪ್ರಕ್ರಿಯೆಯನ್ನು ಮತ್ತಷ್ಟು ಜನಸ್ನೇಹಿಯನ್ನಾಗಿಸಲು 2021-22ನೇ ಸಾಲಿನಿಂದ ಡೀಸೆಲ್ ಡೆಲಿವರಿ ಪಾಯಿಂಟ್‌ನಲ್ಲಿಯೇ ಕರರಹಿತ ದರದಲ್ಲಿ ಡೀಸೆಲ್ ಅನ್ನು ವಿತರಿಸಲಾಗುವುದು.

72. 2020-21ನೇ ಸಾಲಿನಲ್ಲಿ 'ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆ' ಯಡಿ ರಾಜ್ಯದ 137 ಕೋಟಿ ರೂ.ಗಳ

ಯೋಜನೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದ್ದು, 2021–22ನೇ ಸಾಲಿನಲ್ಲಿ 376 ಕೋಟಿ ರೂ.ಗಳ ಕ್ರಿಯಾ ಯೋಜನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಈ ಉದ್ದೇಶಕ್ಕೆ 2021–22ನೇ ಸಾಲಿನಲ್ಲಿ 62 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

73. ರಾಜ್ಯದ 16 ಮೀನುಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣಕ್ಕೆ ಪ್ರಸಕ್ತ ಸಾಲಿನಲ್ಲಿ ಎರಡು ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

74. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆಯನ್ನು ಹೊಂದಿರುವ ಪಂಗೇಸಿಯಸ್ ತಿಲಾಪಿಯಾ ಮೀನುಗಳನ್ನು ಫಿಲೆಟ್ಸ್ ಮತ್ತು ಶೀತಲೀಕೃತ ಉತ್ಪನ್ನಗಳಾಗಿ ಸಂಸ್ಕರಣೆಗೊಳಿಸಲು ಆಧುನಿಕ ಸಂಸ್ಕರಣಾ ಮತ್ತು ಮೌಲ್ಯವರ್ಧನಾ ಕೇಂದ್ರವನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ವತಿಯಿಂದ ಆರು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

75. ರಾಜ್ಯದಲ್ಲಿ ಮೀನಿನ ಮಾರಾಟವನ್ನು ಉತ್ತೇಜಿಸಲು ಹಾಗೂ ಮೀನಿನ ವಿವಿಧ ಪ್ರಭೇದಗಳ ಕುರಿತು ಅರಿವು ಮೂಡಿಸಲು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ವತಿಯಿಂದ ಮೀನು ಮಾರಾಟ ಘಟಕಗಳು ಹಾಗೂ ಮತ್ಸ್ಯ ದರ್ಶಿನಿಗಳನ್ನು 30 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

76. ರೈತರು ಉತ್ಪಾದಿಸಿದ ಕೃಷಿ ಉತ್ಪನ್ನಗಳನ್ನು ಕರ್ನಾಟಕ ರಾಜ್ಯ ಉಗ್ರಾಣ ನಿಗಮ, ಪ್ರಾಥಮಿಕ ಕೃಷಿ ಪತ್ತಿನ ಸಂಘಗಳು

(PACS), ಟಿ.ಎ.ಪಿ.ಸಿ.ಎಂ.ಎಸ್ ಹಾಗೂ ಇತರೆ ಸಹಕಾರ ಸಂಸ್ಥೆಗಳು ಹೊಂದಿರುವ ಗೋದಾಮುಗಳಲ್ಲಿ ಸಂಗ್ರಹಿಸಿಡಲು ರೈತರು ಪಾವತಿಸುವ ಸಂಗ್ರಹಣಾ ಶುಲ್ಕದಲ್ಲಿ ಶೇ.25ರಷ್ಟು ಸಹಾಯಧನವನ್ನು ಸರ್ಕಾರದ ವತಿಯಿಂದ ಒದಗಿಸಲಾಗುವುದು. ಈ ಉದ್ದೇಶಕ್ಕಾಗಿ 25 ಕೋಟಿ ರೂ. ಅನುದಾನ ನಿಗದಿಪಡಿಸಲಾಗಿದೆ.

77. ರಾಜ್ಯದ ಪ್ರಾಥಮಿಕ ಕೃಷಿ ಪತ್ತಿನ ಸಂಘಗಳು (PACS) ಹಾಗೂ ಟಿ.ಎ.ಪಿ.ಸಿ.ಎಂ.ಎಸ್.ಗಳು, ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಶೇಖರಣೆ ಮಾಡಿ ಇದರ ಮೇಲೆ ಮಾರುಕಟ್ಟೆ ಬೆಲೆಯ ಶೇ.60ರಷ್ಟು ಅಡಮಾನ ಸಾಲವನ್ನು ಶೇ.11ರ ಬಡ್ಡಿ ದರದಲ್ಲಿ ವಿತರಿಸುತ್ತಿವೆ. ಸದರಿ ಸಾಲಗಳ ಮೇಲೆ ಗರಿಷ್ಠ ಆರು ತಿಂಗಳ ಅವಧಿಗೆ ಶೇ.4ರ ಬಡ್ಡಿ ಸಹಾಯಧನವನ್ನು ರಾಜ್ಯ ಸರ್ಕಾರವು ನೀಡಲು ಐದು ಕೋಟಿ ರೂ.ಗಳನ್ನು ಆಯವ್ಯಯದಲ್ಲಿ ಪ್ರಸ್ತಾಪಿಸಲಾಗಿದೆ.

78. ರಾಜ್ಯದಲ್ಲಿ 5500 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಅವುಗಳನ್ನು 198 ಕೋಟಿ ರೂ. ವೆಚ್ಚದಲ್ಲಿ ಗಣಕೀಕರಣಗೊಳಿಸಲಾಗುವುದು.

79. ಡಿಸಿಸಿ ಬ್ಯಾಂಕಿನಲ್ಲಿ ಸರ್ಕಾರದ ಸಹಭಾಗಿತ್ವವನ್ನು ಪ್ರೋತ್ಸಾಹಿಸಲು ಹಾಗೂ ಷೇರು ಬಂಡವಾಳ ಹೆಚ್ಚಿಸುವ ಉದ್ದೇಶದಿಂದ 21 ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಿಗೆ 10 ಲಕ್ಷ ರೂ.ಗಳ ಗರಿಷ್ಠ ಮಿತಿಗೊಳಪಟ್ಟು ಶೇ. 25ರಷ್ಟು ಷೇರು ಬಂಡವಾಳ ನೀಡಲಾಗುವುದು.

80. ಯಶವಂತಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವತಿಯಿಂದ ಬೈಯಪ್ಪನಹಳ್ಳಿಯ 8 ಎಕರೆ ಜಮೀನಿನಲ್ಲಿ 50 ಕೋಟಿ ರೂ.ಗಳ ವೆಚ್ಚದಲ್ಲಿ ಸುಸಜ್ಜಿತ ಹೂವಿನ ಮಾರುಕಟ್ಟೆ ನಿರ್ಮಿಸಲಾಗುವುದು.

81. ಸಿಂಗೇನ ಅಗ್ರಹಾರದ ಹಣ್ಣು ಮಾರುಕಟ್ಟೆಗೆ ಹೊಂದಿಕೊಂಡಿರುವ ಗುಳಿಮಂಗಳ ಗ್ರಾಮದ 42 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕ ತರಕಾರಿ ಮಾರುಕಟ್ಟೆಯನ್ನು ನಿರ್ಮಿಸಲಾಗುವುದು.

82. ಬಳ್ಳಾರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಆಲದಹಳ್ಳಿ ಗ್ರಾಮದಲ್ಲಿ ಅತ್ಯಾಧುನಿಕ ಸೌಲಭ್ಯಗಳುಳ್ಳ ಒಣಮೆಣಸಿನಕಾಯಿ ಮಾರುಕಟ್ಟೆಯನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

83. ಚಾಮರಾಜನಗರದಲ್ಲಿ ಅರಿಶಿನ ಮಾರುಕಟ್ಟೆಯನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರವಾಗಿ ಅಭಿವೃದ್ಧಿಪಡಿಸಲಾಗುವುದು.

84. ಮೆಣಸಿನಕಾಯಿ ಬೆಳೆಯುವ ರೈತರಿಗೆ ಸ್ಪರ್ಧಾತ್ಮಕ ದರ ಒದಗಿಸಲು ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ 'ಆಧುನಿಕ ಗುಣವಿಶ್ಲೇಷಣಾ ಘಟಕ' ವನ್ನು ನಾಲ್ಕು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

85. ಮಹದಾಯಿ ನ್ಯಾಯಾಧಿಕರಣದ ತೀರ್ಪಿನನ್ವಯ ರಾಜ್ಯದ ಕಳಸಾ ಮತ್ತು ಬಂಡೂರಿ ನಾಲಾ ತಿರುವು ಯೋಜನೆಗಳಿಗೆ ಹಂಚಿಕೆಯಾದ ನೀರಿನ ಬಳಕೆಗೆ ಒಟ್ಟು 1677 ಕೋಟಿ ರೂ. ಮೊತ್ತದ ಯೋಜನಾ ವರದಿಗಳಿಗೆ ಆಡಳಿತಾತ್ಮಕ

ಅನುಮೋದನೆ ನೀಡಲಾಗಿದೆ. ಯೋಜನೆಗಳಿಗೆ ಕೇಂದ್ರ ಸರ್ಕಾರದ ಸಕ್ಷಮ ಪ್ರಾಧಿಕಾರಗಳ ಅನುಮೋದನೆ ಪಡೆಯವುದರೊಂದಿಗೆ ಆದ್ಯತೆ ಮೇರೆಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರಸಕ್ತ ಸಾಲಿನಲ್ಲಿ ಅಗತ್ಯ ಅನುದಾನ ಒದಗಿಸಲಾಗುವುದು.

86. ಭದ್ರಾ ಮೇಲ್ದಂಡೆ ಯೋಜನೆಯ 21,474 ಕೋಟಿ ರೂ.ಗಳ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ. ಈ ಯೋಜನೆಯನ್ನು 'ರಾಷ್ಟ್ರೀಯ ಯೋಜನೆ' ಎಂದು ಘೋಷಿಸುವ ಪ್ರಸ್ತಾವನೆಯು ಕೇಂದ್ರ ಸರ್ಕಾರದ Investment Clearance ಪಡೆಯುವ ಹಂತದಲ್ಲಿರುತ್ತದೆ. ಕೇಂದ್ರದ ನೆರವಿನೊಂದಿಗೆ ಈ ಯೋಜನೆಯನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು. ಇದರಿಂದ ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ ಹಾಗೂ ತುಮಕೂರು ಜಿಲ್ಲೆಗಳ ರೈತರಿಗೆ ಅನುಕೂಲವಾಗುತ್ತದೆ.

87. ಉತ್ತರ ಕರ್ನಾಟಕದ ಆರು ಲಕ್ಷ ಹೆಕ್ಟೇರ್ ಅಚ್ಚುಕಟ್ಟು ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಒದಗಿಸುವ ಗುರಿ ಹೊಂದಿರುವ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ನ್ನು ಅಗತ್ಯವಿರುವ ಸಂಪನ್ಮೂಲಗಳನ್ನು ಒದಗಿಸಿ ಯಶಸ್ವಿಯಾಗಿ ಅನುಷ್ಠಾನಗೊಳಿಸುವುದು ನಮ್ಮ ಸರ್ಕಾರದ ಸಂಕಲ್ಪವಾಗಿರುತ್ತದೆ. ಈ ನಿಟ್ಟಿನಲ್ಲಿ ಕೃಷ್ಣಾ ನ್ಯಾಯಾಧೀಕರಣ–2ರ ಅಂತಿಮ ತೀರ್ಪಿನ ಗೆಜೆಟ್ ಅಧಿಸೂಚನೆಯನ್ನು ಹೊರಡಿಸಲು, ಹಾಗೂ ಈ ಯೋಜನೆಗೆ

'ರಾಷ್ಟ್ರೀಯ ಯೋಜನೆ' ಮಾನ್ಯತೆ ಪಡೆಯಲು ನಮ್ಮ ಸರ್ಕಾರ ಶ್ರಮಿಸುತ್ತಿದೆ. ಕೇಂದ್ರ ಸರ್ಕಾರದ ನೆರವಿನೊಂದಿಗೆ ಈ ಯೋಜನೆಯನ್ನು ಶೀಘ್ರಗತಿಯಲ್ಲಿ ಅನುಷ್ಠಾನಗೊಳಿಸಲು ಆದ್ಯತೆ ನೀಡಲಾಗುವುದು. ನೀರಾವರಿ ಕಾಮಗಾರಿಗಳ ಅನುಷ್ಠಾನಕ್ಕಾಗಿ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತಕ್ಕೆ 5600 ಕೋಟಿ ರೂ. ಅನುದಾನ ಒದಗಿಸಲಾಗುವುದು.

88. ಎತ್ತಿನಹೊಳೆ ಸಮಗ್ರ ಕುಡಿಯುವ ನೀರು ಯೋಜನೆಯ ಪ್ರಥಮ ಹಂತದ ಏತ ನೀರಾವರಿ ಕಾಮಗಾರಿಗಳು ಮುಕ್ತಾಯದ ಹಂತದಲ್ಲಿದ್ದು, ಭೈರಗೊಂಡ್ಲು ಜಲಾಶಯ ನಿರ್ಮಾಣಕ್ಕೆ ಅಡ್ಡಿಯಾಗಿರುವ ಭೂಸ್ವಾಧೀನ ಸಮಸ್ಯೆಗಳನ್ನು ನಿವಾರಿಸಿ, ಕಾಮಗಾರಿಗಳನ್ನು ಪೂರ್ಣಗೊಳಿಸಲು ಆದ್ಯತೆ ನೀಡಲಾಗುವುದು.

89. ಬೇಡ್ತಿ–ವರದಾ ನದಿ ಜೋಡಣೆ ಯೋಜನೆಯಡಿ ಒಟ್ಟು 22 ಟಿ.ಎಂ.ಸಿ. ನೀರನ್ನು ಬಳಸಿಕೊಳ್ಳಲು ವಿವರವಾದ ಯೋಜನಾ ವರದಿಯನ್ನು NWDA ಸಿದ್ಧಪಡಿಸುತ್ತಿದೆ. ಸದರಿ ಯೋಜನೆಯಿಂದ ಲಭ್ಯವಾಗುವ ನೀರಿನ ಸದ್ಬಳಕೆಗಾಗಿ ತಾಂತ್ರಿಕ ಸಾಧ್ಯಾ–ಸಾಧ್ಯತೆಗನುಗುಣವಾಗಿ ಯೋಜನೆಗಳನ್ನು ರೂಪಿಸಲಾಗುವುದು. ಇದರಿಂದ ಉತ್ತರ ಕರ್ನಾಟಕದ ಬರಪೀಡಿತ ಜಿಲ್ಲೆಗಳಿಗೆ ಶಾಶ್ವತ ನೀರು ಸರಬರಾಜಿಗೆ ಅವಕಾಶವಾಗುತ್ತದೆ.

90. ತುಂಗಭದ್ರಾ ಜಲಾಶಯದಲ್ಲಿ ಹೂಳು ತುಂಬಿ ನೀರಿನ ಸಂಗ್ರಹಣೆಯಲ್ಲಿ ಉಂಟಾಗಿರುವ ಕೊರತೆಯನ್ನು ಸರಿದೂಗಿಸಲು ಕೊಪ್ಪಳ ಜಿಲ್ಲೆಯ ನವಲಿ ಬಳಿ

ಸಮಾನಾಂತರ ಜಲಾಶಯ ನಿರ್ಮಿಸುವ ಕುರಿತು ಈಗಾಗಲೇ ಘೋಷಿಸಿದಂತೆ ವಿವರವಾದ ಯೋಜನಾ ವರದಿ ತಯಾರಿ ಕಾರ್ಯ ಕೈಗೊಂಡಿದ್ದು, ಯೋಜನಾ ಸರ್ವೇ ಕಾರ್ಯ ಪ್ರಗತಿಯಲ್ಲಿರುತ್ತದೆ. ಈ ಬಗ್ಗೆ ತೆಲಂಗಾಣ ಮತ್ತು ಆಂಧ್ರಪ್ರದೇಶ ರಾಜ್ಯಗಳೊಂದಿಗೆ ಸಮಾಲೋಚಿಸಿ ಸೂಕ್ತ ಸಹಮತಿಯೊಂದಿಗೆ ಶೀಘ್ರವಾಗಿ ಕಾರ್ಯಾನುಷ್ಠಾನ ಮಾಡಲಾಗುವುದು.

91. ವಿಶ್ವ ಬ್ಯಾಂಕ್ ನೆರವಿನ ಡ್ರಿಪ್ (DRIP) ಯೋಜನೆಯಡಿ 1500 ಕೋಟಿ ರೂ. ಮೊತ್ತದಲ್ಲಿ ರಾಜ್ಯದ 58 ಅಣೆಕಟ್ಟುಗಳ ಪುನಶ್ಚೇತನ ಮತ್ತು ಅಭಿವೃದ್ಧಿಯನ್ನು ಪ್ರಸ್ತಾಪಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಯೋಜನೆಯ ಅನುಷ್ಠಾನಕ್ಕೆ ಆದ್ಯತೆ ನೀಡಲಾಗುವುದು.

92. ಜಲ ಸಂಪನ್ಮೂಲ ಇಲಾಖೆಯಡಿ ಅನುಷ್ಠಾನಗೊಂಡಿರುವ ಮತ್ತು ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಏತ ನೀರಾವರಿ ಯೋಜನೆಗಳ ವ್ಯವಸ್ಥಿತ ಕಾರ್ಯಾಚರಣೆ ಮತ್ತು ನಿರ್ವಹಣೆಗಾಗಿ ಸೂಕ್ತ ಮಾರ್ಗಸೂಚಿಗಳೊಂದಿಗೆ ಕಾರ್ಯನೀತಿಯನ್ನು ರೂಪಿಸಲಾಗುವುದು.

93. ಜಲಸಂಪನ್ಮೂಲ ಇಲಾಖೆಯಡಿ ಐದು ಲಕ್ಷ ಹೆಕ್ಟೇರ್‌ಗೂ ಅಧಿಕ ಅಚ್ಚುಕಟ್ಟು ಪ್ರದೇಶಗಳಿಗೆ ಸೂಕ್ಷ್ಮ ಮತ್ತು ತುಂತುರು ನೀರಾವರಿ ಯೋಜನೆಗಳನ್ನು ಕೈಗೆತ್ತಿಕೊಂಡಿದ್ದು ಸದರಿ ಯೋಜನೆಗಳನ್ನು ವ್ಯವಸ್ಥಿತವಾಗಿ ಅನುಷ್ಠಾನಗೊಳಿಸಲಾಗುವುದು.

94. ಬೆಂಗಳೂರು ನಗರದ ವೃಷಭಾವತಿ ಕಣಿವೆಯಿಂದ ದ್ವಿತೀಯ ಹಂತಕ್ಕೆ ಸಂಸ್ಕರಿಸಿದ 308 ಎಂ.ಎಲ್.ಡಿ. ನೀರನ್ನು ಬೆಂಗಳೂರು ನಗರ ಮತ್ತು ಗ್ರಾಮಾಂತರ, ತುಮಕೂರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳ 234 ಕೆರೆಗಳಿಗೆ ತುಂಬಿಸುವ ಯೋಜನೆಯನ್ನು 500 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದೆ.

95. ಸಮುದ್ರಕ್ಕೆ ಸೇರುವ ನೀರನ್ನು ತಡೆದು ಕೃಷಿ ಚಟುವಟಿಕೆ ಹಾಗೂ ಕುಡಿಯುವ ನೀರಿಗೆ ಉಪಯೋಗಿಸಲು ಪಶ್ಚಿಮವಾಹಿನಿ ಯೋಜನೆ ಕುರಿತು ಮಾಸ್ಟರ್ ಪ್ಲಾನ್ ತಯಾರಿಸಲಾಗಿದೆ. 3986 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಮುಂದಿನ ಐದು ವರ್ಷಗಳಲ್ಲಿ 1348 ಕಿಂಡಿ ಅಣೆಕಟ್ಟುಗಳನ್ನು ಹಂತಹಂತವಾಗಿ ನಿರ್ಮಿಸಲಾಗುವುದು. 2021–22ನೇ ಸಾಲಿನಲ್ಲಿ ಈ ಯೋಜನೆಗೆ 500 ಕೋಟಿ ರೂ. ಒದಗಿಸಲಾಗುವುದು.

96. ಉತ್ತರ ಕನ್ನಡ ಜಿಲ್ಲೆಯ ಕರಾವಳಿ ಪ್ರದೇಶದ ನದಿಗಳಲ್ಲಿ ಪ್ರವಾಹ ಉಂಟಾದಾಗ ಮತ್ತು ಭಾರಿ ಅಲೆಗಳಿಂದಾಗಿ ಉಪ್ಪುನೀರು ಹಿಮ್ಮುಖವಾಗಿ ನುಗ್ಗುವುದನ್ನು Flap gate ಮುಖಾಂತರ ತಡೆಗಟ್ಟುವ ಖಾರ್‌ಲ್ಯಾಂಡ್ ಯೋಜನೆಯನ್ನು 300 ಕೋಟಿ ರೂ.ಗಳ ವೆಚ್ಚದಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದೆ.

97. ಕೃಷಿ ಮತ್ತು ಪೂರಕ ಚಟುವಟಿಕೆಗಳ ವಲಯಕ್ಕೆ 2021–22ನೇ ಸಾಲಿನಲ್ಲಿ ಒಟ್ಟಾರೆಯಾಗಿ 31,028 ಕೋಟಿ ರೂ. ಅನುದಾನ ಒದಗಿಸಲಾಗಿದೆ.

## ವಲಯ 2: ಸರ್ವೋದಯ ಮತ್ತು ಕ್ಷೇಮಾಭಿವೃದ್ಧಿ

98. ಎಲ್ಲಾ ವರ್ಗದ ಜನರ ಏಳಿಗೆಯಲ್ಲಿ ರಾಜ್ಯದ ಏಳಿಗೆಯಿದೆ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಉತ್ತಮ ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯ ಸೌಲಭ್ಯಗಳನ್ನು ಖಾತರಿಪಡಿಸುವುದು ನಮ್ಮ ಗುರಿಯಾಗಿದೆ. ಈ ದಿಸೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು ಹಾಗೂ ಬಡ, ಶೋಷಿತ ಸಮುದಾಯಗಳಿಗೆ ಉತ್ತಮ ಶಿಕ್ಷಣ, ಆರೋಗ್ಯ ಸೌಲಭ್ಯದ ಜೊತೆಗೆ ಅವರ ಆರ್ಥಿಕ ಸ್ಥಿತಿ ಸುಧಾರಣೆಗೆ ಕ್ರಮ ಕೈಗೊಳ್ಳಲಾಗುವುದು.

99. ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಹಂತದಲ್ಲಿ ಗುಣಮಟ್ಟದ ಶಿಕ್ಷಣವನ್ನು ಒಂದೇ ಸೂರಿನಡಿಯಲ್ಲಿ ನೀಡುವ ಉದ್ದೇಶದಿಂದ ಕೇಂದ್ರೀಯ ವಿದ್ಯಾಲಯಗಳ ಮಾದರಿಯಲ್ಲಿ 276 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಸ್ಥಾಪಿಸಲಾಗಿದೆ. ಈ ಶಾಲೆಗಳ ಸರ್ವತೋಮುಖ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ತಯಾರಿಸಲಾಗುತ್ತಿದೆ. 2020–21ನೇ ಸಾಲಿನಲ್ಲಿ ಆಯ್ದ 50 ಶಾಲೆಗಳಿಗೆ ತಲಾ ಎರಡು ಕೋಟಿ ರೂ. ಅನುದಾನ ನೀಡಲಾಗಿದೆ. 2021–22ನೇ ಸಾಲಿನಲ್ಲಿ ಹೆಚ್ಚುವರಿ 50 ಶಾಲೆಗಳನ್ನು ಅಭಿವೃದ್ಧಿಪಡಿಸಲು 100 ಕೋಟಿ ರೂ.ಗಳನ್ನು ನಿಗದಿಪಡಿಸಲಾಗಿದೆ.

100. ರಾಜ್ಯದ ಆಯ್ದ 100 ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪಠ್ಯದೊಡನೆ ವೃತ್ತಿ ತರಬೇತಿಯನ್ನು ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ನೀಡಲಾಗುವುದು.

101. ಶಾಲಾ–ಕಾಲೇಜುಗಳಲ್ಲಿ ಈಗಾಗಲೇ ನಿರ್ಮಿಸಲಾಗಿರುವ ಶೌಚಾಲಯಗಳನ್ನು ಗ್ರಾಮ ಪಂಚಾಯಿತಿಗಳ ಮೂಲಕ ಉನ್ನತೀಕರಿಸಲು ಹಾಗೂ ನೀರಿನ ಸಂಪರ್ಕ ಒದಗಿಸಲು ಮುಂದಿನ ಎರಡು ವರ್ಷಗಳಲ್ಲಿ 100 ಕೋಟಿ ರೂ.ಗಳನ್ನು ಮೀಸಲಿಡಲಾಗುವುದು. ಪ್ರಸಕ್ತ ಸಾಲಿನಲ್ಲಿ ಈ ಉದ್ದೇಶಕ್ಕಾಗಿ 50 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

102. ಪ್ರೌಢಶಾಲೆಗಳು ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು 150 ಕೋಟಿ ರೂ. ಅನುದಾನ ಒದಗಿಸಲಾಗಿದೆ.

103. ಸರ್ಕಾರಿ ಶಾಲೆಗಳಲ್ಲಿ ಪೀಠೋಪಕರಣ ಮತ್ತು ಕಲಿಕಾ ಸಾಮಗ್ರಿಗಳನ್ನು ಒದಗಿಸಲು 50 ಕೋಟಿ ರೂ. ನಿಗದಿಪಡಿಸಲಾಗಿದೆ.

104. ಸರ್ಕಾರಿ ಶಾಲೆಗಳ ಕಲಿಕಾ ಗುಣಮಟ್ಟವನ್ನು ಹೆಚ್ಚಿಸುವ ಉದ್ದೇಶದಿಂದ ಪ್ರೌಢಶಾಲೆಗಳಲ್ಲಿ ತಂತ್ರಜ್ಞಾನ ಆಧಾರಿತ ಕಲಿಕೆಯ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಇದರಡಿಯಲ್ಲಿ ರಾಜ್ಯದಲ್ಲಿರುವ ಒಟ್ಟು 4687 ಪ್ರೌಢಶಾಲೆಗಳಿಗೆ ಈಗಾಗಲೇ ಲ್ಯಾಪ್–ಟಾಪ್ ಮತ್ತು ಪ್ರೊಜೆಕ್ಟರ್‌ಗಳನ್ನು ನೀಡಲಾಗಿದೆ. 2351 ಸರ್ಕಾರಿ ಪ್ರೌಢಶಾಲೆಗಳಲ್ಲಿ ತಲಾ ಎಂಟು ಲಕ್ಷ ರೂ.ಗಳ ವೆಚ್ಚದಲ್ಲಿ ಕಂಪ್ಯೂಟರ್ ಲ್ಯಾಬ್‌ಗಳನ್ನು ಸ್ಥಾಪಿಸಲಾಗಿದೆ. ಉಳಿದ ಎಲ್ಲಾ ಸರ್ಕಾರಿ ಪ್ರೌಢಶಾಲೆಗಳಿಗೂ ಈ ಸೌಲಭ್ಯವನ್ನು ಶೀಘ್ರಗತಿಯಲ್ಲಿ ವಿಸ್ತರಿಸಲಾಗುವುದು.

105. ಶಿಕ್ಷಣದ ಗುಣಮಟ್ಟ ಸುಧಾರಣೆಗಾಗಿ ಜಾರಿಯಲ್ಲಿರುವ 'ಗುರು ಚೇತನ' ಮತ್ತು 'ಓದು ಕರ್ನಾಟಕ' ಕಾರ್ಯಕ್ರಮಗಳಡಿ

ಶಿಕ್ಷಕರ ತರಬೇತಿ, ಆಂಗ್ಲಮಾಧ್ಯಮ ಶಿಕ್ಷಕರಿಗೆ ಆಂಗ್ಲ ಭಾಷಾ ತರಬೇತಿ ಹಾಗೂ ಭಾರತೀಯ ವಿಜ್ಞಾನ ಸಂಸ್ಥೆ (IISc) ಯಿಂದ ಗಣಿತ/ ವಿಜ್ಞಾನ ಶಿಕ್ಷಕರಿಗೆ ತರಬೇತಿ ನೀಡಲು 2021–22ನೇ ಸಾಲಿನಲ್ಲಿ ಐದು ಕೋಟಿ ರೂ. ಅನುದಾನ ಒದಗಿಸಲಾಗಿದೆ.

106. ರಾಜ್ಯದ ಎಂಟು ಜ್ಞಾನಪೀಠ ಪುರಸ್ಕೃತರು ಅಭ್ಯಸಿಸಿದ ಶಾಲೆಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಕಾರ್ಯಕ್ರಮ ರೂಪಿಸಲಾಗುವುದು.

107. ಆಧುನಿಕ ತಂತ್ರಜ್ಞಾನದೊಂದಿಗೆ ಉನ್ನತ ಶಿಕ್ಷಣದಲ್ಲಿ ಕಲಿಕಾ ಗುಣಮಟ್ಟವನ್ನು ಹೆಚ್ಚಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ. ಕಾಲೇಜು ವಿದ್ಯಾರ್ಥಿಗಳಿಗೆ ಹಿಂದಿನ ವರ್ಷಗಳಲ್ಲಿ ಲ್ಯಾಪ್‌ಟಾಪ್ ಮತ್ತು ಟ್ಯಾಬ್ಲೆಟ್‌ಗಳನ್ನು ವಿತರಣೆ ಮಾಡಲಾಗಿದೆ. ರಾಜ್ಯದ 430 ಸರ್ಕಾರಿ ಪ್ರಥಮ ದರ್ಜೆ ಕಾಲೇಜು, 87 ಸರ್ಕಾರಿ ಪಾಲಿಟೆಕ್ನಿಕ್, 14 ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಡಿಜಿಟಲ್ ಕಲಿಕೆಗೆ ಅನುವಾಗುವಂತೆ ತರಗತಿ ಕೊಠಡಿಗಳನ್ನು ಹಂತ ಹಂತವಾಗಿ ಸ್ಮಾರ್ಟ್ ಕ್ಲಾಸ್‌ರೂಮ್‌ಗಳಾಗಿ ಪರಿವರ್ತಿಸಲು 50 ಕೋಟಿ ರೂ. ವೆಚ್ಚದಲ್ಲಿ ಕಾರ್ಯಕ್ರಮವನ್ನು ರೂಪಿಸಲಾಗುವುದು.

108. ಕೇಂದ್ರ ಮತ್ತು ರಾಜ್ಯ ಆಡಳಿತ ಸೇವೆಗಳು, ಬ್ಯಾಂಕಿಂಗ್, ರೈಲ್ವೆ ಇತ್ಯಾದಿ ಉದ್ಯೋಗಗಳಲ್ಲಿ ಹೆಚ್ಚಿನ ಸಂಖ್ಯೆಯ ಕನ್ನಡಿಗರ ಸೇರ್ಪಡೆಯನ್ನು ಉತ್ತೇಜಿಸಲು 'ಸಾಮರ್ಥ್ಯ–ಸಾರಥ್ಯ' ಎಂಬ ಹೊಸ ಕಾರ್ಯಕ್ರಮದಡಿ ಅಂದಾಜು ಐದು ಲಕ್ಷ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ

ನೀಡಲಾಗುವುದು. ಈ ಕಾರ್ಯಕ್ರಮಕ್ಕಾಗಿ 2021–22 ರ ಆರ್ಥಿಕ ವರ್ಷದಲ್ಲಿ ಐದು ಕೋಟಿ ರೂ.ಗಳನ್ನು ಒದಗಿಸಲಾಗುವುದು.

109. ಜಾಗತಿಕ ಮಟ್ಟದ ಅತ್ಯುತ್ತಮ ವಿಶ್ವವಿದ್ಯಾಲಯಗಳ ಸಹಯೋಗದೊಂದಿಗೆ 'ಶೈಕ್ಷಣಿಕ ನಾಯಕತ್ವ' ಎಂಬ ವಿನೂತನ ಕಾರ್ಯಕ್ರಮವನ್ನು ರೂಪಿಸಲಾಗುವುದು. ಇದರಿಂದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಬೋಧನಾ ಪದ್ಧತಿಯ ಸುಧಾರಣೆ, ಬಹುಶಿಸ್ತೀಯ ಅಧ್ಯಯನ, ಸಂಶೋಧನೆಯಲ್ಲಿ ನಾವೀನ್ಯತೆ ಹಾಗೂ ನಾಯಕತ್ವ ನಿರ್ಮಾಣಗಳಲ್ಲಿ ವಿಶೇಷ ಪರಿಣತಿಯನ್ನು ಸಾಧಿಸಲು ಸಾಧ್ಯವಾಗುತ್ತದೆ.

110. ರಾಜ್ಯದ ಆಯ್ದ ಮಹಾನಗರಪಾಲಿಕೆಗಳಲ್ಲಿ ಪ್ರಾಯೋಗಿಕವಾಗಿ ಸಂಜೆ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು.

111. ರಾಷ್ಟ್ರೀಯ ಶಿಕ್ಷಣ ನೀತಿ 2020ರ ಬಗ್ಗೆ ಶಿಕ್ಷಣ ಇಲಾಖೆಯ ಸಿಬ್ಬಂದಿಗಳಿಗೆ ಅರಿವು ಮೂಡಿಸಲು ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗುವುದು.

112. ಕೋವಿಡ್ 19 ನಿರ್ವಹಣೆಯಲ್ಲಿ ಕರ್ನಾಟಕ ರಾಜ್ಯವು ಇತರ ರಾಜ್ಯಗಳಿಗೆ ಮಾದರಿಯಾಗಿದೆ. ರಾಜ್ಯದ ಆರೋಗ್ಯ ಸೇವೆಯ ವ್ಯವಸ್ಥೆಯಲ್ಲಿ ವ್ಯಾಪಕ ಸುಧಾರಣೆ ಹಾಗೂ ಚಿಕಿತ್ಸಾ ಸೌಲಭ್ಯಗಳನ್ನು ಕಲ್ಪಿಸಲು ಅಗತ್ಯ ಅನುದಾನ ಒದಗಿಸಲಾಗಿದೆ. ದೇಶದ ಕೆಲವು ರಾಜ್ಯಗಳಲ್ಲಿ ಕೋವಿಡ್–19ರ ಎರಡನೇ ಅಲೆ ಪ್ರಾರಂಭವಾಗಿದ್ದು, ಇದನ್ನು ನಮ್ಮ ಸರ್ಕಾರವು ಗಂಭೀರವಾಗಿ

ಪರಿಗಣಿಸಿ ರಾಜ್ಯದಲ್ಲಿ ಎರಡನೇ ಅಲೆಯು ಹರಡದಂತೆ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ.

113. ಕೋವಿಡ್-19ರ ಅವಧಿಯಲ್ಲಿ ಸೃಜಿಸಿದ ಮೌಲ್ಯಯುತವಾದ ವೈದ್ಯಕೀಯ ಸೌಕರ್ಯಗಳನ್ನು ವ್ಯರ್ಥವಾಗದಂತೆ ಸದ್ಬಳಕೆ ಮಾಡಲು ರಾಜ್ಯದ 19 ಜಿಲ್ಲಾ ಆಸ್ಪತ್ರೆಗಳಲ್ಲಿ 25 ಹಾಸಿಗೆ ಸಾಮರ್ಥ್ಯವುಳ್ಳ ಹಾಗೂ 100 ತಾಲ್ಲೂಕು ಆಸ್ಪತ್ರೆಗಳಲ್ಲಿ ಆರು ಹಾಸಿಗೆ ಸಾಮರ್ಥ್ಯವುಳ್ಳ ತೀವ್ರ ನಿಗಾ ಘಟಕಗಳನ್ನು 60 ಕೋಟಿ ರೂ.ಗಳ ವೆಚ್ಚದಲ್ಲಿ ಕಾರ್ಯಗತಗೊಳಿಸಲಾಗುವುದು.

114. ಹೆಚ್ಚು ಕಾರ್ಯ ಒತ್ತಡವಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಹೆಚ್ಚುವರಿ ಸೇವೆಗಳನ್ನು ಹಾಗೂ ಅತ್ಯಾಧುನಿಕ ಸೌಲಭ್ಯಗಳನ್ನು ನೀಡುವ ಉದ್ದೇಶದಿಂದ ಅವುಗಳನ್ನು ಹಂತ ಹಂತವಾಗಿ ಮಾದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಾಗಿ ಮೇಲ್ದರ್ಜೆಗೇರಿಸಲಾಗುವುದು. 2021-22ನೇ ವರ್ಷದಲ್ಲಿ ಅಗತ್ಯ ಸಲಕರಣೆಗಳು ಒದಗಿಸಿ ಮತ್ತು ಮಾನವ ಸಂಪನ್ಮೂಲಗಳನ್ನು ಮರುಹೊಂದಿಸಿ 250 ಮಾದರಿ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗುವುದು.

115. ಎನ್.ಎ.ಬಿ.ಎಲ್. ಮಾನಕಗಳಿಗೆ ಅನುಸಾರವಾಗಿ ರಾಜ್ಯದಲ್ಲಿ ನಾಲ್ಕು ಪ್ರಾದೇಶಿಕ ಆಹಾರ ಸುರಕ್ಷತಾ ಪ್ರಯೋಗಾಲಯಗಳನ್ನು ಎರಡು ಕೋಟಿ ರೂ.ಗಳ ವೆಚ್ಚದಲ್ಲಿ ಮೇಲ್ದರ್ಜೆಗೇರಿಸಲಾಗುವುದು.

116. ಅನಿಯಂತ್ರಿತ ಮತ್ತು ಅವೈಜ್ಞಾನಿಕ ಔಷಧ ಬಳಕೆಯಿಂದ ಔಷಧ ನಿರೋಧಕ (Drug Resistance) ಶಕ್ತಿಯು ಉತ್ಪತ್ತಿಯಾಗಿ ಚಿಕಿತ್ಸೆಯ ಪರಿಣಾಮ ಕುಂದುವ ಪ್ರಕರಣಗಳು

ಹೆಚ್ಚುತ್ತಿವೆ. ಈ ಸಮಸ್ಯೆ ನಿವಾರಣೆಗಾಗಿ ಒಂದು ಕೋಟಿ ರೂ. ವೆಚ್ಚದಲ್ಲಿ ಆ್ಯಂಟಿ–ಮೈಕ್ರೋಬಿಯಲ್ ರೆಸಿಸ್ಟೆನ್ಸ್ ಘಟಕವನ್ನು ಪ್ರಾರಂಭಿಸಲಾಗುವುದು.

117. ಸುಸ್ಥಿರ ಅಭಿವೃದ್ಧಿ ಗುರಿ 2030ರನ್ವಯ ತಾಯಂದಿರ ಮರಣ ಪ್ರಮಾಣವನ್ನು 70ಕ್ಕಿಂತಲೂ ಕಡಿಮೆಗೆ ಹಾಗೂ ಶಿಶು ಮರಣ ಪ್ರಮಾಣವನ್ನು 10ಕ್ಕಿಂತಲೂ ಕಡಿಮೆಗೆ ಇಳಿಸಬೇಕಾಗಿದ್ದು, ರಾಜ್ಯದಲ್ಲಿ ಪ್ರಸ್ತುತ ಅನುಕ್ರಮವಾಗಿ 92 ಮತ್ತು 23 ರಷ್ಟಿದೆ. ಈ ಗುರಿ ತಲುಪಲು ಅಗತ್ಯವಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲು ನಮ್ಮ ಸರ್ಕಾರ ಬದ್ಧವಾಗಿದೆ.

118. ನವಜಾತ ಶಿಶುಗಳಲ್ಲಿ ಅನುವಂಶೀಯ ಮೆಟಾಬಾಲಿಕ್ ಕಾಯಿಲೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆ ಮಾಡಲು ಬಳ್ಳಾರಿ ಮತ್ತು ಬೆಂಗಳೂರಿನಲ್ಲಿ ಪ್ರಯೋಗಾಲಯಗಳನ್ನು ಒಟ್ಟು 10 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು. ಇದರಿಂದ ವಿವಿಧ ಕಾಯಿಲೆಗಳನ್ನು ಪ್ರಾರಂಭದಲ್ಲೇ ಪತ್ತೆ ಮಾಡುವ ಮೂಲಕ ಶಿಶು ಮರಣ ಪ್ರಮಾಣ ಕಡಿಮೆಗೊಳಿಸಬಹುದು ಹಾಗೂ ಆರೋಗ್ಯವಂತ ಸಮಾಜ ನಿರ್ಮಿಸಲು ಸಾಧ್ಯವಾಗುವುದು.

119. ತಾಯಿ ಹಾಲು ಕೊರತೆಯಿರುವ ನವಜಾತ ಶಿಶುಗಳಿಗೆ ಸಕಾಲದಲ್ಲಿ ಸುರಕ್ಷಿತ ಮತ್ತು ಉತ್ತಮ ಗುಣಮಟ್ಟದ ಎದೆ ಹಾಲನ್ನು ನೀಡಿ ಅಪೌಷ್ಟಿಕತೆಯನ್ನು ತಡೆಗಟ್ಟಲು ರಾಜ್ಯದ ನಾಲ್ಕು ವಿಭಾಗಗಳಲ್ಲಿ 'ತಾಯಂದಿರ ಎದೆಹಾಲಿನ ಬ್ಯಾಂಕ್' ಗಳನ್ನು ಒಟ್ಟು 2.5 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

120. ತಾಯಿ ಮತ್ತು ಮಕ್ಕಳ ಆರೋಗ್ಯಕ್ಕಾಗಿ ಗರ್ಭಾವಸ್ಥೆಯಲ್ಲಿ ಉತ್ತಮ ಗುಣಮಟ್ಟದ ಆರೈಕೆ ನೀಡಲು ಹಾಗೂ ತೊಡಕುಗಳನ್ನು ಮುಂಚಿತವಾಗಿಯೇ ಪತ್ತೆಹಚ್ಚಲು ಗರ್ಭಿಣಿಯರಿಗೆ ಸ್ಕ್ಯಾನಿಂಗ್ ಮಾಡುವುದನ್ನು ಉತ್ತೇಜಿಸಲು 10 ಕೋಟಿ ರೂ.ಗಳ ವೆಚ್ಚದಲ್ಲಿ 'ಚಿಗುರು' ಕಾರ್ಯಕ್ರಮವನ್ನು ಆರಂಭಿಸಲಾಗುವುದು.

121. ಕೋವಿಡ್–19ರ ಅವಧಿಯಲ್ಲಿ ಆರಂಭಿಸಲಾದ ಟೆಲಿ–ಐಸಿಯು ಸೌಲಭ್ಯಗಳನ್ನು ಬಲಪಡಿಸಿ, ವಿಶೇಷ ತಜ್ಞರ ಕೊರತೆಯನ್ನು ನೀಗಿಸಲು ಎರಡು ಕೋಟಿ ರೂ.ಗಳ ಅನುದಾನವನ್ನು ಮೀಸಲಿರಿಸಲಾಗಿದೆ.

122. ಭಾರತೀಯ ವೈದ್ಯ ಪದ್ಧತಿಯನ್ನು ಉತ್ತೇಜಿಸಲು ಹಾಗೂ ಸಂಶೋಧನೆಯನ್ನು ಪ್ರೋತ್ಸಾಹಿಸಲು ಶಿವಮೊಗ್ಗ ಜಿಲ್ಲೆಯಲ್ಲಿರುವ ಆಯುರ್ವೇದ ಕಾಲೇಜನ್ನು ಆಯುಷ್ ವಿಶ್ವವಿದ್ಯಾಲಯವನ್ನಾಗಿ ಮೇಲ್ದರ್ಜೆಗೇರಿಸಲಾಗುವುದು.

123. ಅಪೌಷ್ಟಿಕತೆಯಿಂದ ತಾಯಿ ಹಾಗೂ ಮಗುವನ್ನು ರಕ್ಷಿಸಲು ಭಾರತೀಯ ವೈದ್ಯ ಪದ್ಧತಿಗನುಸಾರವಾಗಿ 'ಪೋಷಣೆ ಮತ್ತು ಜೀವನೋಪಾಯ' ಕಾರ್ಯಕ್ರಮವನ್ನು ಐದು ಕೋಟಿ ರೂ.ಗಳ ವೆಚ್ಚದಲ್ಲಿ ಆಯುಷ್ ಇಲಾಖೆಯ ವತಿಯಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ಪ್ರಾರಂಭಿಸಲಾಗುವುದು.

124. ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಾವಳಿಗಳನ್ವಯ 2021–22ನೇ ಸಾಲಿನಲ್ಲಿ ಬೆಂಗಳೂರು, ಮೈಸೂರು, ಬಳ್ಳಾರಿ ಮತ್ತು ಹುಬ್ಬಳ್ಳಿ ವೈದ್ಯಕೀಯ ವಿಜ್ಞಾನ ಸಂಸ್ಥೆಗಳಲ್ಲಿ ಒಟ್ಟು

ಐದು ಕೋಟಿ ರೂ.ಗಳ ವೆಚ್ಚದಲ್ಲಿ ತುರ್ತು ಚಿಕಿತ್ಸಾ ವಿಭಾಗಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ.

125. ಕ್ಯಾನ್ಸರ್ ರೋಗಿಗಳಿಗೆ ಸಮೀಪದಲ್ಲಿಯೇ ಸಕಾಲಿಕ, ಮಿತವ್ಯಯದಾಯಕ ಚಿಕಿತ್ಸೆಯನ್ನು ಒದಗಿಸಲು ಶಿವಮೊಗ್ಗ ಮತ್ತು ಮೈಸೂರಿನಲ್ಲಿ ಒಟ್ಟು 100 ಕೋಟಿ ರೂ.ಗಳ ವೆಚ್ಚದಲ್ಲಿ ಕಿದ್ವಾಯಿ ಸಂಸ್ಥೆ ಮಾದರಿಯ ಪ್ರಾದೇಶಿಕ ಕ್ಯಾನ್ಸರ್ ಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು.

126. ಮಹಿಳೆಯರಲ್ಲಿ ಕ್ಯಾನ್ಸರ್ ರೋಗವನ್ನು ಪ್ರಾರಂಭಿಕ ಹಂತದಲ್ಲಿಯೇ ಪತ್ತೆ ಹಚ್ಚಿ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ರಾಜ್ಯದಲ್ಲಿ ಮೂರು ಹೊಸ ಸುಸಜ್ಜಿತ ಸಂಚಾರಿ ಪ್ರಯೋಗಾಲಯಗಳನ್ನು 11 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲು ಉದ್ದೇಶಿಸಿದೆ.

127. ದಾವಣಗೆರೆಯಲ್ಲಿ 50 ಹಾಸಿಗೆ ಸಾಮರ್ಥ್ಯದ ಜಯದೇವ ಹೃದ್ರೋಗ ವಿಜ್ಞಾನ ಸಂಸ್ಥೆಯ ಉಪಕೇಂದ್ರವನ್ನು 20 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲಾಗುವುದು.

128. ಕಲಬುರಗಿ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ವತಿಯಿಂದ ಸುಟ್ಟಗಾಯಗಳ ಚಿಕಿತ್ಸಾ ಕೇಂದ್ರ ಮತ್ತು ಪ್ಲಾಸ್ಟಿಕ್ ಸರ್ಜರಿ ವಿಭಾಗವನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ.

129. ಚಿತ್ರದುರ್ಗ ಜಿಲ್ಲೆಯಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಪ್ರಸಕ್ತ ಸಾಲಿನಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಡಿ ಪ್ರಾರಂಭಿಸಲಾಗುವುದು.

130. ರಾಜ್ಯದಲ್ಲಿ ಸ್ನಾತಕೋತ್ತರ ವೈದ್ಯಕೀಯ ಪದವೀಧರರ ಕೊರತೆಯನ್ನು ನೀಗಿಸಲು ನಮ್ಮ ಸರ್ಕಾರವು ಹಾಸನ ಮತ್ತು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳಲ್ಲಿ ಪ್ರಸಕ್ತ ಸಾಲಿನಿಂದ 100 ಸ್ನಾತಕೋತ್ತರ ಸೀಟುಗಳನ್ನು ಹೆಚ್ಚಿಸಲು ಉದ್ದೇಶಿಸಿದೆ.

131. ಅಪಘಾತಗಳ ಸಂದರ್ಭದಲ್ಲಿ ಜೀವ ರಕ್ಷಣೆಗೆ ತುರ್ತು ಚಿಕಿತ್ಸೆ ಒದಗಿಸುವ ಉದ್ದೇಶದಿಂದ ಮೈಸೂರು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಟ್ರಾಮಾ ಕೇರ್ ಕೇಂದ್ರವನ್ನು ಲೋಕಾರ್ಪಣೆ ಮಾಡಲಾಗುವುದು.

132. ರಾಜ್ಯದ ಅತ್ಯಂತ ಹಳೆಯ ಮಾನಸಿಕ ಆರೋಗ್ಯ ಸಂಸ್ಥೆಯಾಗಿರುವ ಧಾರವಾಡದ ಡಿಮ್ಹಾನ್ಸ್ ಸಂಸ್ಥೆಯನ್ನು ಮಾನಸಿಕ ನರರೋಗಿಗಳ ಸುಸಜ್ಜಿತ ಚಿಕಿತ್ಸಾ ಸಂಸ್ಥೆಯನ್ನಾಗಿ 75 ಕೋಟಿ ರೂ.ಗಳ ವೆಚ್ಚದಲ್ಲಿ ಹಂತ ಹಂತವಾಗಿ ಮೇಲ್ದರ್ಜೆಗೇರಿಸಲಾಗುವುದು. ಈ ಉದ್ದೇಶಕ್ಕಾಗಿ ಪ್ರಸಕ್ತ ಸಾಲಿನಲ್ಲಿ 10 ಕೋಟಿ ರೂ. ಅನುದಾನ ಒದಗಿಸಲಾಗುವುದು.

133. ಬುದ್ಧಿಮಾಂದ್ಯರ ಆರೈಕೆ ಮಾಡಲು ಅನುವಾಗುವಂತೆ ಶೇ.75 ಕ್ಕಿಂತ ಹೆಚ್ಚಿನ ಮನೋವೈಕಲ್ಯತೆ ಹೊಂದಿದವರಿಗೆ ಪ್ರಸ್ತುತ ನೀಡುತ್ತಿರುವ ಮಾಸಾಶನವನ್ನು 1400 ರೂ.ಗಳಿಂದ 2000 ರೂ.ಗಳಿಗೆ ಹೆಚ್ಚಿಸಲಾಗುವುದು.

134. ಹುಟ್ಟಿನಿಂದಲೇ ಶ್ರವಣದೋಷವುಳ್ಳ ಮಕ್ಕಳ ತಾಯಂದಿರಿಗೆ ಪ್ರಾರಂಭಿಕ ಹಂತದಲ್ಲಿಯೇ ಅವರ ಮಗುವಿನ ಸಮಸ್ಯೆ ಮತ್ತು ಪರಿಹಾರದ ಬಗ್ಗೆ ಅರಿವು ಮೂಡಿಸಲು ತರಬೇತಿ ನೀಡುವ ಅವಶ್ಯಕತೆ ಇರುವುದರಿಂದ ನಾಲ್ಕು ವರ್ಷದೊಳಗಿನ

ಶ್ರವಣದೋಷವುಳ್ಳ ಮಕ್ಕಳಿಗೆ ಅವರ ತಾಯಂದಿರ ಸಹಿತ ವಾಕ್ (Speech) ತರಬೇತಿ ನೀಡಲು ಉದ್ದೇಶಿಸಿದೆ.

135. ರಾಜ್ಯದಲ್ಲಿನ ವಿಶೇಷ ಶಾಲೆಗಳಲ್ಲಿ ಒಂದರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳಿಗೆ ನೆರವಾಗಲು ಸರ್ಕಾರದ ಬ್ರೈಲ್ ಮುದ್ರಣಾಲಯದಲ್ಲಿ 'ಸುಶ್ರಾವ್ಯ' ಡಿಜಿಟಲ್ ಪುಸ್ತಕಗಳ ಬ್ಯಾಂಕನ್ನು ಸ್ಥಾಪಿಸಿ, ವಿಶೇಷ ಶಾಲೆಗಳಿಗೆ ಡಿಜಿಟಲ್ ಪುಸ್ತಕಗಳನ್ನು ಸರಬರಾಜು ಮಾಡಲಾಗುವುದು.

136. ಮಕ್ಕಳ ಉದ್ದೇಶಿತ ಯೋಜನೆಗಳಿಗೆ 2021–22ನೇ ಸಾಲಿನಲ್ಲಿ ಒಟ್ಟಾರೆಯಾಗಿ 37,527 ಕೋಟಿ ರೂ. ಅನುದಾನ ಒದಗಿಸಲಾಗಿದೆ.

137. ನಮ್ಮ ಸರ್ಕಾರವು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಸರ್ವತೋಮುಖ ಅಭಿವೃದ್ಧಿಗೆ ಸದಾ ಆದ್ಯತೆ ನೀಡುತ್ತಲೇ ಬಂದಿದೆ.

138. 2021–22ನೇ ಸಾಲಿನ ಆಯವ್ಯಯದಲ್ಲಿ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (SCSP/TSP) ಗಳಡಿ ಒಟ್ಟಾರೆ 26,005 ಕೋಟಿ ರೂ.ಗಳನ್ನು ಹಂಚಿಕೆ ಮಾಡಲಾಗಿದೆ. ಇದು 2020–21ನೇ ಸಾಲಿನ SCSP/TSP ಹಂಚಿಕೆಗಿಂತ ಕಡಿಮೆಯಾಗಿರುತ್ತದೆ. ಬದ್ಧ ವೆಚ್ಚಗಳಾದ ವೇತನ, ಗೌರವಧನ, ಅಸಲು ಮತ್ತು ಬಡ್ಡಿ ಪಾವತಿ, ಪಿಂಚಣಿ ಮುಂತಾದವುಗಳು 2020–21ನೇ ಸಾಲಿನ 1,29,455 ಕೋಟಿ ರೂ.ಗಳಿಂದ 2021–22ನೇ ಸಾಲಿನಲ್ಲಿ 1,42,855 ಕೋಟಿ ರೂ.ಗಳಿಗೆ ಹೆಚ್ಚಾಗಿರುವುದರಿಂದ ಒಟ್ಟಾರೆ

SCSP/TSPರಡಿ ಹಂಚಿಕೆ ಮಾಡಬೇಕಾದಂತಹ ಆಯವ್ಯಯವು ಇಳಿಕೆಯಾಗಿರುತ್ತದೆ.

139. ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರಗಳಲ್ಲಿ 50 ಮೆಟ್ರಿಕ್ ನಂತರದ ಹಾಸ್ಟೆಲ್‌ಗಳನ್ನು ಒಟ್ಟು 50 ಕೋಟಿ ರೂ. ವೆಚ್ಚದಲ್ಲಿ ಪ್ರಾರಂಭಿಸಲಾಗುವುದು. ಈ ವಸತಿ ನಿಲಯಗಳಿಂದ ಸುಮಾರು 5000 ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ.

140. ನಾಲ್ಕು ವಿಭಾಗಗಳಲ್ಲಿ ತಲಾ ಒಂದು ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಅದ್ವಿತೀಯ ಕ್ರೀಡಾ ಶಾಲೆಗಳೆಂದು (Sports School of Excellence) ಉನ್ನತೀಕರಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸೌಲಭ್ಯದೊಂದಿಗೆ ಕ್ರೀಡಾ ಕ್ಷೇತ್ರದಲ್ಲಿ ವಿಶೇಷ ತರಬೇತಿ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ ಈ ಉದ್ದೇಶಕ್ಕಾಗಿ ಒಟ್ಟು ಐದು ಕೋಟಿ ರೂ.ಗಳನ್ನು ಒದಗಿಸಲಾಗುವುದು.

141. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಿಗಳಿಗೆ ಹಾಲಿ ಜಾರಿಯಲ್ಲಿರುವ ಶೇ. 4ರಷ್ಟು ಬಡ್ಡಿ ಸಹಾಯಧನ ಯೋಜನೆಯನ್ನು ವಾಣಿಜ್ಯ ಮತ್ತು ವ್ಯಾಪಾರ ಚಟುವಟಿಕೆಗಳಾದ ಮಳಿಗೆ/ಡೀಲರ್‌ಶಿಪ್/ಫ್ರಾಂಚೈಸಿ ಮತ್ತು ಹೋಟೆಲ್ ಉದ್ಯಮಗಳನ್ನು ಪ್ರಾರಂಭಿಸಲು ಸಹ ವಿಸ್ತರಿಸಿ, ಈ ಯೋಜನೆಯಡಿ ಗರಿಷ್ಠ ಒಂದು ಕೋಟಿ ರೂ.ವರೆಗೆ ಶೆಡ್ಯೂಲ್ಡ್ ಬ್ಯಾಂಕ್‌ಗಳಿಂದ ಸಾಲ ಪಡೆಯಲು ಅವಕಾಶ ಕಲ್ಪಿಸಲಾಗುವುದು.

142. ಮ್ಯಾನ್ಯೂಯಲ್ ಸ್ಕ್ಯಾವೆಂಜರ್‌ಗಳಾಗಿ ಕಾರ್ಯ ನಿರ್ವಹಿಸುತ್ತಿದ್ದವರ ಪುನರ್ವಸತಿಗೆ ನಮ್ಮ ಸರ್ಕಾರ ಆದ್ಯತೆ ನೀಡಿದೆ. ಸ್ವಚ್ಛತಾ ಕಾರ್ಯದಲ್ಲಿ ತೊಡಗಲು ಬಯಸುವವರ ಸಂಘಗಳನ್ನು ರಚಿಸಿ, ತರಬೇತಿ ನೀಡಿ, ಸಕ್ಕಿಂಗ್ ಮತ್ತು ಜಟ್ಟಿಂಗ್ ಯಂತ್ರಗಳಿಗೆ ಶೇ.75ರಷ್ಟು ಸಹಾಯಧನ ಒದಗಿಸಲಾಗುವುದು. ಈ ಉದ್ದೇಶಕ್ಕಾಗಿ ಎರಡು ಕೋಟಿ ರೂ.ಗಳ ಅನುದಾನವನ್ನು ಆಯವ್ಯಯದಲ್ಲಿ ಮೀಸಲಿಡಲಾಗಿದೆ.

143. ಬೆಳಗಾವಿ ಜಿಲ್ಲೆಯ ನಿಪ್ಪಾಣಿಯಲ್ಲಿ 'ಕೊಲ್ಹಾಪುರಿ ಪಾದರಕ್ಷೆಗಳ ಕ್ಲಸ್ಟರ್' ಮತ್ತು ಚಿತ್ರದುರ್ಗ ನಗರದಲ್ಲಿ ಕೇಂದ್ರ ಪಾದರಕ್ಷಾ ತರಬೇತಿ ಸಂಸ್ಥೆಯ ವಿಸ್ತರಣಾ ಕೇಂದ್ರ ಪ್ರಾರಂಭಿಸಲಾಗುವುದು.

144. ಪರಿಶಿಷ್ಟ ಪಂಗಡದ ಆಶ್ರಮ ಶಾಲೆಗಳನ್ನು 'ವಾಲ್ಮೀಕಿ ಆಶ್ರಮ ಶಾಲೆ' ಎಂದು ಮರು ನಾಮಕರಣ ಮಾಡಲಾಗುವುದು.

145. ಸಂವಿಧಾನ ಶಿಲ್ಪಿ, ಮಹಾ ಮಾನವತಾವಾದಿ ಡಾ॥ ಬಿ.ಆರ್. ಅಂಬೇಡ್ಕರ್ ಅವರು ಹಾಸನ ನಗರದ ಎ.ಕೆ. ಬೋರ್ಡಿಂಗ್ ಹೋಮ್‌ಗೆ ಭೇಟಿ ನೀಡಿದ್ದರು. ಈ ಐತಿಹಾಸಿಕ ಸ್ಥಳದಲ್ಲಿ ಸ್ಮಾರಕ ಭವನವನ್ನು ನಿರ್ಮಿಸಲು ಒಂದು ಕೋಟಿ ರೂ. ನೀಡಲಾಗುವುದು.

146. ರಾಜ್ಯದಲ್ಲಿನ ಬಡ, ಹಿಂದುಳಿದ ಮತ್ತು ಶೋಷಿತ ಸಮುದಾಯಗಳ ಅಭ್ಯುದಯಕ್ಕೆ ನಮ್ಮ ಸರ್ಕಾರ ಒತ್ತು ನೀಡಿದೆ. ಈ ಸಮುದಾಯಗಳ ವಿದ್ಯಾರ್ಥಿಗಳು, ಯುವಜನರ ಶಿಕ್ಷಣ ಹಾಗೂ ಸ್ವಾವಲಂಬನೆಗೆ ಬೆಂಬಲ ನೀಡಲು

ಅಂಬೇಡ್ಕರ್ ಅಭಿವೃದ್ಧಿ ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಗಮ, ಆದಿಜಾಂಬವ ಅಭಿವೃದ್ಧಿ ನಿಗಮ, ಭೋವಿ ಅಭಿವೃದ್ಧಿ ನಿಗಮ, ತಾಂಡ ಅಭಿವೃದ್ಧಿ ನಿಗಮ, ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ, ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ, ಉಪ್ಪಾರ ಅಭಿವೃದ್ಧಿ ನಿಗಮ, ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮ, ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ಮರಾಠಾ ಅಭಿವೃದ್ಧಿ ನಿಗಮ, ಕಾಡುಗೊಲ್ಲರ ಅಭಿವೃದ್ಧಿ ನಿಗಮ, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ಹಾಗೂ ಸವಿತಾ ಸಮಾಜ ಅಭಿವೃದ್ಧಿ ನಿಗಮಗಳಿಗೆ ಒಟ್ಟಾರೆ 500 ಕೋಟಿ ರೂ.ಗಳ ಅನುದಾನವನ್ನು ಪ್ರಸಕ್ತ ಸಾಲಿನಲ್ಲಿ ಒದಗಿಸಲಾಗಿದೆ.

147. ವೀರಶೈವ ಲಿಂಗಾಯತ್ ಸಮಾಜದ ಸಮಗ್ರ ಅಭಿವೃದ್ಧಿಗಾಗಿ ಒಂದು ಹೊಸ ನಿಗಮವನ್ನು ಈಗಾಗಲೇ ಸ್ಥಾಪಿಸಲಾಗಿದೆ. ಇದಕ್ಕೆ 500 ಕೋಟಿ ರೂ.ಗಳ ಅನುದಾನ ನಿಗದಿಪಡಿಸಿದ್ದು, ಇದರಲ್ಲಿ ಈಗಾಗಲೇ 100 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಲಾಗಿದೆ.

148. ಒಕ್ಕಲಿಗ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಒಂದು ಹೊಸ ನಿಗಮವನ್ನು ಸ್ಥಾಪಿಸಲಾಗುವುದು. ನಿಗಮದ ಚಟುವಟಿಕೆಗಳಿಗೆ 500 ಕೋಟಿ ರೂ. ವೆಚ್ಚ ಮಾಡಲು ಯೋಜಿಸಲಾಗಿದೆ.

149. ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವತಿಯಿಂದ 50 ಕೋಟಿ ರೂ.ಗಳಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

150. ಜಿಲ್ಲಾ ಕೇಂದ್ರ ಸ್ಥಾನದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಖಾಲಿ ನಿವೇಶನಗಳಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದ ಅಡಿಯಲ್ಲಿ 150 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗುವುದು.

151. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಸ್ವಂತ ಕಟ್ಟಡ ಹೊಂದಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿನ ಸಂಖ್ಯಾ ಬಲವನ್ನು ಶೇ. 5ರಷ್ಟು ಹೆಚ್ಚಿಸಲಾಗುವುದು. ಇದರಿಂದ 5000 ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಲ್ಲಿ ಅವಕಾಶ ಕಲ್ಪಿಸಿದಂತಾಗುತ್ತದೆ. ಈ ಉದ್ದೇಶಕ್ಕಾಗಿ 2021–22ನೇ ಸಾಲಿನ ಆಯವ್ಯಯದಲ್ಲಿ 10 ಕೋಟಿ ರೂ.ಗಳನ್ನು ಒದಗಿಸಲಾಗುವುದು.

152. ಗಂಗಾ ಕಲ್ಯಾಣ ಯೋಜನೆಯನ್ನು ಪಾರದರ್ಶಕವಾಗಿ ಮತ್ತು ನಿಗದಿತ ಅವಧಿಯೊಳಗೆ ರೈತ ಫಲಾನುಭವಿಗಳಿಗೆ ತಲುಪಿಸಲು 'ಅನುಷ್ಠಾನದ ವಿವೇಚನೆ ಫಲಾನುಭವಿಯ ಕೈಗೆ' ಎಂಬ ನೂತನ ವಿಧಾನವನ್ನು ಜಾರಿಗೆ ತರಲಾಗುವುದು.

153. ರಾಷ್ಟ್ರಕವಿ ಕುವೆಂಪು ಅವರು ಬಣ್ಣಿಸಿದಂತೆ, ಕರ್ನಾಟಕ 'ಸರ್ವ ಜನಾಂಗದ ಶಾಂತಿಯ ತೋಟ' ವಾಗಿದೆ. ಎಲ್ಲ ಸಮುದಾಯಗಳ ಸಮಗ್ರ ಅಭಿವೃದ್ಧಿ ನಮ್ಮ ಸರ್ಕಾರದ

ಆಶಯ. ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಅಲ್ಪಸಂಖ್ಯಾತರ ಏಳಿಗೆಗಾಗಿ 1500 ಕೋಟಿ ರೂ. ಮೀಸಲಿಡಲಾಗಿದೆ.

154. ರಾಜ್ಯದಲ್ಲಿರುವ ಕ್ರಿಶ್ಚಿಯನ್ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಚರ್ಚ್‌ಗಳ ನವೀಕರಣ/ದುರಸ್ತಿ, ಸಮುದಾಯ ಭವನ ಕಟ್ಟಡ ನಿರ್ಮಾಣ, ಅನಾಥಾಶ್ರಮ ಮತ್ತು ವೃದ್ಧಾಶ್ರಮಗಳಿಗೆ ನೆರವು ಮುಂತಾದ ಕಾರ್ಯಕ್ರಮಗಳನ್ನು 200 ಕೋಟಿ ರೂ.ಗಳ ವೆಚ್ಚದಲ್ಲಿ ಮುಂದುವರಿಸಲಾಗುವುದು.

155. 2020–21ನೇ ಸಾಲಿನಲ್ಲಿ 400 ಸರ್ಕಾರಿ ಉರ್ದು ಶಾಲೆಗಳಲ್ಲಿ ಉರ್ದು ಮಾಧ್ಯಮದೊಂದಿಗೆ ಆಂಗ್ಲ ಮಾಧ್ಯಮವನ್ನು ಸಹ ಪ್ರಾರಂಭಿಸಲು ಸರ್ಕಾರಿ ಆದೇಶ ಹೊರಡಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲಾಗುವುದು.

156. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಮಾದರಿ ಶಾಲೆ/ಕಾಲೇಜುಗಳಲ್ಲಿ 'ತಂತ್ರಜ್ಞಾನ ಆಧಾರಿತ ಕಲಿಕಾ ಕಾರ್ಯಕ್ರಮ' ಅನುಷ್ಠಾನಗೊಳಿಸಿ, ಸದರಿ ಶಾಲಾ/ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಡಿಜಿಟಲ್ ತಂತ್ರಜ್ಞಾನದ ಮೂಲಕ ಎಲ್ಲಾ ವಿಷಯಗಳಲ್ಲಿ ಬೋಧನಾ ಮತ್ತು ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲಾಗುವುದು.

157. ಜೈನಕಾಶಿ ಎಂದೇ ಪ್ರಸಿದ್ಧವಾದ ಹಾಸನದ ಶ್ರವಣಬೆಳಗೊಳ ಮತ್ತಿತರೆ ಜೈನ ಪುಣ್ಯ ಕ್ಷೇತ್ರಗಳಲ್ಲಿ ವಸತಿ ಗೃಹಗಳು, ಪಾದಚಾರಿ ರಸ್ತೆಗಳು ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು 50 ಕೋಟಿ ರೂ. ವೆಚ್ಚದಲ್ಲಿ ಹಂತ

ಹಂತವಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. 2021–22ನೇ ಸಾಲಿನಲ್ಲಿ 20 ಕೋಟಿ ರೂ.ಗಳನ್ನು ಈ ಉದ್ದೇಶಕ್ಕಾಗಿ ಒದಗಿಸಲಾಗುವುದು.

158. ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಗಳಲ್ಲಿ ಹಲವು ವರ್ಷಗಳಿಂದ ಅನುಮೋದನೆಗೊಂಡು, ಪ್ರಾರಂಭವಾಗದೇ ಇರುವಂತಹ ಮನೆಗಳನ್ನು ಪ್ರಾರಂಭಿಸಿ ಪೂರ್ಣಗೊಳಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಪ್ರಗತಿಯಲ್ಲಿರುವ 9.74 ಲಕ್ಷ ಮನೆಗಳನ್ನು ಪೂರ್ಣಗೊಳಿಸಲು 10,194 ಕೋಟಿ ರೂ.ಗಳನ್ನು ಮುಂದಿನ ಮೂರು ಆರ್ಥಿಕ ವರ್ಷಗಳಲ್ಲಿ ಒದಗಿಸಲು ಅನುಮೋದನೆ ನೀಡಿದೆ.

159. ಕಾರ್ಮಿಕ ಸ್ನೇಹಿ ಹಾಗೂ ಉದ್ಯಮ ಸ್ನೇಹಿ ವಾತಾವರಣವನ್ನು ಸೃಷ್ಟಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು 21 ಕಾರ್ಮಿಕ ಕಾನೂನುಗಳನ್ನು ಕ್ರೋಢೀಕರಿಸಿ ನಾಲ್ಕು ಸಂಹಿತೆಗಳನ್ನು ರೂಪಿಸಿದೆ. ರಾಜ್ಯ ಸರ್ಕಾರವು ಇದಕ್ಕೆ ನಿಯಮಾವಳಿಗಳನ್ನು ರೂಪಿಸಿ ಅನುಷ್ಠಾನಗೊಳಿಸಲಿದೆ.

160. ನೋಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳ ಸಂರಕ್ಷಣೆಗಾಗಿ ಪ್ರಸಕ್ತ ಸಾಲಿನಲ್ಲಿ ಹೆಚ್ಚುವರಿಯಾಗಿ 100 ಕಿತ್ತೂರು ರಾಣಿ ಚೆನ್ನಮ್ಮ ಶಿಶು ಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

161. ಕಟ್ಟಡ ಕಾರ್ಮಿಕರು ಹಾಗೂ ಅವರ ಅವಲಂಬಿತರ ವೈದ್ಯಕೀಯ ತಪಾಸಣೆ ಹಾಗೂ ಚಿಕಿತ್ಸೆಗಾಗಿ ಆಯ್ದ

ಕಾರ್ಯನಿರ್ವಹಣಾ ಸ್ಥಳಗಳಲ್ಲಿ 25 ಸಂಚಾರಿ ಆರೋಗ್ಯ ತಪಾಸಣಾ ಕೇಂದ್ರಗಳನ್ನು ಆರಂಭಿಸಲಾಗುವುದು.

162. ನಿರ್ಮಾಣ ಕಾರ್ಮಿಕರು ವಸತಿ ಸಮಸ್ಯೆಯನ್ನು ಎದುರಿಸುತ್ತಿರುವುದನ್ನು ಮನಗಂಡು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ನಾಲ್ಕು ಹಾಗೂ ಮೈಸೂರು, ಶಿವಮೊಗ್ಗ, ಹುಬ್ಬಳ್ಳಿ, ಕಲಬುರಗಿ, ಬಳ್ಳಾರಿ, ಹಾಸನ, ದಾವಣಗೆರೆ, ಗದಗ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ತಲಾ ಒಂದರಂತೆ ಸುಸಜ್ಜಿತವಾದ ತಾತ್ಕಾಲಿಕ ವಸತಿ ಗೃಹ ಸೌಲಭ್ಯವನ್ನು ನಿರ್ಮಾಣ ಮಾಡಲಿದೆ.

163. ನಿರ್ಮಾಣ ಚಟುವಟಿಕೆಗಳ ವ್ಯಾಪ್ತಿಯನ್ನು ನಿಖರವಾಗಿ ನಿರ್ಣಯಿಸುವ ಮೂಲಕ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಸಂಪನ್ಮೂಲವನ್ನು ಹೆಚ್ಚಿಸಲು ಜಿಯೋ ಸ್ಪೇಷಿಯಲ್ ತಂತ್ರಜ್ಞಾನವನ್ನು ಬಳಸಿಕೊಳ್ಳಲಾಗುವುದು.

164. ಜಾಗತಿಕ ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಕೈಗಾರಿಕೆಗಳ ಅಗತ್ಯತೆಗೆ ತಕ್ಕಂತೆ ನುರಿತ ಮಾನವ ಸಂಪನ್ಮೂಲವನ್ನು ಸೃಷ್ಟಿಸಲು, TATA Technologies Limited ರವರ ಸಹಯೋಗದೊಂದಿಗೆ ಹಬ್ ಮತ್ತು ಸ್ಪೋಕ್ ಮಾದರಿಯಲ್ಲಿ 150 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು 4636 ಕೋಟಿ ರೂ.ಗಳ ಹೂಡಿಕೆಯೊಂದಿಗೆ ಉನ್ನತೀಕರಿಸಲು ಕ್ರಮವಹಿಸಲಾಗಿದೆ. ಈ ಯೋಜನೆಯ

ಶೇ. 88ರಷ್ಟು ಅಂದರೆ 4080 ಕೋಟಿ ರೂ.ಗಳ ವೆಚ್ಚವನ್ನು TATA Technologies Limited ರವರು ಭರಿಸಲಿದ್ದು, ರಾಜ್ಯ ಸರ್ಕಾರವು ಶೇ. 12ರಷ್ಟು ಅಂದರೆ 657 ಕೋಟಿ ರೂ.ಗಳನ್ನು ಭರಿಸಲಿದೆ.

165. ಕೇಂದ್ರ ಸರ್ಕಾರವು ಶಿಶಿಕ್ಷು ತರಬೇತಿ ಯೋಜನೆಯಡಿ ಪ್ರಸ್ತುತ 1500 ರೂ.ಗಳ ಶಿಷ್ಯವೇತನ ನೀಡುತ್ತಿದೆ. ಈ ಯೋಜನೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು 10,000 ಶಿಶಿಕ್ಷುಗಳಿಗೆ ಪ್ರತಿ ಮಾಹೆಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ 1500 ರೂ. ನೀಡಲು ಪ್ರಸ್ತಾಪಿಸಿದೆ. ಈ ಯೋಜನೆಗೆ 18 ಕೋಟಿ ರೂ.ಗಳ ಅನುದಾನವನ್ನು ಒದಗಿಸಲು ಪ್ರಸ್ತಾಪಿಸಲಾಗಿದೆ.

166. ರಾಜ್ಯದಲ್ಲಿ ಉದ್ಯಮ ಸಿದ್ಧ ಮಾನವ ಸಂಪನ್ಮೂಲವನ್ನು ಒದಗಿಸುವ ಉದ್ದೇಶಕ್ಕೆ ರಾಜ್ಯದ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಹೊಸದಾಗಿ 23 ಅಲ್ಪಾವಧಿ ಹಾಗೂ 11 ದೀರ್ಘಾವಧಿ ವೃತ್ತಿಪರ ಕೋರ್ಸುಗಳನ್ನು ಪ್ರಾರಂಭಿಸಲಾಗುವುದು.

167. ಗ್ರಾಮೀಣ ಪ್ರದೇಶದ ಯುವತಿಯರನ್ನು ಸಬಲರನ್ನಾಗಿಸುವ ನಿಟ್ಟಿನಲ್ಲಿ ಪ್ರಾಯೋಗಿಕವಾಗಿ, 1000 ಯುವತಿಯರಿಗೆ ಮೃದು ಕೌಶಲ್ಯ (Soft skill), ಸಂವಹನ ಕೌಶಲ್ಯ ಮತ್ತು ವ್ಯಕ್ತಿತ್ವ ವಿಕಸನದ ತರಬೇತಿಯನ್ನು ಸರ್ಕಾರಿ ಸಂಸ್ಥೆಗಳಲ್ಲಿ ನೀಡಲಾಗುವುದು.

168. ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ಕೇಂದ್ರ ಸರ್ಕಾರವು 'ಒಂದು ರಾಷ್ಟ್ರ, ಒಂದು ಪಡಿತರ ಚೀಟಿ'

ಯೋಜನೆಯನ್ನು ಜಾರಿಗೆ ತಂದಿದೆ. ಈ ಯೋಜನೆಯನ್ವಯ ಇತರೆ ರಾಜ್ಯಗಳ ವಲಸಿಗರು ಹಾಗೂ ರಾಜ್ಯದಲ್ಲಿನ ಒಂದು ಜಿಲ್ಲೆಯಿಂದ ಮತ್ತೊಂದು ಜಿಲ್ಲೆಗೆ ವಲಸೆ ಬಂದಿರುವವರು ರಾಜ್ಯದ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರ ಪದಾರ್ಥಗಳನ್ನು ಪಡೆಯಲು ಅವಕಾಶವನ್ನು ಕಲ್ಪಿಸಲಾಗಿದೆ.

169. ಸರ್ವೋದಯ ಮತ್ತು ಕ್ಷೇಮಾಭಿವೃದ್ಧಿ ವಲಯಕ್ಕೆ 2021–22ನೇ ಸಾಲಿನಲ್ಲಿ ಒಟ್ಟಾರೆಯಾಗಿ 62,150 ಕೋಟಿ ರೂ. ಅನುದಾನ ಒದಗಿಸಲಾಗಿದೆ.

## ವಲಯ 3: ಆರ್ಥಿಕ ಅಭಿವೃದ್ಧಿಗೆ ಪ್ರಚೋದನೆ

170. ರಾಜ್ಯದ ಆರ್ಥಿಕ ಅಭಿವೃದ್ಧಿಗೆ ಪೂರಕ ವಾತಾವರಣ ಸೃಷ್ಟಿಸಲು ನಮ್ಮ ಸರ್ಕಾರ ಆದ್ಯತೆ ನೀಡಿದೆ. ಕೋವಿಡ್–19ರ ಲಾಕ್‌ಡೌನ್ ಸಂದರ್ಭದಲ್ಲಿ ಸ್ಥಗಿತಗೊಂಡ ಆರ್ಥಿಕ ಚಟುವಟಿಕೆಗಳನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗಳಂತೆ ರಾಜ್ಯ ಸರ್ಕಾರವು ತ್ವರಿತವಾಗಿ ಪುನರಾರಂಭಿಸಲು ಎಲ್ಲಾ ರೀತಿಯ ಕ್ರಮ ಕೈಗೊಂಡಿದೆ. ಹೊಸ ವಿಮಾನ ನಿಲ್ದಾಣಗಳು, ಹೆದ್ದಾರಿ ಅಭಿವೃದ್ಧಿ, ವಿದ್ಯುತ್ ಸ್ವಾವಲಂಬನೆ, ರೈಲ್ವೆ ಯೋಜನೆಗಳು ಮತ್ತು ಇತರ ವಲಯಗಳ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ. ಆ ಮೂಲಕ ಹೆಚ್ಚಿನ ಉದ್ಯೋಗ ಸೃಷ್ಟಿಗೆ ಅವಕಾಶ ಕಲ್ಪಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಇದರೊಂದಿಗೆ ಪ್ರಧಾನಮಂತ್ರಿಯವರ ಕರೆಯ ಮೇರೆಗೆ ವಿವಿಧ ತಂತ್ರಜ್ಞಾನ ಹಾಗೂ ಉತ್ಪನ್ನಗಳನ್ನು ದೇಶೀಯವಾಗಿ ಅಭಿವೃದ್ಧಿಪಡಿಸುವ ಮೂಲಕ ಸ್ವಾವಲಂಬನೆಯ ಕಡೆಗೆ ದೇಶದ ಮುನ್ನಡೆಯಲ್ಲಿ ಕರ್ನಾಟಕವೂ ಮಹತ್ವದ ಪಾತ್ರ ವಹಿಸಲಿದೆ.

171. 2019ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಗ್ರಾಮೀಣ ಜನತೆಗೆ 55 LPCD ಯಂತೆ ಶಾಶ್ವತವಾಗಿ ಶುದ್ಧ ಕುಡಿಯುವ ನೀರನ್ನು ಒದಗಿಸುವ ಉದ್ದೇಶದಿಂದ 'ಜಲಧಾರೆ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಡಿ 6201 ಕೋಟಿ ರೂ. ಮೊತ್ತದ ಕಾಮಗಾರಿಗಳು ಚಾಲ್ತಿಯಲ್ಲಿರುತ್ತವೆ. ಈ ಯೋಜನೆಯನ್ನು ಭಾರತ ಸರ್ಕಾರದ ಜಲ ಜೀವನ್ ಮಿಷನ್ ಅಡಿ ಒಗ್ಗೂಡಿಸಲಾಗಿದೆ.

172. ಕೇಂದ್ರ ಸರ್ಕಾರವು ಮಹತ್ವಾಕಾಂಕ್ಷೆಯ 'ಜಲ ಜೀವನ್ ಮಿಷನ್' ಯೋಜನೆಯನ್ನು ಆಗಸ್ಟ್–2019ರಲ್ಲಿ ಜಾರಿಗೆ ತಂದಿರುತ್ತದೆ. ಜಲ ಜೀವನ್ ಮಿಷನ್ ಯೋಜನೆಯೊಂದಿಗೆ ಒಗ್ಗೂಡುವಿಕೆಯಿಂದ ರಾಜ್ಯದ 91 ಲಕ್ಷ ಗ್ರಾಮೀಣ ಕುಟುಂಬಗಳಿಗೆ 55 LPCD ಕುಡಿಯುವ ನೀರನ್ನು ಒದಗಿಸಲು 'ಮನೆ ಮನೆಗೆ ಗಂಗೆ' ಯೋಜನೆಯನ್ನು ರಾಜ್ಯ ಸರ್ಕಾರವು ಜಾರಿಗೆ ತಂದಿರುತ್ತದೆ. 2021–22ನೇ ಸಾಲಿನಲ್ಲಿ 22 ಲಕ್ಷ ಗ್ರಾಮೀಣ ಕುಟುಂಬಗಳಿಗೆ 4316 ಕೋಟಿ ರೂ.ಗಳ ವೆಚ್ಚದಲ್ಲಿ ಕಾರ್ಯಾತ್ಮಕ ನಳ ಸಂಪರ್ಕ ಒದಗಿಸಲಾಗುವುದು. 2022–23 ಸಾಲಿನಲ್ಲಿ 21 ಲಕ್ಷ ಗ್ರಾಮೀಣ ಕುಟುಂಬಗಳಿಗೆ 3172 ಕೋಟಿ ರೂ.ಗಳ ವೆಚ್ಚದಲ್ಲಿ ಕಾರ್ಯಾತ್ಮಕ ನಳ ಸಂಪರ್ಕವನ್ನು ನೀಡಲಾಗುವುದು. ಇದರ ಜೊತೆಗೆ 25,740 ಕೋಟಿ ರೂ. ವೆಚ್ಚದಲ್ಲಿ ಶಾಶ್ವತ ನೀರಿನ ಮೂಲಗಳಿಂದ ಹಳ್ಳಿಗಳಿಗೆ ಸಗಟು (Bulk) ನೀರು ಸರಬರಾಜು ಮಾಡಲಾಗುವುದು.

173. ಗ್ರಾಮೀಣ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 5622 ಗ್ರಾಮೀಣ ಗ್ರಂಥಾಲಯಗಳನ್ನು ಗ್ರಾಮೀಣ ಮಾಹಿತಿ

ಮತ್ತು ಜ್ಞಾನ ಕೇಂದ್ರಗಳನ್ನಾಗಿ ಉನ್ನತೀಕರಿಸಲಾಗುವುದು. ದೃಷ್ಟಿ ಸವಾಲಿಗೊಳಗಾದ ಮಕ್ಕಳಿಗೆ ಅನುಕೂಲವಾಗುವಂತೆ ಪ್ರತಿ ತಾಲ್ಲೂಕಿಗೊಂದರಂತೆ ಬ್ರೈಲ್ ಹಾಗೂ ಶ್ರವ್ಯ ಪುಸ್ತಕಗಳನ್ನು ಒಳಗೊಂಡ ಬೀಕನ್ (Beacon) ಗ್ರಂಥಾಲಯವನ್ನು ಪ್ರಾರಂಭಿಸಲಾಗುವುದು.

174. ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಮಾಹಿತಿಯ ವೀಕ್ಷಣೆಗಾಗಿ ಹಾಗೂ ಗ್ರಾಮ ಪಂಚಾಯಿತಿಗಳ ಆಡಳಿತ ಮತ್ತು ನಿರ್ವಹಣೆಯನ್ನು ಸುಧಾರಿಸಲು, ಸಂಯೋಜಿತ ಪಂಚತಂತ್ರ 2.0 ತಂತ್ರಾಂಶವನ್ನು ಪ್ರಚುರಪಡಿಸಿ, ಮೊಬೈಲ್ ಅಪ್ಲಿಕೇಷನ್‌ಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ.

175. ಪ್ರತಿ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಸಂಜೀವಿನಿ ಯೋಜನೆಯ ಮಹಿಳಾ ಸ್ವಸಹಾಯ ಸಂಘಗಳಿಂದ ರಚಿತವಾದ ಒಕ್ಕೂಟದ ಮೂಲಕ ಘನತ್ಯಾಜ್ಯ ನಿರ್ವಹಣೆಯನ್ನು ಸಮಗ್ರವಾಗಿ ಹಾಗೂ ವೈಜ್ಞಾನಿಕವಾಗಿ ಮಾಡಲಾಗುವುದು.

176. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿಯಲ್ಲಿರುವ ವಿವಿಧ ಇಂಜಿನಿಯರಿಂಗ್ ವಿಭಾಗಗಳನ್ನು ಒಟ್ಟುಗೂಡಿಸಿ ಒಂದೇ ವಿಭಾಗವನ್ನಾಗಿಸುವ ಮೂಲಕ ಆಡಳಿತಾತ್ಮಕ ವೆಚ್ಚವನ್ನು ಕಡಿಮೆ ಮಾಡುವುದರೊಂದಿಗೆ ಆಡಳಿತ ಯಂತ್ರದಲ್ಲಿ ದಕ್ಷತೆಯನ್ನು ಹೆಚ್ಚಿಸಲಾಗುವುದು.

177. ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರವು ಬದ್ಧವಾಗಿದ್ದು, ಪ್ರಸಕ್ತ ಸಾಲಿನಲ್ಲಿ ಕಲ್ಯಾಣ ಕರ್ನಾಟಕ

ಪ್ರದೇಶಾಭಿವೃದ್ಧಿ ಮಂಡಳಿಗೆ 1500 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು. ಇದರಡಿಯಲ್ಲಿ ಹೆಚ್ಚಿನ ಗಾತ್ರದ ಯೋಜನೆಗಳಿಗೆ (Macro Schemes) ಆದ್ಯತೆ ನೀಡಲಾಗುವುದು.

178. ರಾಜ್ಯದಲ್ಲಿ ಪ್ರಾದೇಶಿಕ ಅಸಮತೋಲನೆಯನ್ನು ನಿವಾರಿಸಲು ಡಾ. ಡಿ.ಎಂ. ನಂಜುಂಡಪ್ಪ ವರದಿಯನ್ವಯ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗಾಗಿ ವಿಶೇಷ ಅಭಿವೃದ್ಧಿ ಯೋಜನೆಯನ್ನು ಮುಂದುವರೆಸಲು 2021–22ನೇ ಸಾಲಿನಲ್ಲಿ 3000 ಕೋಟಿ ರೂ. ಅನುದಾನ ಒದಗಿಸಲಾಗುವುದು.

179. ನೀತಿ ಆಯೋಗದ ಎಸ್‌ಡಿಜಿ ಇಂಡಿಯಾ ಇಂಡೆಕ್ಸ್‌ನಲ್ಲಿ ರಾಜ್ಯದ ಶ್ರೇಣಿಯನ್ನು ನಿರಂತರವಾಗಿ ಸುಧಾರಿಸಲು, ರಾಜ್ಯದ ಯೋಜನೆಗಳನ್ನು ಸುಸ್ಥಿರ ಅಭಿವೃದ್ಧಿ ಗುರಿ ಸಾಧನೆಗೆ ಪೂರಕವಾಗಿ ರೂಪಿಸಲಾಗುವುದು.

180. ರಾಜ್ಯ ಸರ್ಕಾರದ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಹಾಗೂ ಜನಸ್ನೇಹಿಯಾಗಿ ಅನುಷ್ಠಾನಗೊಳಿಸಲು ಕೆಲವೇ ಅಂಬ್ರೆಲಾ ಯೋಜನೆಗಳಲ್ಲಿ ಸಮೀಕರಣ ಮಾಡಲಾಗುವುದು.

181. ಸಮುದಾಯದ ಅಭಿವೃದ್ಧಿ ಅಗತ್ಯತೆಗಳ ಪೂರೈಕೆಗೆ ಖಾಸಗಿ ವಲಯದ ನೆರವನ್ನು (ಸಿಎಸ್‌ಆರ್ ಅನುದಾನ) ಪಡೆಯಲು 'ಆಕಾಂಕ್ಷ' ತಂತ್ರಾಂಶದ ಮೂಲಕ ಖಾಸಗಿ ಸಂಸ್ಥೆಗಳೊಂದಿಗೆ ನೇರ ಸಂಪರ್ಕ ಸ್ಥಾಪಿಸಲಾಗುವುದು ಹಾಗೂ ಜಾಲತಾಣದ

ಮೂಲಕ ಪ್ರಗತಿ ವಿವರಗಳನ್ನು ವೀಕ್ಷಿಸಲು ಅವಕಾಶ ಕಲ್ಪಿಸಲಾಗುವುದು.

182. ಕೇಂದ್ರ ಸರ್ಕಾರದ ಆತ್ಮನಿರ್ಭರ್ ಯೋಜನೆಯಡಿಯಲ್ಲಿ ವಿವಿಧ ಇಲಾಖೆಗಳ ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮಾದರಿಯ ಪ್ರಸ್ತಾವನೆಗಳನ್ನು ಸಂಯೋಜಿಸಲು ಮತ್ತು ಮೇಲ್ವಿಚಾರಣೆ ಮಾಡಲು ಒಂದು ಆನ್‌ಲೈನ್ ವೇದಿಕೆಯನ್ನು ರಚಿಸಲಾಗುವುದು.

183. ಕರಾವಳಿ ಪ್ರದೇಶದ ಸಮಗ್ರ ಅಭಿವೃದ್ಧಿಗಾಗಿ ಯೋಜನೆಯನ್ನು ರೂಪಿಸಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಉದ್ದೇಶಿಸಲಾಗಿದೆ. ಈ ನಿಟ್ಟಿನಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರವನ್ನು ಕರಾವಳಿ ಅಭಿವೃದ್ಧಿ ಮಂಡಳಿಯನ್ನಾಗಿ ಪುನರ್ ರಚಿಸಲು ವಿಧೇಯಕವನ್ನು ತರಲಾಗುವುದು.

184. ರಾಜ್ಯದ 100 ಕೋಟಿ ರೂ. ಮೇಲೆ ಇರುವಂತಹ ಬೃಹತ್ ಯೋಜನೆಗಳನ್ನು ಕಡ್ಡಾಯವಾಗಿ ಮೌಲ್ಯಮಾಪನವನ್ನು ಮಾಡಲಾಗುವುದು.

185. ನಗರ ಹಾಗೂ ಪಟ್ಟಣಗಳಿಗೆ ಶಾಶ್ವತ ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿರುತ್ತದೆ. ಈ ನಿಟ್ಟಿನಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಹೊಸದಾಗಿ ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆ ಯೋಜನೆಗಳನ್ನು 900 ಕೋಟಿ ರೂ.ಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.

186. ನೀರು ಸರಬರಾಜು ಹಾಗೂ ಒಳಚರಂಡಿ ಜಾಲವನ್ನು ವ್ಯವಸ್ಥಿತವಾಗಿ ಅಭಿವೃದ್ಧಿಪಡಿಸಿ ನಿರ್ವಹಿಸಲು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಹೊರವಲಯ ಪ್ರದೇಶವನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವ್ಯಾಪ್ತಿಗೆ ಸೇರಿಸಲಾಗುವುದು.

187. ಮೂಲ ಸೌಕರ್ಯ ಕಾಮಗಾರಿಗಳಿಗೆ ಅಗತ್ಯ ಜಮೀನು ಪಡೆಯಲು ಭೂಸ್ವಾಧೀನ ಪ್ರಕ್ರಿಯೆಯ ವೇಗ ಹೆಚ್ಚಿಸಲು ನಮ್ಮ ಸರ್ಕಾರ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಗೆ ತಿದ್ದುಪಡಿ ತರಲು ಉದ್ದೇಶಿಸಿದೆ. ಇಂತಹ ಯೋಜನೆಗಳಿಗೆ ಬಿಟ್ಟುಕೊಡುವ ಖಾಸಗಿ ಸ್ವತ್ತಿಗೆ ಟಿಡಿಆರ್ ನೀಡುವ ಪ್ರಕ್ರಿಯೆಯನ್ನು ಸರಳೀಕರಿಸಲಾಗುವುದು. ಆರ್ಥಿಕ ದುರ್ಬಲರಿಗೆ ವಸತಿ ನಿರ್ಮಾಣ, ಕೊಳಚೆ ಪ್ರದೇಶದ ಅಭಿವೃದ್ಧಿ ಮತ್ತು ಕಡಿಮೆ ಆದಾಯದ ಗುಂಪಿನ ಮನೆಗಳ ನಿರ್ಮಾಣವನ್ನು ಉತ್ತೇಜಿಸಲು ಸೂಕ್ತ ತಿದ್ದುಪಡಿಗಳನ್ನು ತರಲಾಗುವುದು.

188. ಭಾರತೀಯ ಮಾನಕ ಬ್ಯೂರೋ (ಬಿ.ಐ.ಎಸ್.) 10500–2012ರ ಪ್ರಕಾರ ನೀರಿನ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲು ಹಾಗೂ ನಗರವಾಸಿಗಳಿಗೆ ಸುರಕ್ಷಿತ ಕುಡಿಯುವ ನೀರಿನ ಸೌಲಭ್ಯ ಒದಗಿಸಲು 26 AMRUT ನಗರಗಳಲ್ಲಿ ನೀರಿನ ಪರೀಕ್ಷಾ ಪ್ರಯೋಗಾಲಯಗಳನ್ನು 17 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

189. ಜೈವಿಕವಾಗಿ ವಿಘಟನೀಯವಲ್ಲದ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಐದು

ಮಹಾನಗರಪಾಲಿಕೆಗಳಲ್ಲಿ ದಿನಕ್ಕೆ ಕನಿಷ್ಠ 10 ಟನ್ ಸಾಮರ್ಥ್ಯದ ಮಟೀರಿಯಲ್ ರಿಕವರಿ ಸೌಲಭ್ಯಗಳನ್ನು 11 ಕೋಟಿ ರೂ.ಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

190. ಘನತ್ಯಾಜ್ಯ ನಿರ್ವಹಣೆಯಲ್ಲಿ ಸಾರ್ವಜನಿಕ ಸಹಭಾಗಿತ್ವವನ್ನು ಉತ್ತೇಜಿಸಲು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸ್ವಚ್ಛ ಗೃಹ ಕಲಿಕಾ ಕೇಂದ್ರಗಳನ್ನು ಒಂಭತ್ತು ಕೋಟಿ ರೂ.ಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

191. ಕೇಂದ್ರೀಕೃತ ಹಸಿ ತ್ಯಾಜ್ಯ ಸಂಸರಣಾ ಕೇಂದ್ರಗಳ ಮೇಲಿನ ಹೊರೆ ಹಾಗೂ ಸಾರಿಗೆ ವೆಚ್ಚವನ್ನು ಕಡಿಮೆ ಮಾಡಲು ರಾಜ್ಯದ 10 ಮಹಾನಗರಪಾಲಿಕೆಗಳು ಹಾಗೂ 59 ನಗರಸಭೆಗಳಲ್ಲಿ ಒಟ್ಟು 89 ಸಮುದಾಯ ಮಿಶ್ರಗೊಬ್ಬರ ಘಟಕಗಳನ್ನು 2.50 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

192. ನಗರ ಪ್ರದೇಶಗಳಲ್ಲಿ ಸಾರ್ವಜನಿಕ ಸಾರಿಗೆ ಬಳಕೆಯನ್ನು ಉತ್ತೇಜಿಸಲು, ಪೂರಕ ಮೂಲಸೌಕರ್ಯ ಒದಗಿಸಲು ಹಾಗೂ ಇತರ ಪರಿಸರ ಸ್ನೇಹಿ ಸಂಚಾರ ವ್ಯವಸ್ಥೆಯನ್ನು ಪ್ರೋತ್ಸಾಹಿಸಲು 'ನಗರ ಬಸ್ ಸೇವೆಗಳ ವರ್ಧನೆ' ಯೋಜನೆಯನ್ನು ಕೇಂದ್ರ ಸರ್ಕಾರ ಘೋಷಿಸಿದೆ. ಈ ಯೋಜನೆಯ ಗರಿಷ್ಠ ಲಾಭವನ್ನು ಪಡೆದು ರಾಜ್ಯದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸಲಾಗುವುದು.

193. ಮಲೆನಾಡು ಮತ್ತು ಕರಾವಳಿ ಭಾಗದಲ್ಲಿ ಸಮರ್ಪಕ ರಸ್ತೆ ಸಂಪರ್ಕವಿಲ್ಲದ ಸ್ಥಳಗಳಲ್ಲಿ ಕಾಲುಸಂಕಗಳನ್ನು ನಿರ್ಮಿಸುವ 'ಗ್ರಾಮಬಂಧ ಸೇತುವೆ' ಯೋಜನೆಯನ್ನು 100 ಕೋಟಿ ರೂ.ಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.

194. 2019–20ನೇ ಸಾಲಿನಲ್ಲಿ ಅತಿವೃಷ್ಟಿಯಿಂದ ಕೊಡಗು ಜಿಲ್ಲೆಯಲ್ಲಿ ಉಂಟಾದ ಪ್ರವಾಹ ಹಾಗೂ ಭೂಕುಸಿತದಿಂದಾಗಿ ಹಾನಿಯಾದ ಸಾರ್ವಜನಿಕ ರಸ್ತೆ, ಸೇತುವೆ, ತಡೆಗೋಡೆ, ಕಟ್ಟಡ ಹಾಗೂ ಇತರ ಮೂಲಭೂತ ಸೌಕರ್ಯಗಳನ್ನು ದುರಸ್ತಿ/ ಪುನರ್ ನಿರ್ಮಾಣ ಮಾಡಲು 100 ಕೋಟಿ ರೂ. ಅಂದಾಜು ವೆಚ್ಚದ ವಿಶೇಷ ಪ್ಯಾಕೇಜನ್ನು ಘೋಷಿಸಲಾಗಿತ್ತು. ಈ ಕಾಮಗಾರಿಗಳಿಗಾಗಿ ಈಗಾಗಲೇ 65 ಕೋಟಿ ರೂ. ಬಿಡುಗಡೆ ಮಾಡಲಾಗಿದ್ದು, ಬಾಕಿ ಕಾಮಗಾರಿಗಳನ್ನು 2021–22ನೇ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು.

195. ಬೆಳಗಾವಿ ನಗರದ ಝೂಡ್‌ಶಹಾಪುರ ಗ್ರಾಮದ ರಾಷ್ಟ್ರೀಯ ಹೆದ್ದಾರಿ 4ಎ ರಿಂದ ಬೆನ್ನಾಳಿ ಗ್ರಾಮದ ರಾಷ್ಟ್ರೀಯ ಹೆದ್ದಾರಿ 4 ವರೆಗೆ ಸಂಪರ್ಕ ಕಲ್ಪಿಸಲು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ವರ್ತುಲ ರಸ್ತೆ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ. ಈ ಉದ್ದೇಶಕ್ಕಾಗಿ ಭೂಸ್ವಾಧೀನ ವೆಚ್ಚದ ಶೇ 50ರಷ್ಟು ಮೊತ್ತ 140 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರದಿಂದ ಒದಗಿಸಲಾಗುವುದು.

196. ರಾಯಚೂರು ನಗರದಲ್ಲಿ ಸುಗಮ ಸಾರಿಗೆ ಸಂಚಾರಕ್ಕಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ನೆರವಿನೊಂದಿಗೆ ರಿಂಗ್ ರಸ್ತೆಯನ್ನು ಅಭಿವೃದ್ಧಿಪಡಿಸಲು ಕ್ರಮಕೈಗೊಳ್ಳಲಾಗುವುದು.

197. ವೈಜ್ಞಾನಿಕ ಸಂಚಾರ ನಿರ್ವಹಣಾ ವ್ಯವಸ್ಥೆಯಡಿ ಅಪಘಾತಗಳನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಅತ್ಯಾಧುನಿಕ ಸಂಚಾರ ವ್ಯವಸ್ಥೆ, ಇಂಟಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಂ ಮತ್ತು ಸೇಫ್ಟಿ ಸೊಲ್ಯೂಷನ್ಸ್ ಅನ್ನು ಪ್ರಾಯೋಗಿಕವಾಗಿ ಶಿವಮೊಗ್ಗ-ಸವಳಂಗ-ಶಿಕಾರಿಪುರ-ಶಿರಾಳಕೊಪ್ಪ ಮತ್ತು ಹಾಸನ-ರಾಮನಾಥಪುರ-ಪಿರಿಯಾಪಟ್ಟಣ ರಸ್ತೆಗಳಲ್ಲಿ ರಸ್ತೆ ಸುರಕ್ಷತಾ ನಿಧಿಯಿಂದ, 18 ಕೋಟಿ ರೂ.ಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.

198. ರಾಜ್ಯದ ರೈಲ್ವೆ ಜಾಲವನ್ನು ವಿಸ್ತರಿಸಲು ರೈಲ್ವೆ ಮಂತ್ರಾಲಯದೊಂದಿಗೆ ರಾಜ್ಯ ಸರ್ಕಾರವು 50:50ರ ವೆಚ್ಚ ಹಂಚಿಕೆಯ ಆಧಾರದ ಮೇಲೆ 1173 ಕಿ.ಮೀ.ಗಳ ಏಳು ಹೊಸ ರೈಲ್ವೆ ಯೋಜನೆಗಳನ್ನು ಕೈಗೆತ್ತಿಕೊಂಡಿದೆ. ಈ ಕಾಮಗಾರಿಗಳ ಅಂದಾಜು ವೆಚ್ಚ 7984 ಕೋಟಿ ರೂ.ಗಳಾಗಿದ್ದು, ಇದರಲ್ಲಿ 3991 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರವು ಭರಿಸಲಿದೆ. ಈ ರೈಲು ಮಾರ್ಗಗಳ ಭೂಸ್ವಾಧೀನಕ್ಕೆ ರಾಜ್ಯ ಸರ್ಕಾರವು 2630 ಕೋಟಿ ರೂ.ಗಳನ್ನು ವೆಚ್ಚ ಮಾಡಲಿದೆ.

199. ಕೇಂದ್ರ ಸಚಿವರಾಗಿದ್ದ ದಿವಂಗತ ಸುರೇಶ್ ಅಂಗಡಿಯವರ ಒತ್ತಾಸೆಯ ಫಲವಾಗಿ ಧಾರವಾಡ-ಕಿತ್ತೂರು-ಬೆಳಗಾವಿ 73 ಕಿ.ಮೀ. ಉದ್ದದ ಹೊಸ ರೈಲು ಮಾರ್ಗವನ್ನು

927 ಕೋಟಿ ರೂ. ವೆಚ್ಚದಲ್ಲಿ ಪ್ರಾರಂಭಿಸಲು 2020–21ನೇ ಸಾಲಿನ ಕೇಂದ್ರ ಆಯವ್ಯಯದಲ್ಲಿ ಘೋಷಿಸಲಾಗಿದೆ. ಈ ಯೋಜನೆಯ ಒಟ್ಟು ವೆಚ್ಚದ ಶೇ.50 ರಷ್ಟನ್ನು ಮತ್ತು ಭೂಸ್ವಾಧೀನದ ಸಂಪೂರ್ಣ ವೆಚ್ಚವನ್ನು ರಾಜ್ಯ ಸರ್ಕಾರವು ಭರಿಸಲಿದೆ. ಈ ಹೊಸ ರೈಲುಮಾರ್ಗಕ್ಕೆ ರಾಜ್ಯ ಸರ್ಕಾರವು 463 ಕೋಟಿ ರೂ.ಗಳನ್ನು ಅನುದಾನವಾಗಿ ನೀಡಲಿದೆ. ಶೀಘ್ರವೇ ಈ ಯೋಜನೆಯನ್ನು ಪೂರ್ಣಗೊಳಿಸುವುದು ದಿವಂಗತ ಸುರೇಶ್ ಅಂಗಡಿಯವರಿಗೆ ಸಲ್ಲಿಸುವ ನಿಜವಾದ ಗೌರವ.

200. ಸರ್ಕಾರಿ ಸ್ವಾಮ್ಯದ ವಿಮಾನ ನಿಲ್ದಾಣಗಳ ಅಭಿವೃದ್ಧಿ ಮತ್ತು ಕಾರ್ಯಾಚರಣೆಗಾಗಿ ರಾಜ್ಯ ಮತ್ತು ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ ನಡುವೆ ಜಂಟಿ ಉದ್ಯಮ ಕಂಪನಿ ರಚನೆಗಾಗಿ ಕ್ರಮವಹಿಸಲಾಗುವುದು. ಇದರಿಂದ ರಾಜ್ಯದಲ್ಲಿ ವಿಮಾನ ನಿಲ್ದಾಣಗಳು, ಹೆಲಿಪ್ಯಾಡ್‌ಗಳು ಮತ್ತು ವಾಟರ್ ಏರೋಡ್ರೋಮ್‌ಗಳ ಅಭಿವೃದ್ಧಿಯನ್ನು ಶೀಘ್ರಗತಿಯಲ್ಲಿ ನಿರ್ಮಾಣ ಮಾಡಲು ಸಹಕಾರಿಯಾಗಲಿದೆ.

201. ಆರ್ಥಿಕ ಚಟುವಟಿಕೆಗಳು ಮತ್ತು ಪ್ರವಾಸೋದ್ಯಮ ಉತ್ತೇಜನಕ್ಕೆ ಪೂರಕವಾಗಿ ವಿವಿಧ ಜಿಲ್ಲೆಗಳಲ್ಲಿ ವಾಯುಯಾನ ಸೌಲಭ್ಯ ಕಲ್ಪಿಸಲು ನಮ್ಮ ಸರ್ಕಾರ ಆದ್ಯತೆ ನೀಡಿದೆ. ಕಲಬುರಗಿ ಹಾಗೂ ಬೀದರ್‌ನಲ್ಲಿ ವಿಮಾನ ನಿಲ್ದಾಣ ಕಾರ್ಯಾರಂಭಗೊಳಿಸಿದ್ದು, ಶಿವಮೊಗ್ಗ ಮತ್ತು ವಿಜಯಪುರದಲ್ಲಿ ವಿಮಾನ ನಿಲ್ದಾಣಗಳ ಕಾಮಗಾರಿಯು 2020–21ನೇ ಸಾಲಿನಲ್ಲಿ ಕ್ರಮವಾಗಿ

384 ಕೋಟಿ ರೂ. ಮತ್ತು 220 ಕೋಟಿ ರೂ.ಗಳ ವೆಚ್ಚದಲ್ಲಿ ಈಗಾಗಲೇ ಪ್ರಾರಂಭವಾಗಿದ್ದು, ಶೀಘ್ರವಾಗಿ ಕಾರ್ಯಾಚರಣೆಗೊಳಿಸಲಾಗುವುದು.

202. ಹತ್ತು ವರ್ಷಕ್ಕಿಂತಲೂ ಹೆಚ್ಚು ಕಾಲ ಬಾಕಿ ಉಳಿದ ಹಾಸನ ವಿಮಾನ ನಿಲ್ದಾಣದ ಕಾಮಗಾರಿಯನ್ನು 175 ಕೋಟಿ ರೂ. ವೆಚ್ಚದಲ್ಲಿ ಈ ಸಾಲಿನಲ್ಲಿ ಪ್ರಾರಂಭಿಸಲಾಗುವುದು.

203. ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ಅಂಕೋಲಾದ ನೌಕಾ ವಾಯುನೆಲೆ ಸಮೀಪದಲ್ಲಿ ಸಿವಿಲ್ ಎನ್‌ಕ್ಲೇವ್ ಅನ್ನು ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುತ್ತಿದೆ.

204. ಕೊಚ್ಚಿಯಿಂದ ಮಂಗಳೂರುವರೆಗಿನ 450 ಕಿಲೋಮೀಟರ್ ಅನಿಲ ಪೈಪ್‌ಲೈನನ್ನು ಗೌರವಾನ್ವಿತ ಭಾರತದ ಪ್ರಧಾನಿಯವರು ಉದ್ಘಾಟಿಸಿದ್ದಾರೆ. 3000 ಕೋಟಿ ರೂ. ವೆಚ್ಚದಲ್ಲಿ ಪೂರ್ಣಗೊಳಿಸಲಾಗಿರುವ ಈ ಯೋಜನೆಯಿಂದ ಕರ್ನಾಟಕ ಮತ್ತು ಕೇರಳ ಎರಡು ರಾಜ್ಯಗಳಲ್ಲಿಯೂ ಉದ್ಯೋಗ ಸೃಷ್ಟಿಸುವಲ್ಲಿ ಮತ್ತು ಮಾಲಿನ್ಯವನ್ನು ಕಡಿಮೆ ಮಾಡುವಲ್ಲಿ ಇದು ಪ್ರಮುಖ ಪಾತ್ರ ವಹಿಸುತ್ತದೆ.

205. ರಾಜ್ಯದ ಬಂದರುಗಳನ್ನು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಪರ್ಕಿಸಲು ಹೊನ್ನಾವರದ ಕಾಸರಕೋಡ ಬದಿಯಲ್ಲಿ ಅಭಿವೃದ್ಧಿಪಡಿಸುತ್ತಿರುವ ಬಂದರು ಪ್ರದೇಶಕ್ಕೆ ರಾಷ್ಟ್ರೀಯ ಹೆದ್ದಾರಿ–66 ರಿಂದ ಭಾರತಮಾಲಾ ಯೋಜನೆಯಡಿ ಚತುಷ್ಪಥ ಸಂಪರ್ಕ ರಸ್ತೆಯನ್ನು 100 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಭಾರತೀಯ ರಾಷ್ಟ್ರೀಯ ಹೆದ್ದಾರಿ

ಪ್ರಾಧಿಕಾರರವರು ಟೆಂಡರ್ ಕರೆದಿದ್ದು, ಕಾಮಗಾರಿಯನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲಾಗುವುದು.

206. ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವುದರೊಂದಿಗೆ ಕಡಿಮೆ ವೆಚ್ಚದಲ್ಲಿ ಪ್ರಯಾಣಿಸಲು ಮತ್ತು ಸರಕು ಸಾಗಿಸಲು ಅನುಕೂಲವಾಗುವಂತೆ ಮಂಗಳೂರು ಮತ್ತು ಪಣಜಿ ನಡುವೆ ಜಲಮಾರ್ಗಗಳನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗುವುದು.

207. ಕೇಂದ್ರ ಸರ್ಕಾರದ ರಾಷ್ಟ್ರೀಯ ಜಲಮಾರ್ಗಗಳ ಪ್ರಾಧಿಕಾರದ ಧನಸಹಾಯದೊಂದಿಗೆ ಒಟ್ಟು 60 ಕೋಟಿ ರೂ. ಮೊತ್ತದಲ್ಲಿ ರಾಜ್ಯದ ಕಾಳಿ ನದಿ, ನೇತ್ರಾವತಿ ನದಿ, ಗುರುಪುರ ಹಾಗೂ ಉಡುಪಿ ಜಿಲ್ಲೆಯ ಹಂಗಾರಕಟ್ಟಾದಿಂದ ಮಣಿಪಾಲದವರೆಗೆ, ಬಾಗಲಕೋಟೆ ಜಿಲ್ಲೆಯ ಆಲಮಟ್ಟಿ ಜಲಾಶಯದಿಂದ ಬಾಗಲಕೋಟೆಗೆ ಜಲಮಾರ್ಗಗಳನ್ನು ಪ್ರವಾಸೋದ್ಯಮಕ್ಕೆ ಪೂರಕವಾಗುವ ನಿಟ್ಟಿನಲ್ಲಿ ಅಭಿವೃದ್ಧಿಪಡಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

208. 2013ನೇ ಸಾಲಿನಲ್ಲಿ ದೇಶದಲ್ಲಿ ಮೊದಲ ಏರೋಸ್ಪೇಸ್ ಪಾಲಿಸಿಯನ್ನು ಘೋಷಿಸಿದ ರಾಜ್ಯವೆಂಬ ಹೆಗ್ಗಳಿಕೆ ನಮ್ಮದು. ಕರ್ನಾಟಕವು ರಕ್ಷಣಾ ಮತ್ತು ಏರೋಸ್ಪೇಸ್ ವಲಯದ ರಫ್ತಿನಲ್ಲಿ ಶೇ.65 ಕ್ಕಿಂತಲೂ ಹೆಚ್ಚಿನ ಪಾಲು ಹೊಂದಿದೆ. ದೇಶದಲ್ಲಿ ಈ ಕ್ಷೇತ್ರಗಳಲ್ಲಿ ಮುನ್ನಡೆ ಕಾಯ್ದುಕೊಳ್ಳಲು ಆತ್ಮನಿರ್ಭರ್ ಯೋಜನೆಯಡಿ ದೇಶೀಯ ಉತ್ಪಾದನೆಯತ್ತ

ಗಮನಹರಿಸಲು ಹೊಸ ಏರೋಸ್ಪೇಸ್ ಮತ್ತು ರಕ್ಷಣಾ ನೀತಿಯನ್ನು ಹೊರತರಲಾಗುವುದು.

209. ಕೋವಿಡ್-19ರ ಹಿನ್ನೆಲೆಯಲ್ಲಿ ಇನ್ವೆಸ್ಟ್ ಕರ್ನಾಟಕ-2020 ಜಾಗತಿಕ ಹೂಡಿಕೆದಾರರ ಸಮಾವೇಶವನ್ನು ಆಯೋಜಿಸಲು ಸಾಧ್ಯವಾಗಿರುವುದಿಲ್ಲ. ಈ ಸಮಾವೇಶವನ್ನು ಪ್ರಸಕ್ತ ಸಾಲಿನಲ್ಲಿ ಬೆಂಗಳೂರಿನಲ್ಲಿ ಆಯೋಜಿಸಲಾಗುವುದು.

210. ಯಾದಗಿರಿ ಜಿಲ್ಲೆಯ ಕಡೆಚೂರು ಕೈಗಾರಿಕಾ ಪ್ರದೇಶದ 1500 ಎಕರೆ ಭೂಮಿಯಲ್ಲಿ 1478 ಕೋಟಿ ರೂ. ವೆಚ್ಚದಲ್ಲಿ ಕೇಂದ್ರ ಸರ್ಕಾರದ ನೆರವಿನೊಂದಿಗೆ ವಿಶ್ವ ದರ್ಜೆಯ ಮೂಲಭೂತ ಸೌಕರ್ಯವುಳ್ಳ 'ಬಲ್ಕ್ ಡ್ರಗ್ ಪಾರ್ಕ್' ಅನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ.

211. ಪ್ಲಾಸ್ಟಿಕ್ ಮತ್ತು ಪೆಟ್ರೋಕೆಮಿಕಲ್ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಮಂಗಳೂರಿನ ಗಂಜಿಮಠದಲ್ಲಿ 100 ಎಕರೆ ಭೂಮಿಯಲ್ಲಿ 66 ಕೋಟಿ ರೂ. ಯೋಜನಾ ವೆಚ್ಚದಲ್ಲಿ ಕೇಂದ್ರ ಸರ್ಕಾರದ ನೆರವಿನೊಂದಿಗೆ 'ಪ್ಲಾಸ್ಟಿಕ್ ಪಾರ್ಕ್' ಅನ್ನು ಅಭಿವೃದ್ಧಿಪಡಿಸಲಾಗುವುದು.

212. ದೇಶದಲ್ಲಿ 2017ನೇ ಸಾಲಿನಲ್ಲಿ ವಿದ್ಯುತ್ ವಾಹನ ಮತ್ತು ಇಂಧನ ಶೇಖರಣಾ ನೀತಿಯನ್ನು ಘೋಷಿಸಿದ ಮೊದಲ ರಾಜ್ಯ ಕರ್ನಾಟಕ. ವಿದ್ಯುತ್ ವಾಹನದ ಉತ್ಪಾದನೆ ಹೆಚ್ಚಳ, ಉತ್ತೇಜನಗಳನ್ನು ನವೀಕರಿಸಲು ಮತ್ತು ಕರ್ನಾಟಕದಲ್ಲಿ ವಿದ್ಯುತ್ ವಾಹನಗಳ ಉಪಯೋಗವನ್ನು ವೇಗಗೊಳಿಸಲು ಈ ನೀತಿಯನ್ನು ಪರಿಷ್ಕರಿಸಲಾಗುವುದು.

213. ಬೆಂಗಳೂರು–ಮುಂಬೈ ಮತ್ತು ಬೆಂಗಳೂರು–ಚೆನ್ನೈ ಕೈಗಾರಿಕಾ ಕಾರಿಡಾರ್‌ಗಳಲ್ಲಿ ಲಭ್ಯವಿರುವ ಅವಕಾಶಗಳನ್ನು ಬಳಸಿಕೊಂಡು ಎರಡು ಕಡೆಗಳಲ್ಲಿ ತಲಾ ಕನಿಷ್ಠ 500 ಎಕರೆ ಜಾಗದಲ್ಲಿ ಮುಖ್ಯಮಂತ್ರಿಗಳ ಮೆಗಾ ಸಂಯೋಜಿತ ಕೈಗಾರಿಕಾ ಟೌನ್‌ಷಿಪ್‌ಗಳನ್ನು ಸ್ಥಾಪಿಸಲಾಗುವುದು. ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮಗಳ ವತಿಯಿಂದ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಾಣವಾಗಲಿರುವ ಈ ಟೌನ್‌ಷಿಪ್‌ಗಳಿಂದ ಮುಂದಿನ ಮೂರು ವರ್ಷಗಳಲ್ಲಿ ಅಂದಾಜು 10 ಸಾವಿರ ಕೋಟಿ ರೂ.ಗಳ ಖಾಸಗಿ ಬಂಡವಾಳ ಆಕರ್ಷಿಸುವ ಮೂಲಕ ಐದು ಲಕ್ಷ ಉದ್ಯೋಗಾವಕಾಶ ಸೃಷ್ಟಿಸುವ ನಿರೀಕ್ಷೆ ಇದೆ.

214. ರಾಜ್ಯದಲ್ಲಿ ಉತ್ಪಾದನಾ ವಲಯವನ್ನು ಆಕರ್ಷಿಸುವ ಉದ್ದೇಶದಿಂದ ಪೀಣ್ಯದಲ್ಲಿ ಕೈಗಾರಿಕಾ ಟೌನ್‌ಶಿಪ್‌ನ್ನು ಸ್ಥಾಪಿಸಲಾಗುವುದು. ಇಲ್ಲಿ ಅಗತ್ಯ ಮೂಲಭೂತ ಸೌಲಭ್ಯವನ್ನು 100 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

215. ರಾಜ್ಯದಲ್ಲಿ ಕೈಗಾರಿಕೆ ಸ್ಥಾಪನೆಯನ್ನು ಪ್ರೋತ್ಸಾಹಿಸಲು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕೈಗಾರಿಕೆಗಳಿಗೆ ಪ್ರತ್ಯೇಕ ಆಸ್ತಿ ತೆರಿಗೆ ಸ್ಲ್ಯಾಬ್ ಹೊಂದಲು ಉದ್ದೇಶಿಸಲಾಗಿದೆ.

216. ಕೃಷಿ ಯಾಂತ್ರೀಕರಣವನ್ನು ಉತ್ತೇಜಿಸಲು ಬೀದರ್‌ನಲ್ಲಿ ಕೃಷಿ ಉಪಕರಣಗಳ ತಯಾರಿಕಾ ಕ್ಲಸ್ಟರ್ ಅನ್ನು

ಅಭಿವೃದ್ಧಿಪಡಿಸಲಾಗುತ್ತಿದೆ. ಈ ಕ್ಲಸ್ಟರ್‌ನಲ್ಲಿ ಬರುವ ಕೈಗಾರಿಕೆಗಳಿಗೆ ಈಗಾಗಲೇ ಸ್ಥಾಪಿಸಿರುವ ಕ್ಲಸ್ಟರ್‌ಗಳ ಮಾದರಿಯಂತೆ ವಿಶೇಷ ಪ್ರೋತ್ಸಾಹಕ ಪ್ಯಾಕೇಜ್ ಅನ್ನು ಘೋಷಿಸುತ್ತೇನೆ.

217. ಸಂಕಷ್ಟದಲ್ಲಿರುವ ಕೈಮಗ್ಗ ನೇಕಾರರಿಗೆ ನೆರವು ನೀಡುವ ಉದ್ದೇಶದಿಂದ ಜಾರಿಗೆ ತರಲಾಗಿರುವ ನೇಕಾರರ ಸಮ್ಮಾನ್ ಯೋಜನೆಯನ್ನು ಪ್ರಸ್ತುತ ಸಾಲಿಗೂ ಮುಂದುವರೆಸಿ ಕೈಮಗ್ಗ ನೇಕಾರರಿಗೆ 2000 ರೂ.ಗಳ ಆರ್ಥಿಕ ನೆರವನ್ನು ಡಿ.ಬಿ.ಟಿ ಮೂಲಕ ನೇರವಾಗಿ ವರ್ಗಾವಣೆ ಮಾಡಲಾಗುವುದು.

218. ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಗುಳೇದಗುಡ್ಡ ನಗರದಲ್ಲಿ ನೇಕಾರರ ಜೀವನೋಪಾಯ ಉತ್ತೇಜಿಸಲು ಮತ್ತು ಸ್ಥಳೀಯವಾಗಿ ಉದ್ಯೋಗಾವಕಾಶಗಳನ್ನು ನೀಡಿ ಗುಳೇ ಹೋಗುವುದನ್ನು ತಡೆಗಟ್ಟಲು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಡಿ ಜವಳಿ ಪಾರ್ಕನ್ನು ಸ್ಥಾಪಿಸಲಾಗುವುದು.

219. ರಾಜ್ಯದ ಕೈಮಗ್ಗ ನೇಕಾರರಿಗೆ ಹೊಸ ವಿನ್ಯಾಸಗಳ ತಿಳುವಳಿಕೆ ನೀಡಲು ಹಾಗೂ ಉತ್ಪನ್ನಗಳ ಬೇಡಿಕೆ ಮತ್ತು ಆದಾಯ ಹೆಚ್ಚಿಸಲು ಉತ್ತರ ಕರ್ನಾಟಕದ ಭಾಗದಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಡಿ 'ಸ್ಮಾರ್ಟ್ ಹ್ಯಾಂಡ್‌ಲೂಮ್ ಡಿಸೈನ್ ಸ್ಟುಡಿಯೋ'ವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

220. ಕರ್ನಾಟಕ ರಾಜ್ಯವು 2008ರಲ್ಲಿಯೇ ರಾಜ್ಯ ಖನಿಜ ನೀತಿಯನ್ನು ಜಾರಿಗೆ ತಂದಿತ್ತು. ಗಣಿಗಾರಿಕೆ ಕ್ಷೇತ್ರದಲ್ಲಿ ಇನ್ನಷ್ಟು ಸುಧಾರಣೆಗಳನ್ನು ತರಲು ರಾಷ್ಟ್ರೀಯ ಖನಿಜ

ಕಾರ್ಯನೀತಿಗೆ ಸಮಾನವಾಗಿ **'**ರಾಜ್ಯ ಖನಿಜ ನೀತಿ 2021–2026**'** ನ್ನು ರೂಪಿಸಲಾಗುವುದು.

221. ಗಣಿ / ಕಲ್ಲುಗಣಿ ಗುತ್ತಿಗೆ ಮತ್ತು ಕ್ರಷರ್ ಲೈಸನ್ಸ್ ಕೋರಿ ಸಲ್ಲಿಸುವ ಅರ್ಜಿಗಳನ್ನು ನಿಗದಿತ ಸಮಯದೊಳಗಾಗಿ ವಿಲೇವಾರಿ ಮಾಡಲು ಏಕಗವಾಕ್ಷಿ ವ್ಯವಸ್ಥೆ ಜಾರಿಗೊಳಿಸಲಾಗುವುದು. ಇದರೊಂದಿಗೆ ಲೈಸನ್ಸ್ ಸಂಬಂಧಿತ ಕುಂದುಕೊರತೆಗಳನ್ನು ಶೀಘ್ರವಾಗಿ ಬಗೆಹರಿಸಲು ರಾಜ್ಯದ ನಾಲ್ಕು ಕಂದಾಯ ವಿಭಾಗಗಳಲ್ಲಿ ಗಣಿ ಅದಾಲತ್‌ಗಳನ್ನು ಪ್ರಾರಂಭಿಸಲಾಗುವುದು.

222. ಅಂತರ್‌ರಾಜ್ಯ ಪ್ರಸರಣ ವ್ಯವಸ್ಥೆಯಡಿಯಲ್ಲಿ ಹೊರ ರಾಜ್ಯಗಳಿಗೆ ವಿದ್ಯುತ್ ಮಾರಾಟ ಮಾಡಲು ಕಲಬುರಗಿ ತಾಲ್ಲೂಕಿನ ಫಿರೋಜಾಬಾದ್‌ನಲ್ಲಿ ಪವರ್ ಕಂಪೆನಿ ಆಫ್ ಕರ್ನಾಟಕ ಲಿಮಿಟೆಡ್‌ರವರ ಒಡೆತನಲ್ಲಿರುವ 1551 ಎಕರೆ ಜಮೀನಿನಲ್ಲಿ ಖಾಸಗಿ ಅಭಿವೃದ್ಧಿದಾರರ ಬಂಡವಾಳದೊಂದಿಗೆ 500 ಮೆಗಾ ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಪಾರ್ಕ್‌ನ್ನು ಕ್ರೆಡಲ್ ಸಂಸ್ಥೆಯಿಂದ ಸ್ಥಾಪಿಸಲು ಉದ್ದೇಶಿಸಲಾಗಿದೆ. ಈ ಸೋಲಾರ್ ಪಾರ್ಕ್‌ನ ಸ್ಥಾಪನೆಯಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸುವ ಮೂಲಕ ಸ್ಥಳೀಯ ಪ್ರದೇಶಾಭಿವೃದ್ಧಿಗೆ ನೆರವು ನೀಡಿದಂತಾಗುತ್ತದೆ.

223. KPCLನ 400/220 ಕಿಲೋವ್ಯಾಟ್ ಉಪಕೇಂದ್ರಗಳಲ್ಲಿರುವ ಉಪಕರಣಗಳ ಬದಲಾವಣೆಯೊಂದಿಗೆ ನವೀಕರಣ ಮತ್ತು ಆಧುನೀಕರಣವನ್ನು ಕೈಗೆತ್ತಿಕೊಂಡಿದ್ದು, ಮೊದಲ ಹಂತ

ಮುಕ್ತಾಯಗೊಂಡಿದೆ. ಎರಡನೆಯ ಹಂತವನ್ನು 100 ಕೋಟಿ ರೂ. ವೆಚ್ಚದಲ್ಲಿ ಕೇಂದ್ರ ವಿದ್ಯುತ್ ಮಂತ್ರಾಲಯದ ಅನುಮತಿಯೊಂದಿಗೆ ಪ್ರಾರಂಭಿಸಲಾಗುವುದು.

224. ಕೇಂದ್ರ ಸರ್ಕಾರದ 'ಸಮಸ್ತ್' ಯೋಜನೆಯಡಿ KPTCLನ ವಿದ್ಯುಚ್ಛಕ್ತಿಯ ವಹಿವಾಟು, ಮೀಟರಿಂಗ್ ಮತ್ತು ಲೆಕ್ಕಪರಿಶೋಧನೆಯ ಪ್ರಕ್ರಿಯೆಯನ್ನು ಸ್ವಯಂಚಾಲಿತಗೊಳಿಸಲು ಹಾಗೂ open access ವಿದ್ಯುತ್ ವ್ಯವಹಾರ, ಬಿಲ್ಲಿಂಗ್ ವರದಿಯನ್ನು ಅಂತರ್ಜಾಲದ ಮೂಲಕ ಸಮನ್ವಯ ಸಾಧಿಸಲು ಉದ್ದೇಶಿಸಲಾಗಿದೆ.

225. ಸೌರ ವಿದ್ಯುತ್‌ಗೆ ಸಂಬಂಧಿಸಿದ ಉಪಕರಣಗಳು ಮತ್ತು ತಂತ್ರಜ್ಞಾನಗಳ ಕುರಿತು ಸಂಶೋಧನೆ ಕೈಗೊಳ್ಳಲು ನಮ್ಮ ಸರ್ಕಾರ ಉತ್ತೇಜನ ನೀಡಲಿದೆ.

226. ರಾಜ್ಯದಲ್ಲಿ ವಿದ್ಯುತ್ ವಾಹನಗಳ ಬಳಕೆಯನ್ನು ಉತ್ತೇಜಿಸಲು ಹಾಗೂ ವಾಯುಮಾಲಿನ್ಯವನ್ನು ನಿಯಂತ್ರಿಸಲು 1000 ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಕೇಂದ್ರಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

227. ಸ್ವಚ್ಛ ಶಕ್ತಿ ಆಧಾರಿತ ನಿರಂತರ ವಿದ್ಯುತ್ ಸರಬರಾಜಿಗಾಗಿ 1000 ಮೆಗಾ ವ್ಯಾಟ್ Pumped Hydro Storage Plant ಯೋಜನೆಯನ್ನು 4000 ಕೋಟಿ ರೂ.ಗಳ ಖಾಸಗಿ ಹೂಡಿಕೆಯ ಆಧಾರದ ಮೇಲೆ ಅನುಷ್ಠಾನಗೊಳಿಸಲಾಗುವುದು.

228. ಕರ್ನಾಟಕದಲ್ಲಿ ನವೋದ್ಯಮಕ್ಕಿರುವ ಪೂರಕ ವಾತಾವರಣವನ್ನು ಮತ್ತಷ್ಟು ಬಲಪಡಿಸಲು ಕರ್ನಾಟಕ ಸ್ಟಾರ್ಟ್‌ಆಪ್ ಕಾರ್ಯನೀತಿಯನ್ನು ಪರಿಷ್ಕರಿಸಲಾಗುವುದು. ನಾವೀನ್ಯತೆಗೆ ಉತ್ತೇಜನ, ಹೆಚ್ಚಿನ ಉದ್ಯೋಗ ಸೃಜನೆ ಹಾಗೂ ಆರ್ಥಿಕ ಬೆಳವಣಿಗೆಯ ವೇಗವರ್ಧನೆ ಇದರ ಗುರಿಯಾಗಿದೆ.

229. ಇ.ಎಸ್.ಡಿ.ಎಂ. ವಲಯದಲ್ಲಿ ಹೂಡಿಕೆಗಳನ್ನು ಆಕರ್ಷಿಸುವ ಮತ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವ ಗುರಿಯೊಂದಿಗೆ ವಿಶೇಷ ಪ್ರೋತ್ಸಾಹಕ ಯೋಜನೆಯನ್ನು ಘೋಷಿಸಲಾಗಿದೆ. ಈ ಯೋಜನೆಯಡಿ ಜಮೀನು, ಸ್ಥಾವರ ಮತ್ತು ಯಂತ್ರೋಪಕರಣಗಳ ಮೇಲೆ ಬಂಡವಾಳ ಹೂಡಿಕೆಯ ಸಹಾಯಧನ ಒದಗಿಸಲಾಗುವುದು. ನೋಂದಣಿ ಮತ್ತು ಮುದ್ರಾಂಕ ಶುಲ್ಕ ಹಾಗೂ ಭೂ-ಪರಿವರ್ತನಾ ಶುಲ್ಕಗಳ ಮೇಲೆ ಶೇ.100ರಷ್ಟು ಮರುಪಾವತಿ ಒಳಗೊಂಡಂತೆ ಹಲವು ಪ್ರೋತ್ಸಾಹಕಗಳನ್ನು ನೀಡಲಾಗುವುದು. ಮುಂಬರುವ ಐದು ವರ್ಷಗಳಲ್ಲಿ 43,000 ನೇರ ಉದ್ಯೋಗ ಸೃಜನೆ ಹಾಗೂ ರಾಜ್ಯಕ್ಕೆ 5,000 ಕೋಟಿ ರೂ.ಗಳ ಹೂಡಿಕೆಯನ್ನು ನಿರೀಕ್ಷಿಸಲಾಗಿದೆ.

230. ಜೈವಿಕ ತಂತ್ರಜ್ಞಾನ ಉದ್ಯಮ ಹಾಗೂ ನವೋದ್ಯಮಗಳು ನಾವೀನ್ಯತೆಯೊಂದಿಗೆ ಮೌಲ್ಯವರ್ಧಿತ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಹಾಗೂ ಮೀನು ಮತ್ತು sea weed ಗಳಿಂದ ಉತ್ಪತ್ತಿಯಾಗುವ bioactive compounds ಗಳಿಂದ ಆಹಾರಗಳ ತಯಾರಿಕೆಯನ್ನು ಉತ್ತೇಜಿಸುವ ಸಲುವಾಗಿ ಆರು ಕೋಟಿ ರೂ. ಅಂದಾಜು ವೆಚ್ಚದಲ್ಲಿ ಮಂಗಳೂರಿನಲ್ಲಿ Advanced Biotech Innovation Center for

Aqua-Marine ಕೇಂದ್ರವನ್ನು ಸ್ಥಾಪಿಸಲಾಗುವುದು. 2021–22ರ ಸಾಲಿನಲ್ಲಿ ಈ ಉದ್ದೇಶಕ್ಕಾಗಿ ಎರಡು ಕೋಟಿ ರೂ. ಮೊತ್ತವನ್ನು ಹಂಚಿಕೆ ಮಾಡಲಾಗುತ್ತದೆ.

231. ನಾವೀನ್ಯತೆಯಲ್ಲಿ ಕರ್ನಾಟಕದ ನೇತೃತ್ವವನ್ನು ಕಾಯ್ದುಕೊಳ್ಳಲು ಮತ್ತು ನವೀನ ಉದಯೋನ್ಮುಖವಾದ ತಂತ್ರಜ್ಞಾನದ ಸಂಸ್ಥೆಗಳಿಗೆ ಬೆಂಬಲ ನೀಡಲು 100 ಕೋಟಿ ರೂ.ಗಳ ಹೊಸ Venture Capital Fund ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ. ರಾಜ್ಯ ಸರ್ಕಾರವು 25 ಕೋಟಿ ರೂ.ಗಳ ಪಾಲನ್ನು ನೀಡಲಿದ್ದು, ಉಳಿದ 75 ಕೋಟಿ ರೂ.ಗಳನ್ನು ಮತ್ತಿತರ ಸಂಸ್ಥೆಗಳಿಂದ ವಂತಿಕೆಯಾಗಿ ಪಡೆಯಲಾಗುವುದು.

232. ಅಗತ್ಯವಾದ ದತ್ತಾಂಶ ರಕ್ಷಣೆಯ ಸುರಕ್ಷತಾ ಕ್ರಮಗಳನ್ನು ಅಳವಡಿಸಲು, ತನ್ಮೂಲಕ ಸೈಬರ್–ಸುರಕ್ಷಿತವಾದ ಸದೃಢ ವಾತಾವರಣ ನಿರ್ಮಿಸಲು ಸೈಬರ್ ಭದ್ರತಾ ಕಾರ್ಯನೀತಿಯನ್ನು ಘೋಷಿಸಲಾಗುವುದು.

233. ದತ್ತಾಂಶ ಕೇಂದ್ರಗಳಿಗೆ ಹೆಚ್ಚಿನ ಬೇಡಿಕೆ ಮತ್ತು ಮೌಲ್ಯ ಒದಗಿಸಲು ಪೂರಕವಾಗಿ ದತ್ತಾಂಶ ಕೇಂದ್ರ ಕಾರ್ಯನೀತಿಯನ್ನು ರೂಪಿಸಲಾಗುವುದು. ಈ ಕಾರ್ಯನೀತಿಯು ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸುವ ಗುರಿ ಹೊಂದಿದೆ.

234. 2030 ಇಸವಿಯೊಳಗಾಗಿ, ಸರ್ಪವಿಷದ ನಂಜಿನಿಂದಾಗಿ ಸಂಭವಿಸುವ ಸಾವು ಮತ್ತು ಅಪಾಂಗತೆಯನ್ನು ಶೇ.50 ರಷ್ಟು ಇಳಿಮುಖವಾಗಿಸಲು ನಮ್ಮ ಸರ್ಕಾರ ಉದ್ದೇಶಿಸಿದೆ.

ಕೈಗೆಟಕುವ ದರದಲ್ಲಿ ಹಾಗೂ ಸುಲಭವಾಗಿ ದೊರಕುವಂತಹ ಮುಂದಿನ ತಲೆಮಾರಿನ ಪ್ರತಿನಂಜನ್ನು (anti-venom) ಅಭಿವೃದ್ಧಿಪಡಿಸಲು ಪ್ರತಿನಂಜು ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರವನ್ನು ಏಳು ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು. 2021–22ರಲ್ಲಿ ಈ ಉದ್ದೇಶಕ್ಕಾಗಿ ಎರಡು ಕೋಟಿ ರೂ. ಮೊತ್ತವನ್ನು ಹಂಚಿಕೆ ಮಾಡಲಾಗುವುದು.

235. ಕ್ವಾಂಟಂ ಕಂಪ್ಯೂಟಿಂಗ್ ಮತ್ತು ಸಂಬಂಧಿತ ತಂತ್ರಜ್ಞಾನಗಳ ಸಂಶೋಧನೆ ಉತ್ತೇಜಿಸಲು 10 ಕೋಟಿ ರೂ.ಗಳ ವೆಚ್ಚದಲ್ಲಿ **'ಸಂಶೋಧನಾ ಪಾರ್ಕ್'** ಅನ್ನು ಸ್ಥಾಪಿಸಲಾಗುವುದು. ಇದರಿಂದ ರಾಜ್ಯದಲ್ಲಿ ಕ್ವಾಂಟಂ ಕಂಪ್ಯೂಟಿಂಗ್ ಕ್ಷೇತ್ರದಲ್ಲಿ ವೈಜ್ಞಾನಿಕ ಆವಿಷ್ಕಾರಗಳು ಹಾಗೂ ನಾವೀನ್ಯತೆಯನ್ನು ಪ್ರಚೋದಿಸಲು ಸಹಕಾರಿಯಾಗುವುದು.

236. ನಮ್ಮ ಸರ್ಕಾರವು ಬೆಂಗಳೂರನ್ನು ಜಿಯೋಸ್ಪೇಷಿಯಲ್ ಹಬ್ ಅನ್ನಾಗಿ ರೂಪಿಸಲು ಉದ್ದೇಶಿಸಿದೆ. ಕೇಂದ್ರ ಸರ್ಕಾರದ ರಾಷ್ಟ್ರೀಯ ಜಿಯೋಸ್ಪೇಷಿಯಲ್ ನೀತಿಯಡಿ ಕರ್ನಾಟಕ ರಾಜ್ಯ ದೂರಸಂವೇದಿ ಅನ್ವಯಿಕ ಕೇಂದ್ರವನ್ನು (KSRSAC) ಖಾಸಗಿ ವಲಯದ ಪಾಲುದಾರಿಕೆಯೊಂದಿಗೆ ಬಲವರ್ಧಿಸಿ, ಜಿಯೋಸ್ಪೇಷಿಯಲ್ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಇನ್ನಷ್ಟು ಪರಿಣಾಮಕಾರಿಯಾಗಿ ಸಾರ್ವಜನಿಕ ಸೇವೆಗಳನ್ನು ಒದಗಿಸಲಾಗುವುದು.

237. 2018–19ರ ಆಯವ್ಯಯದಲ್ಲಿ ಘೋಷಿಸಿದಂತೆ ಪದ್ಮಭೂಷಣ ಡಾ. ಹೆಚ್. ನರಸಿಂಹಯ್ಯರವರ ಹೆಸರಿನಲ್ಲಿ ಅವರ

ಜನ್ಮ ಸ್ಥಳವಾದ ಗೌರಿಬಿದನೂರು ತಾಲ್ಲೂಕಿನ ಹೊಸೂರಿನಲ್ಲಿ ಅಂತಾರಾಷ್ಟ್ರೀಯ ವಿಜ್ಞಾನ ಕೇಂದ್ರವನ್ನು ಸ್ಥಾಪಿಸುವ ಕುರಿತು ತಾಂತ್ರಿಕ ಸಮಿತಿಯು ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿದೆ. ಈ ವರದಿಯನ್ವಯ 200 ಎಕರೆ ಪ್ರದೇಶದಲ್ಲಿ ಅಂತಾರಾಷ್ಟ್ರೀಯ ಮಟ್ಟದ ವಿಜ್ಞಾನ ಕೇಂದ್ರವನ್ನು ಖಾಸಗಿ ಸಹಭಾಗಿತ್ವದಲ್ಲಿ ಹಾಗೂ ಡಾ. ಹೆಚ್. ನರಸಿಂಹಯ್ಯರವರ ಹಳೆಯ ವಿದ್ಯಾರ್ಥಿಗಳ ನೆರವಿನೊಂದಿಗೆ ನಿರ್ಮಿಸಲಾಗುವುದು. ಈ ಉದ್ದೇಶಕ್ಕಾಗಿ ಪ್ರಸಕ್ತ ಸಾಲಿನಲ್ಲಿ 10 ಕೋಟಿ ರೂ. ಅನುದಾನ ಒದಗಿಸಲಾಗುವುದು.

238. ವಿದ್ಯಾರ್ಥಿಗಳು ಮತ್ತು ಜನಸಾಮಾನ್ಯರಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವ ಉದ್ದೇಶದೊಂದಿಗೆ ಶಿರಸಿಯಲ್ಲಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರವನ್ನು ಒಟ್ಟು ಏಳು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು. ಉದ್ದೇಶಿತ ಯೋಜನೆಗೆ 2021–22 ರಲ್ಲಿ ಎರಡು ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು.

239. ವೈಜ್ಞಾನಿಕ ಚಿಂತನೆಯನ್ನು ಸಮಾಜದಲ್ಲಿ ಬೆಳೆಸುವ ಉದ್ದೇಶದೊಂದಿಗೆ ಒಂದು ಕೋಟಿ ರೂ. ವೆಚ್ಚದಲ್ಲಿ 'ವಿಜ್ಞಾನ ಮಾಲಿಕೆ 500' ಎಂಬ ವಿನೂತನ ಆಕಾಶವಾಣಿ ಕಾರ್ಯಕ್ರಮ ಸರಣಿಯನ್ನು ಪ್ರಸಾರ ಮಾಡಲಾಗುವುದು.

240. ರಾಜ್ಯದ ಆರ್ಥಿಕ ಅಭಿವೃದ್ಧಿಗೆ ಪ್ರಚೋದನೆ ನೀಡುವ ಉದ್ದೇಶಕ್ಕಾಗಿ 2021–22ನೇ ಸಾಲಿನಲ್ಲಿ ಒಟ್ಟಾರೆಯಾಗಿ 52,529 ಕೋಟಿ ರೂ. ಅನುದಾನ ಒದಗಿಸಲಾಗಿದೆ.

## ವಲಯ 4: ಬೆಂಗಳೂರು ಸಮಗ್ರ ಅಭಿವೃದ್ಧಿ

241. ಬೆಂಗಳೂರು ವಿಶ್ವದಲ್ಲಿಯೇ ಅತಿ ವೇಗವಾಗಿ ಬೆಳೆಯುತ್ತಿರುವ ನಗರ. ಇದಕ್ಕೆ ತಕ್ಕಂತೆ ಅಗತ್ಯ ಮೂಲಸೌಕರ್ಯಗಳು ಹಾಗೂ ಅತ್ಯುತ್ತಮ ಜೀವನಮಟ್ಟವನ್ನು ಒದಗಿಸಲು ನಮ್ಮ ಸರ್ಕಾರ ಆದ್ಯತೆ ನೀಡಿದೆ. ಕೇಂದ್ರ ಸರ್ಕಾರದ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯವು 2020ನೇ ಸಾಲಿಗೆ ಬಿಡುಗಡೆ ಮಾಡಿದ ಈಸ್ ಆಫ್ ಲಿವಿಂಗ್ ಇಂಡೆಕ್ಸ್‌ನಲ್ಲಿ ಬೆಂಗಳೂರು ನಗರವು ಮೊದಲ ಸ್ಥಾನದಲ್ಲಿರುವುದು ಅತ್ಯಂತ ಹೆಮ್ಮೆಯ ಸಂಗತಿಯಾಗಿದೆ. ಸುಗಮ ಸಂಚಾರ ವ್ಯವಸ್ಥೆ, ವೈಜ್ಞಾನಿಕ ತ್ಯಾಜ್ಯ ವಿಲೇವಾರಿ, ಹಸಿರು ಹೊದಿಕೆ ಹೆಚ್ಚಳ ಹಾಗೂ ಅತ್ಯುತ್ತಮ ಸೇವಾ ಸೌಲಭ್ಯಗಳನ್ನು ರೂಪಿಸುವ 'ಬೆಂಗಳೂರು ಮಿಷನ್ 2022–ಬೆಂಗಳೂರಿಗೆ ನವಚೈತನ್ಯ' ಕಾರ್ಯಕ್ರಮವನ್ನು ಜಾರಿಗೊಳಿಸಲಾಗುತ್ತಿದೆ. ಜೊತೆಗೆ ಎಲ್ಲಾ ವರ್ಗಗಳ ಜನರಿಗೆ ಉತ್ತಮ ಆರೋಗ್ಯ, ಶಿಕ್ಷಣ ಸೌಲಭ್ಯಗಳನ್ನು ಒದಗಿಸಲು ಸಹ ನಮ್ಮ ಸರ್ಕಾರ ಬದ್ಧವಾಗಿದೆ.

242. ಬೆಂಗಳೂರಿನ ಮಲ್ಲೇಶ್ವರದಲ್ಲಿ ಮೈಸೂರು ಲ್ಯಾಂಪ್ಸ್ ವರ್ಕ್ಸ್ ನಿಯಮಿತಕ್ಕೆ ಸೇರಿದ ಪ್ರದೇಶವನ್ನು ಕರ್ನಾಟಕದ ಸಂಸ್ಕೃತಿಯನ್ನು ಬಿಂಬಿಸುವ Experience Bengaluru ಕೇಂದ್ರವನ್ನಾಗಿ ಪರಿವರ್ತಿಸಲಾಗುವುದು. ಇದರಿಂದ ಬೆಂಗಳೂರು ನಗರದ ಹೃದಯ ಭಾಗದಲ್ಲಿ ಅತ್ಯಾವಶ್ಯಕವಾಗಿರುವ Lung Space ಸೃಷ್ಟಿಯಾಗುವುದು.

243. ಬೈಯ್ಯಪ್ಪನಹಳ್ಳಿಯಲ್ಲಿರುವ NGEFಗೆ ಸೇರಿದ 105 ಎಕರೆ ಜಮೀನಿನಲ್ಲಿ ಜನರಿಗೆ ಕಾನನದ ಅನುಭವ ನೀಡುವಂತಹ ವೃಕ್ಷೋದ್ಯಾನವನ್ನು ಆರಂಭಿಸಲಾಗುವುದು. ಇಲ್ಲಿರುವಂತಹ ಕಾರ್ಖಾನೆಯ ಕಟ್ಟಡಗಳನ್ನು ನಗರದ ಶ್ರೀಮಂತ ಪರಂಪರೆ, ಸಂಸ್ಕೃತಿ ಹಾಗೂ ಕೈಗಾರಿಕಾ ವೈಭವವನ್ನು ಸಾರುವಂತೆ ಮರುಬಳಕೆ ಮಾಡಿಕೊಳ್ಳಲಾಗುವುದು.

244. ಬೆಂಗಳೂರು ನಗರದ ಸುತ್ತಲೂ ಸಂಚಾರ ದಟ್ಟಣೆ ಕಡಿಮೆಗೊಳಿಸಲು 65 ಕಿ.ಮೀ. ಉದ್ದದ 100 ಮೀ. ಅಗಲದ ಪೆರಿಫರೆಲ್ ರಿಂಗ್ ರಸ್ತೆ ನಿರ್ಮಿಸಲು 2006ರಿಂದ ಭೂಸ್ವಾಧೀನ ಪ್ರಕ್ರಿಯೆ ಪ್ರಾರಂಭಗೊಂಡು ನ್ಯಾಯಾಲಯದ ದಾವೆ ಹಾಗೂ ಭೂಸ್ವಾಧೀನಕ್ಕಾಗಿ ಆರ್ಥಿಕ ಮುಗ್ಗಟ್ಟಿನಿಂದಾಗಿ ನೆನೆಗುದಿಗೆ ಬಿದ್ದಿರುವ ಈ ಯೋಜನೆಯನ್ನು ನಮ್ಮ ಸರ್ಕಾರವು ಅನುಷ್ಠಾನಗೊಳಿಸಲು ಕ್ರಮವಹಿಸಿದ್ದು, ಭೂಸ್ವಾಧೀನ ವೆಚ್ಚವನ್ನು ಸಹ ಭರಿಸುವ ಅಂಶದೊಂದಿಗೆ ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಸ್ವಿಸ್ ಚಾಲೆಂಜ್ ಅಳವಡಿಸಿ ಟೆಂಡರ್ ಕರೆದು ಪ್ರಾರಂಭಿಸಲಾಗುವುದು.

245. 2020-21ನೇ ಸಾಲಿನಲ್ಲಿ ಬೆಂಗಳೂರಿನ ವಾಹನ ದಟ್ಟಣೆಯನ್ನು ಕಡಿಮೆ ಮಾಡಿ ನಗರದ ಪ್ರಗತಿಗೆ ವೇಗ ವರ್ಧಕವಾಗಿ ಕೆಲಸ ಮಾಡಲು ಉಪ ನಗರ ರೈಲು ಯೋಜನೆಯನ್ನು 15,767 ಕೋಟಿ ರೂ.ಗಳಲ್ಲಿ ನಿರ್ಮಾಣ ಮಾಡುವ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. ಈ ಯೋಜನೆ ವಿಸ್ತೃತ ವರದಿಗೆ ಕೇಂದ್ರ ಸರ್ಕಾರದ ಆರ್ಥಿಕ

ವ್ಯವಹಾರಗಳ ಸಚಿವ ಸಂಪುಟ ಸಮಿತಿಯು (CCEA) ಅನುಮೋದನೆ ನೀಡಿರುತ್ತದೆ. ಸದರಿ ಯೋಜನೆಗಾಗಿ ಭೂಸ್ವಾಧೀನ ಕಾರ್ಯ ಕೈಗೊಳ್ಳಲಾಗುತ್ತಿದ್ದು, ಈ ಯೋಜನೆಯನ್ನು ಆರು ವರ್ಷಗಳಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಈ ಯೋಜನೆಗೆ 2021–22ರ ಆರ್ಥಿಕ ವರ್ಷದಲ್ಲಿ ರಾಜ್ಯ ಸರ್ಕಾರದ ವತಿಯಿಂದ 850 ಕೋಟಿ ರೂ.ಗಳ ಅನುದಾನವನ್ನು ನಿಗದಿಪಡಿಸಲಾಗಿದೆ.

246. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ 2ನೇ ರನ್‌ವೇ ಕಾಮಗಾರಿಯು 2708 ಕೋಟಿ ರೂ.ಗಳ ವೆಚ್ಚದಲ್ಲಿ ಪೂರ್ಣಗೊಳಿಸಿ ಕಾರ್ಯಾಚರಣೆಯಲ್ಲಿರುತ್ತದೆ. 2ನೇ ಟರ್ಮಿನಲ್ ಕಟ್ಟಡದ ನಿರ್ಮಾಣ ಕಾಮಗಾರಿಯನ್ನು 4751 ಕೋಟಿ ರೂ. ವೆಚ್ಚದಲ್ಲಿ ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು. ಇದರಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಗರಿಷ್ಠ ವಾರ್ಷಿಕ ಪ್ರಯಾಣಿಕರ ಸಾಮರ್ಥ್ಯವು 60 ಮಿಲಿಯನ್‌ಗೆ ಏರಿಕೆಯಾಗಲಿದ್ದು, ಬೆಂಗಳೂರನ್ನು ಜಾಗತಿಕ ನಗರವನ್ನಾಗಿಸಲು ಸಹಕಾರಿಯಾಗುತ್ತದೆ.

247. ಬೆಂಗಳೂರು ನಗರವಾಸಿಗಳಿಗೆ ಹೆಚ್ಚುವರಿ ರೈಲು ಸೇವೆಗಳನ್ನು ಒದಗಿಸಲು ಕೆ–ರೈಡ್ (ಕರ್ನಾಟಕ ರೈಲ್ವೆ ಮೂಲಸೌಕರ್ಯ ಅಭಿವೃದ್ಧಿ ಕಂಪನಿ ನಿಯಮಿತ) ಮೂಲಕ 813 ಕೋಟಿ ರೂ.ಗಳ ವೆಚ್ಚದಲ್ಲಿ ಯಶವಂತಪುರ–ಚನ್ನಸಂದ್ರ ಮತ್ತು ಬೈಯ್ಯಪ್ಪನಹಳ್ಳಿ–ಹೊಸೂರು ವಿಭಾಗಗಳ ನಡುವೆ ದ್ವಿಪಥಗೊಳಿಸುವ ಯೋಜನೆಗಳನ್ನು ಶೇ. 50ರಷ್ಟು ವೆಚ್ಚ

ಹಂಚಿಕೆಯ ಆಧಾರದ ಮೇಲೆ ರೈಲ್ವೆ ಮಂತ್ರಾಲಯದ ಸಹಯೋಗದಲ್ಲಿ ಅನುಷ್ಠಾನಗೊಳಿಸುತ್ತಿದೆ. ಸದರಿ ಯೋಜನೆಯ ಕಾಮಗಾರಿಗಳು ಪ್ರಾರಂಭವಾಗಿದ್ದು, 2023ರ ಅಂತ್ಯದ ವೇಳೆಗೆ ಮುಕ್ತಾಯಗೊಳಿಸಲಾಗುವುದು.

248. ಕೋರಮಂಗಲ ಕಣಿವೆ ರಾಜಕಾಲುವೆ ಅಭಿವೃದ್ಧಿ ಮತ್ತು ನಿರ್ವಹಣೆ (ಕೆ–100) ಯೋಜನೆಯನ್ನು 169 ಕೋಟಿ ರೂ.ಗಳ ವೆಚ್ಚದಲ್ಲಿ ಅನುಷ್ಠಾನ ಮಾಡಲಾಗುವುದು. ಕೆ–100 ಯೋಜನೆಯಡಿಯಲ್ಲಿ ಕೋರಮಂಗಲ ಕಣಿವೆ ನೀರುಗಾಲುವೆಯನ್ನು ಶುದ್ಧ ನೀರಿನ ಕಾಲುವೆಯಾಗಿ ಪರಿವರ್ತಿಸಿ, ಪ್ರವಾಸಿ ತಾಣವಾಗಿ ಅಭಿವೃದ್ಧಿಗೊಳಿಸಲಾಗುವುದು.

249. ಬೆಂಗಳೂರಿನ ನಾಗರಿಕರಿಗೆ ತಮ್ಮ ಕುಟುಂಬದವರೊಂದಿಗೆ ವಿರಾಮ ಸಮಯವನ್ನು ಸಮೀಪದಲ್ಲಿಯೇ ಹಸಿರು ಪರಿಸರದ ಮಧ್ಯೆ ಕಳೆಯಲು ಅನುಕೂಲವಾಗುವಂತೆ ನೈಸರ್ಗಿಕ ಪಥಗಳು, ಮಕ್ಕಳ ಆಟದ ಅಂಗಳ, ಕುಡಿಯುವ ನೀರು ಇತ್ಯಾದಿ ಸೌಲಭ್ಯವುಳ್ಳ ಮೂರು ವೃಕ್ಷೋದ್ಯಾನಗಳನ್ನು ಅಭಿವೃದ್ಧಿಪಡಿಸಲಾಗುವುದು.

250. ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಮೂಲಕ (KSIIDC) ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪಕ್ಕದಲ್ಲಿ ಅಂತಾರಾಷ್ಟ್ರೀಯ ಮಟ್ಟದ ಬೆಂಗಳೂರು ಸಿಗ್ನೇಚರ್ ಬಿಸಿನೆಸ್ ಪಾರ್ಕ್‌ನ್ನು ನಿರ್ಮಿಸಲು ಪ್ರಸ್ತಾಪಿಸಿದೆ. ಈ ಯೋಜನೆಯ ಟ್ರಂಕ್ ಮೂಲಸೌಕರ್ಯಗಳನ್ನು

168 ಕೋಟಿ ರೂ.ಗಳ ವೆಚ್ಚದಲ್ಲಿ ಈಗಾಗಲೇ ಅಭಿವೃದ್ಧಿಪಡಿಸಲಾಗುತ್ತಿದೆ.

251. ಬೆಂಗಳೂರು ನೀರು ಸರಬರಾಜು ಒಳಚರಂಡಿ ಮಂಡಳಿ ವತಿಯಿಂದ ಕೆ.ಸಿ. ವ್ಯಾಲಿ ಆವರಣದಲ್ಲಿನ 248 ಎಂ.ಎಲ್.ಡಿ ಸಾಮರ್ಥ್ಯದ ಎಸ್.ಟಿ.ಪಿ.ಯನ್ನು ಪುನರುಜ್ಜೀವನ ಮತ್ತು ಉನ್ನತೀಕರಣಗೊಳಿಸುವ ಕಾಮಗಾರಿಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಹಯೋಗದೊಂದಿಗೆ 450 ಕೋಟಿ ರೂ. ಮೊತ್ತದಲ್ಲಿ 2021–22ನೇ ಸಾಲಿನಲ್ಲಿ ಕೈಗೊಳ್ಳಲಾಗುವುದು.

252. ಅರ್ಕಾವತಿ ಮತ್ತು ಕಾವೇರಿ ನದಿಯ ಸಂಗಮದ ಸಮೀಪದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟು ಸಮತೋಲನ ಜಲಾಶಯವನ್ನು ನಿರ್ಮಿಸಿ ಬೆಂಗಳೂರು ಮಹಾನಗರಕ್ಕೆ ಕುಡಿಯುವ ನೀರನ್ನು ಒದಗಿಸಲು ಮತ್ತು ವಿದ್ಯುಚ್ಛಕ್ತಿಯನ್ನು ಉತ್ಪಾದಿಸಲು ನಮ್ಮ ಸರ್ಕಾರವು ಬದ್ಧವಾಗಿದೆ. ಇದಕ್ಕಾಗಿ 9,000 ಕೋಟಿ ರೂ. ಅಂದಾಜು ಮೊತ್ತದ ಯೋಜನಾ ವರದಿಯನ್ನು ಈಗಾಗಲೇ ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಲಾಗಿದ್ದು, ಅವಶ್ಯಕ ಅನುಮೋದನೆಯನ್ನು ಶೀಘ್ರವಾಗಿ ಪಡೆದು ಅನುಷ್ಠಾನಗೊಳಿಸಲಾಗುವುದು.

253. ಜನವರಿ 2021ರಲ್ಲಿ ಪ್ರಾರಂಭಿಸಲಾದ ದಕ್ಷಿಣ ವಿಸ್ತರಣೆ ಸೇರಿದಂತೆ 49 ಕಿ.ಮೀ. ಗಳ ಬೆಂಗಳೂರು ಮೆಟ್ರೋ ಜಾಲ ಪ್ರಸ್ತುತ ಕಾರ್ಯಾಚರಣೆಯಲ್ಲಿದೆ. ಜೂನ್ 2021 ಮತ್ತು ಡಿಸೆಂಬರ್ 2022ರ ನಡುವೆ 41 ಕಿ.ಮೀ. ಉದ್ದದ

ಮತ್ತೊಂದು ಮೆಟ್ರೋ ಮಾರ್ಗವನ್ನು ಹಂತ ಹಂತವಾಗಿ ಕಾರ್ಯಗತಗೊಳಿಸಲು ಯೋಜಿಸಲಾಗಿದೆ. ಮೆಟ್ರೋ ಯೋಜನೆಯ ಹಂತ-1 ಮತ್ತು ಹಂತ-2ರ ಅನುಷ್ಠಾನಕ್ಕೆ ಇದುವರೆಗೆ 30,000 ಕೋಟಿ ರೂ. ಗಳನ್ನು ಬಳಸಿಕೊಳ್ಳಲಾಗಿದೆ.

254. ಬೆಂಗಳೂರಿನಲ್ಲಿ 58 ಕಿ.ಮೀ. ಉದ್ದದ ಹೊರವರ್ತುಲ ರಸ್ತೆ – ಏರ್‌ಪೋರ್ಟ್ ಮೆಟ್ರೋ ಜಾಲದ ಹಂತ-2ಎ ಮತ್ತು 2ಬಿ ಅನ್ನು 14,788 ಕೋಟಿ ರೂ. ಗಳ ಅಂದಾಜು ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದ ಅನುಮೋದನೆಯನ್ನು ಶೀಘ್ರದಲ್ಲೇ ನಿರೀಕ್ಷಿಸಲಾಗಿದೆ. ರಾಜ್ಯ ಸರ್ಕಾರ ಈಗಾಗಲೇ ಯೋಜನಾ ಪೂರ್ವ ಚಟುವಟಿಕೆಗಳಾದ ಭೂಸ್ವಾಧೀನ, ಉಪಯುಕ್ತಗಳ ಸ್ಥಳಾಂತರ ಮತ್ತು ವಿನ್ಯಾಸಕ್ಕಾಗಿ ಈವರೆಗೆ 1,600 ಕೋಟಿ ರೂ. ಗಳಿಗೂ ಅಧಿಕ ಮೊತ್ತವನ್ನು ಬಿಡುಗಡೆ ಮಾಡಿರುತ್ತದೆ.

255. ಮೆಟ್ರೋ ಮತ್ತು ರೈಲ್ವೆ ನಿಲ್ದಾಣಗಳ ನಡುವಿನ ಸಂಪರ್ಕಕ್ಕಾಗಿ ಯಶವಂತಪುರ, ಕೆ.ಆರ್.ಪುರಂ ಮತ್ತು ಜ್ಞಾನಭಾರತಿಯಲ್ಲಿ ಮೂರು ಪಾದಚಾರಿ ಮೇಲ್ಸೇತುವೆಗಳು (FOB), ಎನ್‌ಎಚ್-4 ಮಾರ್ಗದ ದಾಸರಹಳ್ಳಿ ಮತ್ತು ಚಿಕ್ಕಬಿದರಕಲ್ಲು ಇಲ್ಲಿ ಎರಡು ಪಾದಚಾರಿ ಮೇಲ್ಸೇತುವೆಗಳು, ಮತ್ತು ಮುಂಬರುವ ಮೆಟ್ರೋ ನಿಲ್ದಾಣಗಳಿಗೆ ಉತ್ತಮ ಸಂಪರ್ಕವನ್ನು ಒದಗಿಸಲು ಹೊಸೂರು ರಸ್ತೆಗೆ ಅಡ್ಡಲಾಗಿ ಏಳು ಪಾದಚಾರಿ ಮೇಲ್ಸೇತುವೆಗಳನ್ನು ನಿರ್ಮಿಸಲಾಗುವುದು.

256. ಸಾರ್ವಜನಿಕರ ಅನುಕೂಲಕ್ಕಾಗಿ 'ಒಂದು ರಾಷ್ಟ್ರ ಒಂದು ಕಾರ್ಡ್' ಅನ್ನು ಸ್ವೀಕರಿಸಲು 51 ನಿಲ್ದಾಣಗಳನ್ನೊಳಗೊಂಡ ಸಂಪೂರ್ಣ ಮೆಟ್ರೋ ಜಾಲವು ಆಗಸ್ಟ್ 2021ರೊಳಗೆ ಸಿದ್ಧವಾಗಲಿದೆ. ಈ ಕಾರ್ಡನ್ನು ನಮ್ಮ ಮೆಟ್ರೋ ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳು ಎರಡರಲ್ಲಿಯೂ ಬಳಸಬಹುದಾಗಿದೆ.

257. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಟಿಕೆಟಿಂಗ್ ವ್ಯವಸ್ಥೆಯನ್ನು ಆಧುನೀಕರಣಗೊಳಿಸಲು Automatic Fare Collection System ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

258. ತ್ಯಾಜ್ಯ ನಿರ್ವಹಣೆಯಲ್ಲಿ ಬೆಂಗಳೂರನ್ನು ಮಾದರಿ ನಗರವನ್ನಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಘನತ್ಯಾಜ್ಯ ಸಂಗ್ರಹಣೆ, ಸಾಗಾಣಿಕೆ ಮತ್ತು ಸಂಸ್ಕರಣೆಯನ್ನು ನಿರ್ವಹಿಸಲು ಪ್ರತ್ಯೇಕ ಕಂಪನಿಯನ್ನು ಕಂಪನಿ ಅಧಿನಿಯಮದಡಿ ಸ್ಥಾಪಿಸಲಾಗುವುದು.

259. ಬೆಂಗಳೂರು ನಗರದಲ್ಲಿ ಗಣನೀಯ ಸಂಖ್ಯೆಯಲ್ಲಿರುವ ವಲಸೆ ಕಾರ್ಮಿಕರು ಹಾಗೂ ಬಡಜನರಿಗೆ ಅತ್ಯಾಧುನಿಕ ಹಾಗೂ ತಜ್ಞ ವೈದ್ಯಕೀಯ ಸೇವೆಗಳನ್ನು ಒದಗಿಸಲು ಉತ್ತರ ಬೆಂಗಳೂರು ಪ್ರದೇಶದಲ್ಲಿ ಒಂದು ಹೊಸ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಾರಂಭಿಸಲಾಗುವುದು.

260. ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿರುವ ಗ್ಯಾಸ್ಟ್ರೋಎಂಟ್ರಾಲಜಿ ವಿಜ್ಞಾನ ಹಾಗೂ ಆರ್ಗನ್ ಟ್ರಾನ್ಸ್‌ಪ್ಲಾಂಟ್ ಸಂಸ್ಥೆಯು ದೇಶದಲ್ಲಿಯೇ ಮೊಟ್ಟಮೊದಲ

ಅಂಗಾಂಗ ಕಸಿ ಸಂಸ್ಥೆಯಾಗಿದ್ದು, ಇಲ್ಲಿ ಬಡಜನರಿಗೆ ಕೈಗೆಟಕುವ ದರದಲ್ಲಿ ಅಂಗಾಂಗ ಕಸಿ ಸೌಲಭ್ಯವನ್ನು ಒದಗಿಸಲಾಗುತ್ತದೆ. ಈ ಸಂಸ್ಥೆಯನ್ನು 28 ಕೋಟಿ ರೂ.ಗಳ ವೆಚ್ಚದಲ್ಲಿ 120 ಹಾಸಿಗೆಗಳು ಹಾಗೂ ಅವಶ್ಯಕ ಉಪಕರಣಗಳೊಂದಿಗೆ ಸಜ್ಜುಗೊಳಿಸಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ಚಾಲನೆ ನೀಡಲಾಗುವುದು.

261. ಬೆಂಗಳೂರಿನ ಜಯದೇವ ಹೃದ್ರೋಗ ವಿಜ್ಞಾನ ಸಂಸ್ಥೆಯ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ 50 ಹಾಸಿಗೆ ಸಾಮರ್ಥ್ಯದ ಉಪಕೇಂದ್ರವನ್ನು 20 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲಾಗುವುದು.

262. ಬೆಂಗಳೂರು ನಗರವಾಸಿಗಳಿಗೆ ಪ್ರಾಥಮಿಕ ಚಿಕಿತ್ಸೆಯು ಸುಲಭವಾಗಿ ದೊರೆಯುವಂತೆ ಮಾಡಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಲ್ಲದ 57 ವಾರ್ಡ್‌ಗಳಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ಜನಾರೋಗ್ಯ ಕೇಂದ್ರಗಳನ್ನು ಆರೋಗ್ಯ ಇಲಾಖೆಯ ಮೂಲಕ ಸ್ಥಾಪಿಸಿ ತಪಾಸಣಾ ಸೌಲಭ್ಯಗಳ ಜೊತೆಗೆ ಹೊರರೋಗಿಗಳ ಸೇವೆಯನ್ನು ಒದಗಿಸಲಾಗುವುದು.

263. ಬಡ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಾಲೆಗಳ ನವೀಕರಣ ಮತ್ತು ಪುನರ್ ನಿರ್ಮಾಣವನ್ನು 33 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುವುದು.

264. ಬೆಂಗಳೂರಿನ ಮಲ್ಲತ್ತಹಳ್ಳಿ ಕಲಾಗ್ರಾಮದಲ್ಲಿ ಪ್ರತಿ ವಾರಾಂತ್ಯದಲ್ಲಿ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು, ಚಿತ್ರಸಂತೆ, ಶಿಲ್ಪಕಲಾಕೃತಿ ಪ್ರದರ್ಶನ ಹಾಗೂ ಜಾನಪದ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಇದಕ್ಕಾಗಿ ಎರಡು ಕೋಟಿ ರೂ.ಗಳನ್ನು ಮೀಸಲಿರಿಸಲಾಗುವುದು.

265. ಬೆಂಗಳೂರು ನಗರದ ಸಮಗ್ರ ಅಭಿವೃದ್ಧಿಗಾಗಿ 2021–22ನೇ ಸಾಲಿನಲ್ಲಿ ಒಟ್ಟಾರೆಯಾಗಿ 7,795 ಕೋಟಿ ರೂ. ಅನುದಾನ ಒದಗಿಸಲಾಗಿದೆ.

**ವಲಯ 5: ಸಂಸ್ಕೃತಿ, ಪರಂಪರೆ ಹಾಗೂ ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ**

266. ಕರ್ನಾಟಕ ರಾಜ್ಯದ ಅತ್ಯಂತ ಶ್ರೀಮಂತ ಸಂಸ್ಕೃತಿ, ಐತಿಹಾಸಿಕ ಪರಂಪರೆಗಳನ್ನು ಸಂರಕ್ಷಿಸಿ, ಬೆಳೆಸಿ, ಮುಂದಿನ ಪೀಳಿಗೆಗೆ ಅವುಗಳನ್ನು ಆಸ್ವಾದಿಸುವ ಅವಕಾಶ ಸೃಷ್ಟಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಅಂತೆಯೇ ಸಮೃದ್ಧ ಅರಣ್ಯ ಮತ್ತು ವನ್ಯಜೀವಿಗಳನ್ನು ಸಂರಕ್ಷಿಸಿ ಪೋಷಿಸುವುದು ಆದ್ಯತೆಯಾಗಿದೆ. ನೈಸರ್ಗಿಕ ಸಂಪನ್ಮೂಲಗಳ ಜವಾಬ್ದಾರಿಯುತ ಬಳಕೆಗೆ ನಮ್ಮ ಸರ್ಕಾರ ಒತ್ತು ನೀಡಲಿದೆ.

267. ಕಿತ್ತೂರಿನ ರಾಣಿ ಚೆನ್ನಮ್ಮನವರು ಬ್ರಿಟೀಷರ ವಿರುದ್ಧ ರಣಕಹಳೆ ಮೊಳಗಿಸಿರುವ ಧೀರ ಮಹಿಳೆ. ಕಿತ್ತೂರು ರಾಜವಂಶಸ್ಥರ ವಿವಿಧ ಸ್ಥಳಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಕಿತ್ತೂರು ಅಭಿವೃದ್ಧಿ ಪ್ರಾಧಿಕಾರವನ್ನು ಈಗಾಗಲೇ ರಚಿಸಿದೆ. ಕಿತ್ತೂರಿನ ಕೋಟೆ ಆವರಣದಲ್ಲಿ ವಿವಿಧ ಅಭಿವೃದ್ಧಿ

ಕಾಮಗಾರಿಗಳಿಗಾಗಿ ಒಟ್ಟಾರೆ 50 ಕೋಟಿ ರೂ. ಗಳ ಅನುದಾನವನ್ನು ಘೋಷಿಸಿದೆ.

268. ಬಸವಕಲ್ಯಾಣದಲ್ಲಿ ಹೊಸ ಅನುಭವ ಮಂಟಪ ನಿರ್ಮಿಸಲು ಹಿಂದಿನ ವರ್ಷದ ಆಯವ್ಯಯದಲ್ಲಿ ನಿರ್ಧರಿಸಲಾಗಿತ್ತು. 500 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಿರುವ ಈ ಯೋಜನೆಗೆ ಈಗಾಗಲೇ 200 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಲಾಗಿದೆ. ಇದರ ಕಾಮಗಾರಿಗಳನ್ನು ಶೀಘ್ರಗತಿಯಲ್ಲಿ ಕೈಗೆತ್ತಿಕೊಳ್ಳಲಾಗುವುದು.

269. ಜಗಜ್ಯೋತಿ ಬಸವಣ್ಣನವರ ಜನ್ಮಸ್ಥಳವಾದ ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲ್ಲೂಕಿನ ಇಂಗಳೇಶ್ವರ ಗ್ರಾಮವನ್ನು ಅಭಿವೃದ್ಧಿಪಡಿಸಲು ಐದು ಕೋಟಿ ರೂ.ಗಳನ್ನು ಒದಗಿಸಲಾಗುವುದು.

270. ಲೋಕ ಕಲ್ಯಾಣಕ್ಕಾಗಿ ನಾಥ ಪರಂಪರೆಯು ನೀಡಿರುವ ಕೊಡುಗೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಮಂಡ್ಯ ಜಿಲ್ಲೆಯ ಶ್ರೀ ಆದಿಚುಂಚನಗಿರಿ ಕ್ಷೇತ್ರದಲ್ಲಿ 'ಆದಿಚುಂಚನಗಿರಿ ನಾಥ ಪಾರಂಪರಿಕ ಕೇಂದ್ರ'ವನ್ನು ಸ್ಥಾಪಿಸಲಾಗುತ್ತಿದೆ. ಇದಕ್ಕೆ ರಾಜ್ಯ ಸರ್ಕಾರದ ವತಿಯಿಂದ 10 ಕೋಟಿ ರೂ.ಗಳ ಸಹಾಯಾನುದಾನ ನೀಡಲಾಗುವುದು.

271. ಅಯೋಧ್ಯೆಯ ಪವಿತ್ರ ಶ್ರೀರಾಮ ಜನ್ಮಭೂಮಿಯಲ್ಲಿ ಭವ್ಯ ಶ್ರೀರಾಮಮಂದಿರ ನಿರ್ಮಾಣವಾಗುತ್ತಿದೆ. ಕರ್ನಾಟಕ ರಾಜ್ಯದಿಂದ ಅಯೋಧ್ಯೆಗೆ ಭೇಟಿ ನೀಡುವ ಭಕ್ತಾದಿಗಳಿಗೆ

ಅನುಕೂಲ ಕಲ್ಪಿಸಲು ಸುಸಜ್ಜಿತ ಯಾತ್ರಿ ನಿವಾಸ ನಿರ್ಮಿಸಲಾಗುವುದು. ಈ ಉದ್ದೇಶಕ್ಕಾಗಿ ಉತ್ತರಪ್ರದೇಶ ಸರ್ಕಾರವು ಐದು ಎಕರೆ ಜಮೀನು ಒದಗಿಸಲಿದ್ದು, ಪ್ರಸಕ್ತ ಸಾಲಿನಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲು 10 ಕೋಟಿ ರೂ.ಗಳನ್ನು ಒದಗಿಸಲಾಗುವುದು.

272. ಡಾ. ಎಸ್.ಎಲ್. ಭೈರಪ್ಪನವರ 'ಪರ್ವ' ನಾಟಕದ ಪ್ರದರ್ಶನವನ್ನು ರಂಗಾಯಣಗಳ ಮೂಲಕ ರಾಜ್ಯಾದ್ಯಂತ ಏರ್ಪಡಿಸಲಾಗುವುದು. ಇದಕ್ಕೆ ಒಂದು ಕೋಟಿ ರೂ.ಗಳನ್ನು ಒದಗಿಸಲಾಗುವುದು.

273. ಆದಿಕವಿ ಪಂಪನಿಂದ ಮುದ್ದಣನ ಕಾಲಘಟ್ಟದವರೆಗೆ ಎಲ್ಲಾ ಕೃತಿಗಳನ್ನು ಡಿಜಿಟಲೀಕರಿಸಿ ವಿಕೀಪಿಡಿಯಾ–ವಿಕಿಸೋರ್ಸ್ ಮೂಲಕ ಜಗತ್ತಿನ ಯಾವುದೇ ಭಾಗದಲ್ಲಿ ಅಂತರ್ಜಾಲದ ಮೂಲಕ ಲಭ್ಯವಾಗುವಂತೆ ಕ್ರಮವಹಿಸಲಾಗುವುದು.

274. ಹಾವೇರಿಯಲ್ಲಿ ನಡೆಯಲಿರುವ 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಆಯೋಜಿಸಲು ಸರ್ಕಾರ ಎಲ್ಲಾ ರೀತಿಯ ಸಹಾಯ, ಸಹಕಾರವನ್ನು ನೀಡಲಿದೆ.

275. ಹಿಂದೂಸ್ತಾನಿ ಸಂಗೀತ ಕ್ಷೇತ್ರದಲ್ಲಿ ಅನನ್ಯ ಸೇವೆ ಸಲ್ಲಿಸಿರುವ ಸ್ವರ ಭಾಸ್ಕರ ಭಾರತರತ್ನ ಪಂಡಿತ್ ಭೀಮಸೇನ್ ಜೋಶಿಯವರ 100ನೇ ಜನ್ಮದಿನಾಚರಣೆ ಅಂಗವಾಗಿ

ರಾಷ್ಟ್ರೀಯ ಸಂಗೀತೋತ್ಸವ ಹಾಗೂ ವಿಚಾರ ಸಂಕಿರಣ ಏರ್ಪಡಿಸಲಾಗುವುದು.

276. ಗ್ರಾಮೀಣ ಪ್ರತಿಭಾವಂತ ಕ್ರೀಡಾಪಟುಗಳನ್ನು ಕ್ರೀಡಾ ವಿಜ್ಞಾನದ ನೆರವಿನೊಂದಿಗೆ ಸಾಮರ್ಥ್ಯಕ್ಕನುಸಾರವಾಗಿ ಆಯ್ಕೆ ಮಾಡಲು ರಾಜ್ಯದಲ್ಲಿ ಕ್ರೀಡಾ ವಿಜ್ಞಾನ ಕೇಂದ್ರವನ್ನು ಎರಡು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

277. ದೇವನಹಳ್ಳಿಯಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಫುಟ್‌ಬಾಲ್, ಹಾಕಿ, ಶೂಟಿಂಗ್, ಈಜು, ಟೆನ್ನಿಸ್ ಕ್ರೀಡೆಗಳಲ್ಲಿ ಅಂತಾರಾಷ್ಟ್ರೀಯ ಗುಣಮಟ್ಟದ ಕ್ರೀಡಾ ಮೂಲಭೂತ ಸೌಲಭ್ಯಗಳನ್ನು ಸೃಜಿಸಿ ಮಿಷನ್ ಒಲಂಪಿಕ್ಸ್ ಗೆ ಸಿದ್ಧಗೊಳಿಸಲಾಗುವುದು.

278. ಮಂಡ್ಯ ನಗರದಲ್ಲಿರುವ ಕ್ರೀಡಾಂಗಣವನ್ನು 10 ಕೋಟಿ ರೂ.ಗಳ ವೆಚ್ಚದಲ್ಲಿ ಉನ್ನತೀಕರಿಸಿ ಅತ್ಯುತ್ತಮ ದರ್ಜೆಯ ಸವಲತ್ತುಗಳನ್ನು ಸಾರ್ವಜನಿಕರಿಗೆ ಒದಗಿಸಲು ಕ್ರಮವಹಿಸಲಾಗುವುದು.

279. ರಾಜ್ಯದಲ್ಲಿ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸುವ ದೃಷ್ಟಿಯಿಂದ 2022ರಲ್ಲಿ ಬೆಂಗಳೂರಿನಲ್ಲಿ ರಾಷ್ಟ್ರ ಮಟ್ಟದ ವಿಶ್ವವಿದ್ಯಾಲಯ ಕ್ರೀಡಾಕೂಟವನ್ನು ಆಯೋಜಿಸಲಾಗುವುದು.

280. ಜಕ್ಕೂರಿನಲ್ಲಿರುವ ಸರ್ಕಾರಿ ವೈಮಾನಿಕ ತರಬೇತಿ ಶಾಲೆಯ ಸೌಲಭ್ಯಗಳ ಅಭಿವೃದ್ಧಿಗಾಗಿ ಎರಡು ಕೋಟಿ ರೂ. ಅನುದಾನ ಒದಗಿಸಲಾಗುವುದು.

281. ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಪುಲ ಅವಕಾಶಗಳಿವೆ. 'ಒಂದು ರಾಜ್ಯ; ಹಲವು ಜಗತ್ತು' ಘೋಷವಾಕ್ಯದಂತೆ ರಾಜ್ಯದಲ್ಲಿರುವ ವೈವಿಧ್ಯಮಯ ಪ್ರವಾಸಿ ತಾಣಗಳಿಗೆ ಮೂಲಸೌಕರ್ಯ ಒದಗಿಸುವ ಮೂಲಕ ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸುವುದು ಹಾಗೂ ರಾಜ್ಯದ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ ನೀಡುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ. ಈ ನಿಟ್ಟಿನಲ್ಲಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ 500 ಕೋಟಿ ರೂ.ಗಳ ಯೋಜನೆಗಳನ್ನು ಕಾರ್ಯಾನುಷ್ಠಾನ ಮಾಡಲಾಗುವುದು.

282. ಬೆಂಗಳೂರು ಸುತ್ತಮುತ್ತ ಇರುವ ಪ್ರವಾಸಿ ತಾಣಗಳನ್ನು ಗುರುತಿಸಿ, ಮೂಲಸೌಕರ್ಯ ಅಭಿವೃದ್ಧಿಗೊಳಿಸಿ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ವತಿಯಿಂದ ವಾರಾಂತ್ಯ ಪ್ರವಾಸ ವೃತ್ತವನ್ನಾಗಿ ಅಭಿವೃದ್ಧಿಪಡಿಸಲಾಗುವುದು.

283. ಮೈಸೂರು ಜಿಲ್ಲೆಯಲ್ಲಿನ ಕಬಿನಿ ಆಣೆಕಟ್ಟಿನ ಕೆಳಭಾಗದಲ್ಲಿ 50 ಕೋಟಿ ರೂ.ಗಳ ವೆಚ್ಚದಲ್ಲಿ ಉದ್ಯಾನವನವನ್ನು (Integrated Theme Park) ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಕಾವೇರಿ ನೀರಾವರಿ ನಿಗಮದ ವತಿಯಿಂದ ನಿರ್ಮಿಸಲಾಗುವುದು.

284. ರಾಜ್ಯವು 320 ಕಿ.ಮೀ. ಕಡಲ ಕಿನಾರೆಯನ್ನು ಹೊಂದಿದ್ದು, ಹೆಚ್ಚಿನ ಕಡಲತೀರಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ, ಅಂತಾರಾಷ್ಟ್ರೀಯ ದರ್ಜೆಗೇರಿಸಿ

ಇವುಗಳನ್ನು ಕೇಂದ್ರೀಕೃತಗೊಳಿಸಿ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಗೊಳಿಸಲು ನಮ್ಮ ಸರ್ಕಾರವು ಬದ್ಧವಾಗಿದೆ. ಈ ಹಿನ್ನೆಲೆಯಲ್ಲಿ ಉಡುಪಿ ಜಿಲ್ಲೆಯ ತ್ರಾಸಿ, ಮರವಂತೆ, ಒತ್ತಿನೆಣೆ ಹಾಗೂ ಇತರೆ ಕಡಲ ತೀರಗಳನ್ನು 10 ಕೋಟಿ ರೂ.ಗಳ ವೆಚ್ಚದಲ್ಲಿ ಸಮಗ್ರವಾಗಿ ಅಭಿವೃದ್ಧಿಪಡಿಸಲಾಗುವುದು.

285. ಉಡುಪಿ ಜಿಲ್ಲೆಯ ಬೈಂದೂರು ತಾಲ್ಲೂಕಿನ ಸೋಮೇಶ್ವರ ಕಡಲ ತೀರದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ 10 ಕೋಟಿ ರೂ. ಒದಗಿಸಲಾಗುವುದು.

286. ಬಳ್ಳಾರಿ ಜಿಲ್ಲೆಯ ಸಂಗನಕಲ್ಲಿನಲ್ಲಿ ದೇಶದಲ್ಲಿಯೇ ಮೊದಲ ಪೂರ್ವ ಐತಿಹಾಸಿಕ ಯುಗದ ಅವಶೇಷಗಳ ವಸ್ತು ಸಂಗ್ರಹಾಲಯವನ್ನು ಸ್ಥಾಪಿಸಲಾಗಿದೆ. ಬಿ.ಟಿ.ಪಿ.ಎಸ್. ಮತ್ತು ತೋರಣಗಲ್ಲು ನಡುವೆ ಇರುವ ನವ ಶಿಲಾಯುಗದಿಂದ ಕಬ್ಬಿಣಯುಗದ ತಾಣ ಕುಡುತಿನಿ ಆಶ್‌ಮೌಂಡ್‌ನ್ನು (ಬೂದಿ ದಿಬ್ಬ) ಐದು ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು. ಈ ಉದ್ದೇಶಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಎರಡು ಕೋಟಿ ರೂ.ಗಳನ್ನು ಒದಗಿಸಲಾಗುವುದು.

287. ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮ ಮತ್ತು ಚಿಕ್ಕಮಗಳೂರು ಜಿಲ್ಲೆ ಕೆಮ್ಮಣ್ಣುಗುಂಡಿಯ ನಿರ್ವಹಣೆಯನ್ನು ತೋಟಗಾರಿಕೆ ಇಲಾಖೆಯಿಂದ ಅನುಕ್ರಮವಾಗಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಮತ್ತು ಜೆ.ಎಲ್.ಆರ್.ಗೆ

ಹಸ್ತಾಂತರಿಸಲಾಗಿದೆ. ಸದರಿ ಗಿರಿಧಾಮಗಳನ್ನು ಅಂತಾರಾಷ್ಟ್ರೀಯ ಪರಿಸರ ಪ್ರವಾಸೋದ್ಯಮ ತಾಣಗಳನ್ನಾಗಿ ಅಭಿವೃದ್ಧಿಪಡಿಸಲಾಗುವುದು.

288. ತದಡಿಯಲ್ಲಿ 1,000 ಎಕರೆ ಪ್ರದೇಶದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಪರಿಸರ ಪ್ರವಾಸೋದ್ಯಮ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ.

289. ತುಮಕೂರಿನಲ್ಲಿ ಶ್ರೀ ಶ್ರೀ ಶ್ರೀ ಶಿವಕುಮಾರ ಸ್ವಾಮಿಗಳ ಮತ್ತು ಉಡುಪಿಯಲ್ಲಿ ಪೇಜಾವರ ಶ್ರೀ ವಿಶ್ವೇಶ ತೀರ್ಥ ಶ್ರೀಪಾದರ ಗೌರವಾರ್ಥ ಸ್ಮೃತಿವನವನ್ನು ತಲಾ ಎರಡು ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು.

290. ರಾಜ್ಯದ ಪೂರ್ವ ಪ್ರಸ್ಥಭೂಮಿ ಪ್ರದೇಶದಲ್ಲಿ ಕಾಣಸಿಗುವ ಅಳಿವಿನಂಚಿನಲ್ಲಿರುವ ಲೆಸ್ಸರ್ ಫ್ಲೋರಿಕನ್ (Lesser Florican) ಪಕ್ಷಿ ಪ್ರಭೇದ ಸಂರಕ್ಷಣೆ ಕಾರ್ಯಕ್ರಮ ಹಮ್ಮಿಕೊಂಡು ಅನುಷ್ಠಾನಗೊಳಿಸಲು ಪ್ರಾರಂಭಿಕವಾಗಿ 50 ಲಕ್ಷ ರೂ.ಗಳ ಅನುದಾನ ಒದಗಿಸಲಾಗುವುದು.

291. ಮಾನವ–ವನ್ಯಜೀವಿ ಸಂಘರ್ಷವನ್ನು ನಿಯಂತ್ರಿಸಲು ವನ್ಯಜೀವಿಗಳ ಸುಗಮ ಮತ್ತು ಅಬಾಧಿತ ಚಲನವಲನಕ್ಕೆ ಅವಶ್ಯವಿರುವ ಎರಡು ಅರಣ್ಯ ಪ್ರದೇಶಗಳ ಮಧ್ಯದ ಕಾರಿಡಾರ್ ಪ್ರದೇಶವನ್ನು ಸರ್ಕಾರವು ಖರೀದಿಸಲು

ವಿವರವಾದ ಮಾರ್ಗಸೂಚಿಗಳನ್ನು ಒಳಗೊಂಡಂತೆ ಹೊಸ ನೀತಿಯನ್ನು ರೂಪಿಸಲಾಗುವುದು.

292. ಕಾಡಂಚಿನಲ್ಲಿ ವಾಸಿಸುತ್ತಿರುವ ಪ್ರದೇಶಗಳಲ್ಲಿ ಹೆಚ್ಚುತ್ತಿರುವ ಆಕಸ್ಮಿಕ ವನ್ಯಜೀವಿಗಳ ಹಾವಳಿಯಿಂದ ಉಂಟಾಗುತ್ತಿರುವ ಹಾನಿ ಪ್ರಕರಣಗಳಲ್ಲಿ ತ್ವರಿತವಾಗಿ ದಯಾತ್ಮಕ ಧನ ಪಾವತಿಸಲು 'ಅರಣ್ಯ ಇ–ಪರಿಹಾರ ಯೋಜನೆ' ಯನ್ನು ಅನುಷ್ಠಾನಗೊಳಿಸಲಾಗುವುದು.

293. ರಾಜ್ಯದ ನಗರಗಳಲ್ಲಿ ವೃಕ್ಷ ಸಂಪತ್ತನ್ನು ಹೆಚ್ಚಿಸಿ ಉತ್ತಮ ಪರಿಸರವನ್ನು ಸೃಷ್ಟಿಸಲು ಆಯ್ದ ಪ್ರದೇಶಗಳಲ್ಲಿ ಸಾರ್ವಜನಿಕರ ಸಹಭಾಗಿತ್ವದಲ್ಲಿ ಹಾಗೂ ಆರ್ಥಿಕ ಸಹಾಯದೊಂದಿಗೆ 'ಸ್ಮೃತಿ ವನಗಳ ನಿರ್ಮಾಣ' ಮಾಡುವ ಕಾರ್ಯಕ್ರಮವನ್ನು ಪ್ರಸ್ತಾಪಿಸಲಾಗಿದೆ.

294. ಕರ್ನಾಟಕ ರಾಜ್ಯದಲ್ಲಿರುವ ಅರಣ್ಯಗಳ ವಿಧ ಮತ್ತು ಸಾಂದ್ರತೆ ವಿವರಗಳನ್ನು 50 ಸೆಂಟಿ ಮೀಟರ್ ಸ್ಯಾಟ್‌ಲೈಟ್ ರೆಸಲ್ಯೂಷನ್ ಒಳಗೊಂಡ ನಕ್ಷೆಗಳನ್ನು ತಯಾರಿಸಲಾಗುವುದು. ಇದು ದೇಶದಲ್ಲೇ ಮೊದಲನೇ ಪ್ರಯತ್ನವಾಗಿದ್ದು, ಈ ವಿವರಗಳು ಅರಣ್ಯಗಳ ವೈಜ್ಞಾನಿಕ ನಿರ್ವಹಣೆಯಲ್ಲಿ ಸಹಕಾರಿಯಾಗುವುದು.

295. ಚಾಮರಾಜನಗರ ಜಿಲ್ಲೆಯ ಗೋಪಿನಾಥಂ ಪ್ರದೇಶದಲ್ಲಿ ಐದು ಕೋಟಿ ರೂ. ವೆಚ್ಚದಲ್ಲಿ ವನ್ಯಜೀವಿ

ಸಫಾರಿಯನ್ನೊಳಗೊಂಡಂತೆ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲಾಗುವುದು.

296. ಆನೆ ಕಾರಿಡಾರ್‌ನ ಭಾಗವಾಗಿರುವ ಚಾಮರಾಜನಗರ ಜಿಲ್ಲೆಯ ಬೂದಿಪಡಗದಲ್ಲಿ ಒಂದು ಕೋಟಿ ರೂ. ವೆಚ್ಚದಲ್ಲಿ ಆನೆ ಶಿಬಿರವನ್ನು ಪ್ರಾರಂಭಿಸಲಾಗುವುದು.

297. ಸಂಸ್ಕೃತಿ, ಪರಂಪರೆ ಮತ್ತು ನೈಸರ್ಗಿಕ ಸಂಪನ್ಮೂಲಗಳ ರಕ್ಷಣೆಗೆ 2021–22ನೇ ಸಾಲಿನಲ್ಲಿ ಒಟ್ಟಾರೆಯಾಗಿ 2,645 ಕೋಟಿ ರೂ. ಅನುದಾನ ಒದಗಿಸಲಾಗಿದೆ.

## ವಲಯ 6: ಆಡಳಿತ ಸುಧಾರಣೆ ಮತ್ತು ಸಾರ್ವಜನಿಕ ಸೇವೆ

298. ಜನಸ್ನೇಹಿ, ಕ್ರಿಯಾಶೀಲ ಆಡಳಿತ ನೀಡುವುದು ನಮ್ಮ ಸರ್ಕಾರದ ಧ್ಯೇಯವಾಗಿದೆ. ಸರ್ಕಾರದ ಸೇವೆ ಹಾಗೂ ಸೌಲಭ್ಯಗಳನ್ನು ಜನರ ಮನೆಬಾಗಿಲಿಗೇ ತಲುಪಿಸಲು ಆಡಳಿತ ಯಂತ್ರವನ್ನು ಎಲ್ಲಾ ಹಂತಗಳಲ್ಲಿ ಚುರುಕುಗೊಳಿಸುವುದರೊಂದಿಗೆ, ತಂತ್ರಜ್ಞಾನದ ಬಳಕೆಯಿಂದ ನಿಖರತೆ ಹಾಗೂ ಪಾರದರ್ಶಕತೆಯೊಂದಿಗೆ ತ್ವರಿತವಾಗಿ ಸೇವೆ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

299. ಆಡಳಿತ ವ್ಯವಸ್ಥೆಯಲ್ಲಿ ದಕ್ಷತೆಯನ್ನು ಇನ್ನಷ್ಟು ಹೆಚ್ಚಿಸಲು ಎರಡನೇ ಆಡಳಿತ ಸುಧಾರಣಾ ಆಯೋಗವನ್ನು ರಚಿಸಲಾಗಿದ್ದು, ಮುಂದಿನ ಎರಡು ವರ್ಷಗಳಲ್ಲಿ ಆಡಳಿತದಲ್ಲಿ ಗಮನಾರ್ಹ ಬದಲಾವಣೆಗಳನ್ನು ತರಲು ಶ್ರಮಿಸಲಾಗುವುದು.

300. ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸಮಸ್ಯೆಗಳ ಇತ್ಯರ್ಥವಾದರೆ ರಾಜಧಾನಿಗೆ ಬರುವವರ ಸಂಖ್ಯೆ ಕಡಿಮೆಯಾಗುತ್ತದೆ. ಈ ದಿಸೆಯಲ್ಲಿ 'ಜಿಲ್ಲಾಧಿಕಾರಿಗಳ ನಡಿಗೆ ಹಳ್ಳಿಗಳ ಕಡೆಗೆ' ಎಂಬ ವಿನೂತನ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಈ ಕಾರ್ಯಕ್ರಮದಡಿಯಲ್ಲಿ ಪ್ರತಿ ತಿಂಗಳಿನ ಮೂರನೇಯ ಶನಿವಾರ ಜಿಲ್ಲಾಧಿಕಾರಿಗಳು ಗ್ರಾಮಗಳಿಗೆ ತೆರಳಿ ಜನರ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲೇ ಇತ್ಯರ್ಥಪಡಿಸುವರು.

301. ನಮ್ಮ ಸರ್ಕಾರವು ಅಶಕ್ತ ವೃದ್ಧರು, ವಿಧವೆಯರು ಮತ್ತು ವಿಶೇಷ ಚೇತನರಿಗೆ ಸ್ವಯಂಪ್ರೇರಿತವಾಗಿ ಪಿಂಚಣಿ ಮಂಜೂರಾತಿ ಮಾಡಲು 'ಮನೆ ಬಾಗಿಲಿಗೇ ಮಾಸಾಶನ' ಎಂಬ ಅಭಿಯಾನವನ್ನು ಆರಂಭಿಸಿದೆ.

302. ಕೃಷಿ ಭೂಮಿಯನ್ನು ಪರಿವರ್ತಿಸುವ ಪ್ರಕ್ರಿಯೆಯನ್ನು ಸರಳೀಕರಿಸಲು ಮತ್ತು ಕ್ರಮಬದ್ಧವಾದ ಅಭಿವೃದ್ಧಿಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಮಾಸ್ಟರ್ ಪ್ಲಾನ್ ಅಥವಾ ಯೋಜನಾ ಪ್ರಾಧಿಕಾರದ ಮಂಜೂರಾತಿಯನ್ವಯ ಕೃಷಿ ಭೂಮಿಯನ್ನು ಅನ್ಯ ಉದ್ದೇಶಗಳಿಗಾಗಿ ಬಳಸಲು ಅನುವು ಮಾಡಿಕೊಡಲು ಭೂ ಕಂದಾಯ ಅಧಿನಿಯಮವನ್ನು ತಿದ್ದುಪಡಿ ಮಾಡಲಾಗುವುದು.

303. ಸಾರ್ವಜನಿಕರಿಗೆ ನಿಖರವಾದ ಹಾಗೂ ತ್ವರಿತವಾಗಿ ಭೂ–ದಾಖಲೆಗಳನ್ನು ಒದಗಿಸಲು ಗಣಕೀಕೃತ ಆಕಾರಬಂದ್

ಮಾಹಿತಿ ಮತ್ತು ಪಹಣಿ ಮಾಹಿತಿಯನ್ನು ಸಂಯೋಜಿಸಲು ಉದ್ದೇಶಿಸಲಾಗಿದೆ.

304. ಗ್ರಾಮೀಣ ಜನ ವಸತಿ ಪ್ರದೇಶಗಳಿಗೆ ಹಕ್ಕು ದಾಖಲೆಗಳನ್ನು ವಿತರಿಸುವ 'ಸ್ವಾಮಿತ್ವ' ಯೋಜನೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಂದಾಯ ಇಲಾಖೆ ಮತ್ತು ಭಾರತೀಯ ಸರ್ವೇಕ್ಷಣಾ ಸಂಸ್ಥೆಯ ಸಹಯೋಗದಲ್ಲಿ 25 ಕೋಟಿ ರೂ.ಗಳ ವೆಚ್ಚದಲ್ಲಿ ತ್ವರಿತವಾಗಿ ಅನುಷ್ಠಾನಗೊಳಿಸಲಾಗುವುದು.

305. ನಗರ ಪ್ರದೇಶದ ಭೂದಾಖಲೆಗಳನ್ನು ಸಂರಕ್ಷಿಸುವ ನಿಟ್ಟಿನಲ್ಲಿ, ನಗರ ಮಾಪನ ಜಾರಿಯಲ್ಲಿರುವ 48 ನಗರ ಮತ್ತು ಪಟ್ಟಣಗಳಲ್ಲಿನ ಎಲ್ಲಾ ನಗರಮಾಪನ ದಾಖಲೆಗಳನ್ನು ಸ್ಕ್ಯಾನಿಂಗ್ ಮಾಡಿ ಸಂರಕ್ಷಿಸಲಾಗುವುದು.

306. ಮೂಲ ಗೇಣಿದಾರರು, ಕುಮ್ಕಿ ಜಮೀನು, ಖಾನೇ, ಬಾನೇ, ಡೀಮ್ಡ್ ಅರಣ್ಯ ಸಾಗುವಳಿದಾರರ ಸಮಸ್ಯೆಗಳ ಕುರಿತು ಅಧ್ಯಯನ ನಡೆಸಿ ಪರಿಹಾರೋಪಾಯಗಳನ್ನು ಕಂಡುಕೊಳ್ಳಲು ಪ್ರತ್ಯೇಕ ಸಮಿತಿಯನ್ನು ರಚಿಸಲಾಗುವುದು.

307. ಆಡಳಿತಾತ್ಮಕ ಹಿತದೃಷ್ಟಿಯಿಂದ ಹಾಗೂ ಸಾರ್ವಜನಿಕರಿಗೆ ಅನುಕೂಲವಾಗಲು ದೊಡ್ಡ ಜಿಲ್ಲೆಯಾಗಿದ್ದ ಬಳ್ಳಾರಿಯನ್ನು ವಿಭಜಿಸಿ, ಹೊಸದಾಗಿ ವಿಜಯನಗರ ಜಿಲ್ಲೆಯನ್ನು ರಚಿಸಲಾಗಿದೆ. ನೂತನ ಜಿಲ್ಲೆಗೆ ಅಗತ್ಯವಿರುವ

ಮೂಲಸೌಕರ್ಯಗಳನ್ನು ಆದ್ಯತೆ ಮೇರೆಗೆ ಒದಗಿಸಲಾಗುವುದು.

308. ರಾಜ್ಯದ ಸರ್ಕಾರಿ ನೌಕರರಿಗೆ ಸರ್ಕಾರದಿಂದ ಕಾಲಕಾಲಕ್ಕೆ ದೊರೆಯಬೇಕಾದ ಸೌಲಭ್ಯಗಳನ್ನು ನಿಗದಿತ ಅವಧಿಯಲ್ಲಿ ನೀಡಲು ಎಲ್ಲಾ ನೌಕರರ ಸೇವೆಗಳನ್ನು ಆನ್‌ಲೈನ್ ಮೂಲಕ ಜಾರಿಗೊಳಿಸಲು HRMS-2 ಯೋಜನೆಯಡಿ ಕ್ರಮವಹಿಸಿದ್ದು, 2021–22ನೇ ಸಾಲಿನಲ್ಲಿ ಜಾರಿಗೊಳಿಸಲಾಗುವುದು.

309. 2020–21ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರು ಮತ್ತು ಅವಲಂಬಿತರಿಗೆ ಚಾಲ್ತಿಯಲ್ಲಿರುವ ಜ್ಯೋತಿ ಸಂಜೀವಿನಿ ಯೋಜನೆಯನ್ನು ಮಾರ್ಪಡಿಸಿ ಶಸ್ತ್ರ ಚಿಕಿತ್ಸಾ ವಿಧಾನಗಳಿಗೆ ನಗದುರಹಿತ ಚಿಕಿತ್ಸೆ ನೀಡಲು ಪ್ರಸ್ತಾಪಿಸಲಾಗಿತ್ತು. ಈ ಯೋಜನೆಯನ್ನು 2021–22ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುವುದು.

310. ಸರ್ಕಾರಿ ನೌಕರರಿಗೆ ಉತ್ತಮ ಮತ್ತು ಪಾರದರ್ಶಕ ಸೇವೆ ನೀಡಲು ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯ ಎಲ್ಲಾ ಪ್ರಕ್ರಿಯೆಗಳನ್ನು ಗಣಕೀರಣಗೊಳಿಸುವ ಕಾರ್ಯವು ಪ್ರಗತಿಯಲ್ಲಿದ್ದು, ಶೀಘ್ರದಲ್ಲೇ ಚಾಲನೆ ನೀಡಲಾಗುವುದು.

311. ರಾಜ್ಯದ 5.5 ಕೋಟಿ ನಿವಾಸಿಗಳಿಗೆ ಕೌಟುಂಬಿಕ ಗುರುತು ಸೃಜಿಸಲಾಗಿದೆ. ಸರ್ಕಾರವು ಸ್ವಯಂ ಪ್ರೇರಣೆಯಿಂದ ನಾಗರಿಕರಿಗೆ ಸೇವೆ/ ಸೌಲಭ್ಯಗಳನ್ನು ಒದಗಿಸಲು ಸಾಮಾಜಿಕ ನೋಂದಣಿ ಪುಸ್ತಕ ಮತ್ತು ಅರ್ಹತಾ ನಿರ್ವಹಣಾ

ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು. ಈ ವ್ಯವಸ್ಥೆಯನ್ನು ಫಲಾನುಭವಿ ನಿರ್ವಹಣಾ ವ್ಯವಸ್ಥೆ, ಡಿಬಿಟಿ ಪ್ಲಾಟ್‌ಫಾರ್ಮ್ ಮತ್ತು ಸಾರ್ವಜನಿಕ ಕುಂದುಕೊರತೆ ಪರಿಹಾರ ವ್ಯವಸ್ಥೆಯೊಂದಿಗೆ ಸಂಯೋಜಿಸಲಾಗುವುದು. ಎಲ್ಲಾ ಇಲಾಖೆಗಳು ತಮ್ಮ ವ್ಯವಸ್ಥೆಯಲ್ಲಿ ಕೌಟುಂಬಿಕ ಗುರುತನ್ನು ದಾಖಲಿಸಿಕೊಳ್ಳಲು ಕ್ರಮವಹಿಸಲಿವೆ. ಈ ಯೋಜನೆಯನ್ನು 15 ಕೋಟಿ ರೂ. ವೆಚ್ಚದಲ್ಲಿ ಕಾರ್ಯಗತಗೊಳಿಸಲಾಗುವುದು.

312. ಪ್ರಸ್ತುತ, ಸರ್ಕಾರದ 90 ಯೋಜನೆಗಳಡಿ ಫಲಾನುಭವಿಗಳಿಗೆ ಆರ್ಥಿಕ ನೆರವನ್ನು ಆಧಾರ್ ಆಧಾರಿತ ಪಾವತಿಯ ಡಿಬಿಟಿ ಪ್ಲಾಟ್‌ಫಾರ್ಮ್‌ರಡಿ ಪಾವತಿ ಮಾಡಲಾಗುತ್ತಿದೆ. ಸೌಲಭ್ಯ ವಿತರಣೆಯಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ಎಲ್ಲಾ ಯೋಜನೆಗಳಿಗೂ ಡಿಬಿಟಿ ವೇದಿಕೆಯಡಿ ಪಾವತಿ ಮಾಡಲು ಕ್ರಮ ವಹಿಸಲಾಗುವುದು.

313. ಆಸ್ತಿ ನೋಂದಣಿಯಲ್ಲಿ ವಂಚನೆ ಹಾಗೂ ದಾಖಲೆ ತಿರುಚುವುದನ್ನು ತಡೆಗಟ್ಟಲು ಒಂದು ಕೋಟಿ ರೂ. ವೆಚ್ಚದಲ್ಲಿ ಐಐಟಿ ಕಾನ್ಪುರ್ ನೆರವಿನೊಂದಿಗೆ ಬ್ಲಾಕ್‌ಚೈನ್ ತಂತ್ರಜ್ಞಾನವನ್ನು ಬಳಸಿ ಆಸ್ತಿ ನೋಂದಣಿ ಮಾಡುವ ಯೋಜನೆಯನ್ನು ಪ್ರಾಯೋಗಿಕವಾಗಿ ಜಾರಿಗೊಳಿಸಲಾಗುವುದು.

314. ವಿವಿಧ ಇಲಾಖೆಗಳು ಭೂ ಸಂಬಂಧಿತ ಚಟುವಟಿಕೆಗಳಿಗೆ ತಮ್ಮದೇ ಪ್ರತ್ಯೇಕ ತಂತ್ರಾಂಶಗಳನ್ನು ಹೊಂದಿರುವುದರಿಂದ ಒಂದೇ ಜಮೀನಿಗೆ ಬಹುಸಂಖ್ಯೆಯ ಗುರುತುಗಳನ್ನು

ಸೃಜಿಸುವುದರೊಂದಿಗೆ ಗೊಂದಲದ ಸಾಧ್ಯತೆಯನ್ನು ಸೃಷ್ಟಿಸುತ್ತದೆ. ಈ ಹಿನ್ನೆಲೆಯಲ್ಲಿ ಏಕೀಕೃತ ಭೂ ನಿರ್ವಹಣಾ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದು.

315. ರಾಜ್ಯ ದತ್ತಾಂಶ ಕೇಂದ್ರದ ಸೈಬರ್ ಸುರಕ್ಷತೆಯನ್ನು ಬಲಪಡಿಸಲು ಸುಸಜ್ಜಿತ ಭದ್ರತಾ ಕಾರ್ಯಾಚರಣೆ ಕೇಂದ್ರವನ್ನು ಎರಡು ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

316. ವಿಪತ್ತು ಸಂಭವಿಸಿದ ಸಂದರ್ಭಗಳಲ್ಲಿ ಸರ್ಕಾರದ ದತ್ತಾಂಶಗಳನ್ನು ಸುರಕ್ಷಿತವಾಗಿರಿಸಲು ಹಾಗೂ ಲಭ್ಯವಾಗುವಂತೆ ಮಾಡಲು ರಾಜ್ಯ ದತ್ತಾಂಶ ಕೇಂದ್ರದ ವಿಪತ್ತು ಚೇತರಿಕೆ ಮತ್ತು ವ್ಯವಹಾರ ಮುಂದುವರಿಕೆ ತಾಣವನ್ನು 35 ಕೋಟಿ ರೂ. ವೆಚ್ಚದಲ್ಲಿ ಶೀಘ್ರದಲ್ಲೇ ಕಾರ್ಯಗತಗೊಳಿಸಲಾಗುವುದು.

317. ರಾಜ್ಯದ ಎಲ್ಲಾ ಶೈಕ್ಷಣಿಕ ಸಂಸ್ಥೆಗಳ ಶೈಕ್ಷಣಿಕ ದಾಖಲೆಗಳನ್ನು ಆನ್‌ಲೈನ್‌ನಲ್ಲಿ ಸಂಗ್ರಹಿಸಿ, ಪ್ರಕಟಿಸಲು ರಾಷ್ಟ್ರೀಯ ಶೈಕ್ಷಣಿಕ ಡೆಪಾಸಿಟರಿಯನ್ನು ಮೂರು ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು. ಇದರಿಂದ ದಾಖಲೆಗಳ ಸತ್ಯಾಸತ್ಯತೆ ಮತ್ತು ಗೌಪ್ಯತೆಯನ್ನು ಖಾತರಿಪಡಿಸುವುದರೊಂದಿಗೆ ಸಂಬಂಧಿಸಿದ ಪ್ರಾಧಿಕಾರಗಳಿಗೆ ಈ ದಾಖಲೆಗಳನ್ನು ಸುಲಭವಾಗಿ ಪರಿಶೀಲಿಸಲು ಅನುಕೂಲವಾಗಲಿದೆ.

318. ಕನ್ನಡ ಭಾಷೆಗೆ ತಾಂತ್ರಿಕ ಪರಿಕರಗಳ ಸೂಟ್ ಒಂದನ್ನು ಎರಡು ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುವುದು. ಇದರಲ್ಲಿ ಕನ್ನಡ ಕಾಗುಣಿತ ಪರಿಶೀಲನೆ, ಕನ್ನಡ ಭಾಷೆಗೆ ಪಠ್ಯದಿಂದ ಪಠಣ, ಪಠಣದಿಂದ ಪಠ್ಯ ತಂತ್ರಾಂಶ, ಯಾಂತ್ರಿಕ ಅನುವಾದ, ಲಿಪ್ಯಂತರ, ಹೈಫನೇಷನ್, ಒಸಿಆರ್ ಉಪಕರಣಗಳು, ಕನ್ನಡ ಅಕ್ಷರ ಶೈಲಿಯ ಸಮೂಹ ಮತ್ತು ಕನ್ನಡ ಚಾಟ್ ಬಾಟ್ (Chat Bot), ಕನ್ನಡ ಶಬ್ದಕೋಶ ಮತ್ತು ಇ–ಕನ್ನಡ ಕಲಿಕಾ ಅಕಾಡೆಮಿ ಪೋರ್ಟಲ್ ಸೇರಿವೆ. ಕನ್ನಡ ಲಿಪಿ ಆಧಾರಿತ ಯುಆರ್‌ಎಲ್‌ಗಳು ಮತ್ತು ಕನ್ನಡ ಇ–ಮೇಲ್ ಸೇವೆಯನ್ನು ಸಹ ಒದಗಿಸಲಾಗುವುದು.

319. ಸರ್ಕಾರದ ವಿವಿಧ ಇಲಾಖೆಗಳ ಜಾಹೀರಾತು ಮತ್ತು ಪ್ರಕಟಣೆಗಳನ್ನು ಸಂಯೋಜಿಸಿ ಸೃಜನಶೀಲಗೊಳಿಸಲು ಕೇಂದ್ರ ಸರ್ಕಾರದ ಮಾದರಿಯಲ್ಲಿ ಬ್ರ್ಯಾಂಡ್ ಪ್ರೊಮೋಷನ್ ಕೌನ್ಸಿಲ್ ರಚಿಸಲಾಗುವುದು.

320. ರಾಜ್ಯದ ಚಲನಚಿತ್ರರಂಗದ ಬೆಳವಣಿಗೆಯನ್ನು ಪ್ರೋತ್ಸಾಹಿಸಲು ವಿವಿಧ ಇಲಾಖೆಗಳಿಂದ ಚಿತ್ರೀಕರಣಕ್ಕೆ ಅನುಮತಿ ನೀಡುವ ಪ್ರಕ್ರಿಯೆಯನ್ನು ಏಕಗವಾಕ್ಷಿ ಮಾದರಿಯಲ್ಲಿ ಸರಳೀಕರಿಸಿ ಸೇವಾ ಸಿಂಧು ಪೋರ್ಟಲ್ ಮೂಲಕ ನೀಡಲಾಗುವುದು.

321. ಸ್ವಂತ ಕಟ್ಟಡಗಳಿಲ್ಲದ 100 ಪೋಲಿಸ್ ಠಾಣೆಗಳಿಗೆ ಮುಂದಿನ ಐದು ವರ್ಷಗಳಲ್ಲಿ 200 ಕೋಟಿ ರೂ.ಗಳ

ವೆಚ್ಚದಲ್ಲಿ ಹೊಸ ಕಟ್ಟಡ ನಿರ್ಮಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಈ ಉದ್ದೇಶಕ್ಕಾಗಿ 25 ಕೋಟಿ ರೂ.ಗಳನ್ನು ಒದಗಿಸಲಾಗುವುದು.

322. ಪೊಲೀಸರ ಕ್ಷೇಮಾಭಿವೃದ್ಧಿಗಾಗಿ ಪೋಲಿಸ್ ಗೃಹ 2025 ಯೋಜನೆಯನ್ನು 2,740 ಕೋಟಿ ರೂ.ಗಳ ಮೊತ್ತದಲ್ಲಿ ಪ್ರಾರಂಭಿಸಿದೆ. ಈ ಯೋಜನೆಯಲ್ಲಿ (ಅಗ್ನಿಶಾಮಕ ಮತ್ತು ಕಾರಾಗೃಹ ಇಲಾಖೆಗಳನ್ನೊಳಗೊಂಡು) ಒಟ್ಟು 10,032 ವಸತಿಗೃಹಗಳನ್ನು ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ.

323. ಹಾವೇರಿ ಜಿಲ್ಲೆಯ ಶಿಗ್ಗಾಂವ್ ತಾಲ್ಲೂಕಿನಲ್ಲಿರುವ ಕರ್ನಾಟಕ ರಾಜ್ಯ ಮೀಸಲು ಪಡೆಯ 10ನೇ ಬೆಟಾಲಿಯನನ್ನು ಸಶಕ್ತಗೊಳಿಸಲು ಎಂಟು ಕೋಟಿ ರೂ. ವೆಚ್ಚದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು.

324. ಕೊಡಗು ಮತ್ತು ಹಾವೇರಿ ಜಿಲ್ಲೆಯಲ್ಲಿ ನೂತನವಾದ ಜಿಲ್ಲಾ ಪೊಲೀಸ್ ಸಂಕೀರ್ಣವನ್ನು ನಿರ್ಮಿಸಲು ತಲಾ ಎಂಟು ಕೋಟಿ ರೂ. ಹಂಚಿಕೆ ಮಾಡಲಾಗುವುದು.

325. ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಲ್ಲಿ ಕೆ–ಸೇಫ್–2 ಯೋಜನೆಯನ್ನು ಪರಿಷ್ಕೃತಗೊಳಿಸಿ ಮುಂದಿನ ಐದು ವರ್ಷಗಳಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿದ್ದು, ಈ ಯೋಜನೆಯಡಿ ಸಾರ್ವಜನಿಕರಿಗೆ ಹೆಚ್ಚಿನ ಅಗ್ನಿ ಸುರಕ್ಷತೆಯನ್ನು ಹಾಗೂ ಉನ್ನತೀಕರಿಸಿದ ವಿಪತ್ತು ಮತ್ತು ತುರ್ತು

ಪರಿಸ್ಥಿತಿ ನಿರ್ವಹಣೆಗಳಂತಹ ಪ್ರಮುಖ ಗುರಿಗಳನ್ನು ಸಾಧಿಸಲಾಗುವುದು.

326. ರಾಜ್ಯದ ಕರಾವಳಿ ಪ್ರದೇಶದಲ್ಲಿ ಸುರಕ್ಷತೆ ಮತ್ತು ಭದ್ರತೆಯನ್ನು ಹೆಚ್ಚಿಸಲು ಕರಾವಳಿ ಕಾವಲು ಪಡೆಯನ್ನು ಅತ್ಯಾಧುನಿಕ ತಂತ್ರಜ್ಞಾನವನ್ನು ಅಳವಡಿಸಿ ಹಂತ ಹಂತವಾಗಿ ಬಲಪಡಿಸಲಾಗುವುದು. ಈ ಉದ್ದೇಶಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಎರಡು ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

327. ರಾಜ್ಯದ ಎಂಟು ಕಾರಾಗೃಹಗಳ ಸಾಮರ್ಥ್ಯವನ್ನು ಹೆಚ್ಚಿಸಲು ಅಂದಾಜು 40 ಕೋಟಿ ರೂ.ಗಳ ವೆಚ್ಚದಲ್ಲಿ ಕ್ರಮವಹಿಸಲಾಗುವುದು. 2021–22ನೇ ಸಾಲಿನಲ್ಲಿ 10 ಕೋಟಿ ರೂ.ಗಳನ್ನು ಒದಗಿಸಲಾಗುವುದು.

328. ಖೈದಿಗಳನ್ನು ಕಾರಾಗೃಹದಿಂದಲೇ ಆನ್‌ಲೈನ್ ಮೂಲಕ ನ್ಯಾಯಾಲಯ ಕಲಾಪಕ್ಕೆ ಹಾಜರುಪಡಿಸಲು 15 ಕೋಟಿ ರೂ.ಗಳ ವೆಚ್ಚದಲ್ಲಿ ವಿಡಿಯೋ ಕಾನ್ಫರೆನ್ಸಿಂಗ್ ಸೌಲಭ್ಯವನ್ನು ಅನುಷ್ಠಾನಗೊಳಿಸಲಾಗುವುದು

329. ವ್ಯಸನ ಮುಕ್ತ ಸ್ವಸ್ಥ ಸಮಾಜದ ನಿರ್ಮಾಣವು ನಮ್ಮ ಸರ್ಕಾರದ ಪ್ರಮುಖ ಆದ್ಯತೆಯಾಗಿರುತ್ತದೆ. ಮಾದಕ ವಸ್ತುಗಳ ವ್ಯಸನವು ವ್ಯಾಪಿಸಿರುವ ಹಾಗೂ ವ್ಯಾಪಿಸುತ್ತಿರುವ ಪ್ರಮಾಣ ಆಘಾತಕಾರಿಯಾಗಿದೆ. ಈ ನಿಟ್ಟಿನಲ್ಲಿ ಮಾದಕ ವಸ್ತುಗಳ ವಿರುದ್ಧ ಸಾರ್ವಜನಿಕರಿಗೆ ಅರಿವು ಮೂಡಿಸಲು ಒಂದು ಹೊಸ ಕಾರ್ಯಕ್ರಮವನ್ನು ರೂಪಿಸಲಾಗುವುದು.

330. ರಾಜ್ಯದಲ್ಲಿ ಅಪರಾಧ ಪತ್ತೆ ಪ್ರಕ್ರಿಯೆಯನ್ನು ಇನ್ನಷ್ಟು ತ್ವರಿತಗೊಳಿಸುವ ಹಾಗೂ ದಂಡನೆಯ ಪ್ರಮಾಣವನ್ನು (Conviction rate) ಹೆಚ್ಚಿಸುವ ನಿಟ್ಟಿನಲ್ಲಿ ವಿಧಿ ವಿಜ್ಞಾನ ಪ್ರಯೋಗಾಲಯದ ಪ್ರಾದೇಶಿಕ ಕೇಂದ್ರಗಳನ್ನು ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಆರಂಭಿಸಲಾಗುವುದು.

331. ಸಾರಿಗೆ ಇಲಾಖೆಯ ವಾಹನ ಮಾಲೀಕತ್ವ ವರ್ಗಾವಣೆ, ಸರಕು ಸಾಗಣೆ ರಹದಾರಿ ಮತ್ತು ವಾಹನಗಳ ಅರ್ಹತಾ ಪತ್ರ ನೀಡುವ ಮೂರು ಸೇವೆಗಳನ್ನು Contactless, Faceless and Cashless ವ್ಯವಸ್ಥೆಯ ಮೂಲಕ ಸಾರ್ವಜನಿಕರಿಗೆ ಸೇವೆಗಳನ್ನು ಒದಗಿಸಲು ಕ್ರಮ ವಹಿಸಲಾಗುವುದು.

332. ವಾಹನ ನೋಂದಣಿಗಾಗಿ ವಾಹನ ತಂತ್ರಾಂಶ ಮತ್ತು ಅನುಜ್ಞಾ ಪತ್ರಗಳಿಗಾಗಿ ಸಾರಥಿ ತಂತ್ರಾಂಶ ಸೇವೆಗಳನ್ನು ಸಾರ್ವಜನಿಕರಿಗೆ ಅನುವಾಗುವಂತೆ ಒದಗಿಸಲು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ 'Facilitation Centre' ಗಳನ್ನು ಸ್ಥಾಪಿಸಲು ಉದ್ದೇಶಿಸಿದೆ.

333. ಸಾರಿಗೆ ಇಲಾಖೆಯ ಅಧೀನದಲ್ಲಿ ರಾಜ್ಯವ್ಯಾಪಿಯಿರುವ 66 ಕಛೇರಿಗಳಲ್ಲಿನ ಹಳೆಯ ದಾಖಲಾತಿಗಳನ್ನು ಡಿಜಿಟಲೀಕರಣಗೊಳಿಸಿ ಕಾಗದ ರಹಿತ ಕಛೇರಿಯನ್ನಾಗಿ ನಿರ್ವಹಿಸಲು ಉದ್ದೇಶಿಸಲಾಗಿದೆ.

334. ವಾಯುಮಾಲಿನ್ಯ ತಡೆಗಟ್ಟುವ ಉದ್ದೇಶದಿಂದ ವಾಹನಗಳ ನೋಂದಣಿ ವೇಳೆಯಲ್ಲಿ ಸಂಗ್ರಹಿಸುವ ಹಸಿರು ತೆರಿಗೆ ನಿಧಿಯಿಂದ ಸಂಚಾರ ವ್ಯವಸ್ಥೆಯಲ್ಲಿ ಶಿಸ್ತುಬದ್ಧ ಸಾರಿಗೆ ವ್ಯವಸ್ಥೆಯನ್ನು ಅಳವಡಿಸಲು ಹಾಗೂ ಸಾರ್ವಜನಿಕರಲ್ಲಿ ಈ ಬಗ್ಗೆ ಅರಿವು ಮೂಡಿಸಿ, ವಾಯುಮಾಲಿನ್ಯ ತಡೆಗಟ್ಟಲು ಕ್ರಮವಹಿಸಲಾಗುವುದು.

335. ಅಧಿಕೃತ ವಾಹನ ಸ್ಕ್ರ್ಯಾಪಿಂಗ್ ಸೌಲಭ್ಯವನ್ನು ಸ್ಥಾಪಿಸಲು ಮತ್ತು ನಿರ್ವಹಿಸಲು ಕೇಂದ್ರ ಸರ್ಕಾರವು ಕರಡು ಮಾರ್ಗಸೂಚಿಯನ್ನು ನೀಡಿದ್ದು, ಇದಕ್ಕೆ ಅನುಗುಣವಾಗಿ ರಾಜ್ಯ ಸರ್ಕಾರವು ವಾಹನ ಸ್ಕ್ರ್ಯಾಪಿಂಗ್ ಸೌಲಭ್ಯವನ್ನು ನಿರ್ವಹಿಸಲು ಕ್ರಮ ಕೈಗೊಳ್ಳಲಾಗುವುದು.

336. ಸಾರ್ವಜನಿಕರಿಗೆ ಹೆಚ್ಚಿನ ಸೌಲಭ್ಯಗಳನ್ನು ನೀಡಲು ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ 52 ಬಸ್ ನಿಲ್ದಾಣಗಳನ್ನು ನಿರ್ಮಿಸಲಾಗುವುದು ಹಾಗೂ ಸಾರಿಗೆ ಸಂಸ್ಥೆಗಳ ವಾಹನಗಳ ನಿರ್ವಹಣೆಗಾಗಿ 16 ಬಸ್ ಘಟಕಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ.

337. ಬೆಳಗಾವಿ, ಧಾರವಾಡ, ಮಂಗಳೂರು, ರಾಯಚೂರು ಹಾಗೂ ಹಾಸನಗಳಲ್ಲಿ ಸ್ವಯಂ ಚಾಲಿತ ಚಾಲನಾ ಪರೀಕ್ಷಾ ಪಥದ ಕಾಮಗಾರಿಯನ್ನು ಶೀಘ್ರವೇ ಪೂರ್ಣಗೊಳಿಸಿ ಈ ವರ್ಷದಲ್ಲಿ ಲೋಕಾರ್ಪಣೆ ಮಾಡಲಾಗುವುದು.

338. ಧಾರವಾಡ ಮತ್ತು ಮೈಸೂರಿನಲ್ಲಿ ವಾಹನ ತಪಾಸಣಾ ಮತ್ತು ಪ್ರಮಾಣೀಕರಣ ಕೇಂದ್ರಗಳು ಈ ವರ್ಷದಲ್ಲಿ ಕಾರ್ಯಾರಂಭ ಮಾಡಲಿವೆ.

339. ಆಡಳಿತ ಸುಧಾರಣೆ ಮತ್ತು ಸಾರ್ವಜನಿಕ ಸೇವಾ ವಲಯಕ್ಕೆ 2021–22ನೇ ಸಾಲಿನಲ್ಲಿ ಒಟ್ಟಾರೆಯಾಗಿ 52,519 ಕೋಟಿ ರೂ. ಅನುದಾನ ಒದಗಿಸಲಾಗಿದೆ.

## ತೆರಿಗೆ ಪ್ರಸ್ತಾವನೆಗಳು

340. 2020–21ನೇ ಸಾಲು ಕೋವಿಡ್–19 ಸಾಂಕ್ರಾಮಿಕದಿಂದ ಎಲ್ಲಾ ಜನ ಸಾಮಾನ್ಯರಿಗೆ ಹಲವಾರು ರೀತಿಯ ಕಷ್ಟವನ್ನು ಉಂಟುಮಾಡಿದಂತಹ ವರ್ಷವಾಗಿರುತ್ತದೆ. ಸಾರ್ವಜನಿಕರ ಮೇಲೆ ಇನ್ನಷ್ಟು ತೆರಿಗೆ ಒತ್ತಡವನ್ನು ಹೇರಲು ನಾನು ಇಚ್ಛಿಸುವುದಿಲ್ಲ. ಪೆಟ್ರೋಲ್ ಮತ್ತು ಡೀಸಲ್ ಮೇಲೆ ರಾಜ್ಯ ಸರ್ಕಾರವು ಕರ್ನಾಟಕ ಮಾರಾಟ ತೆರಿಗೆ (KST) ಯನ್ನು ವಿಧಿಸುತ್ತದೆ. ಈ ದರವು ದಕ್ಷಿಣ ಭಾರತದ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಈಗಾಗಲೇ ಕಡಿಮೆ ಇರುತ್ತದೆ. ಆದರೂ ಸಹ 2021–22ನೇ ಸಾಲಿನಲ್ಲಿ ಪೆಟ್ರೋಲ್ ಮತ್ತು ಡೀಸಲ್ ದರಗಳ ಮೇಲೆ ವಿಧಿಸುವ ಕರ್ನಾಟಕ ಮಾರಾಟ ತೆರಿಗೆ (KST) ಸೇರಿದಂತೆ ಇನ್ಯಾವುದೇ ಇತರೆ ತೆರಿಗೆಗಳ ದರಗಳನ್ನು ಹೆಚ್ಚಿಸದೆ ಸಾಮಾನ್ಯ ಜನರಿಗೆ ಆರ್ಥಿಕ ಹೊರೆಯಾಗದಂತೆ ಆಯವ್ಯಯವನ್ನು ಸೂತ್ರೀಕರಿಸಲಾಗಿದೆ.

**ವಾಣಿಜ್ಯ ತೆರಿಗೆಗಳು**

**ಸರಕು ಮತ್ತು ಸೇವಾ ತೆರಿಗೆ**

341. ಕೋವಿಡ್–19 ಸಾಂಕ್ರಾಮಿಕದ ನಡುವೆಯೂ ಕರ್ನಾಟಕವು 2020–21ರಲ್ಲಿ ಅತಿ ಹೆಚ್ಚಿನ ರಾಜಸ್ವ ಸಂಗ್ರಹಣೆಗಾಗಿ ಶ್ರಮಿಸಿರುತ್ತದೆ. ಒಟ್ಟಾರೆ ಜಿ.ಎಸ್.ಟಿ. ಸಂಗ್ರಹಣೆಯಲ್ಲಿ ಕರ್ನಾಟಕವು ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದೆ.

342. 2020–21ನೇ ಸಾಲಿಗೆ ವಾಣಿಜ್ಯ ತೆರಿಗೆ ಇಲಾಖೆಗೆ 82,443 ಕೋಟಿ ರೂ.ಗಳ (ಜಿ.ಎಸ್.ಟಿ. ಪರಿಹಾರ ಒಳಗೊಂಡಂತೆ) ರಾಜಸ್ವ ಸಂಗ್ರಹಣೆಯ ಗುರಿ ನಿಗದಿಪಡಿಸಲಾಗಿದ್ದು, ಫೆಬ್ರವರಿ ಅಂತ್ಯಕ್ಕೆ 71,833 ಕೋಟಿ ರೂ.ಗಳ ರಾಜಸ್ವವನ್ನು ಕ್ರೋಢೀಕರಿಸಲಾಗಿರುತ್ತದೆ.

343. ಉತ್ತಮ ತೆರಿಗೆ ಅನುಪಾಲನೆಯನ್ನು ಖಚಿತಪಡಿಸಿಕೊಳ್ಳಲು ಹಾಗೂ ತೆರಿಗೆ ವಂಚನೆಯನ್ನು ತಡೆಗಟ್ಟುವ ನಿಟ್ಟಿನತ್ತ ಇ–ಉಪಕ್ರಮಗಳನ್ನು ಜಾರಿಗೊಳಿಸುವಲ್ಲಿ ವಾಣಿಜ್ಯ ತೆರಿಗೆಗಳ ಇಲಾಖೆಯು ಯಾವಾಗಲೂ ಮುಂಚೂಣಿಯಲ್ಲಿದೆ. ತೆರಿಗೆದಾರರ ಅನುಪಾಲನೆಯ ಮೇಲೆ ನಿಗಾವಹಿಸಲು 'ಜಿ.ಎಸ್.ಟಿ. ಪ್ರೈಮ್' ಎಂಬ ದತ್ತಾಂಶ ವಿಶ್ಲೇಷಣಾ ತಂತ್ರಾಂಶವನ್ನು ಉಪಯೋಗಿಸಲಾಗುತ್ತಿದೆ. 2021ರಲ್ಲಿ ಕರ್ನಾಟಕದಲ್ಲಿ ಜಿ.ಎಸ್.ಟಿ. ಲೆಕ್ಕಪರಿಶೋಧನೆಯನ್ನು ಸುಗಮವಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ, ವಾಣಿಜ್ಯ ತೆರಿಗೆಗಳ ಇಲಾಖೆಯು ನ್ಯಾಷನಲ್ ಇನ್‌ಫಾರ್ಮ್ಯಾಟಿಕ್ಸ್

ಸೆಂಟರ್‌ನ (NIC) ಸಹಯೋಗದಲ್ಲಿ 'ಜಿ.ಎಸ್.ಟಿ. ಇ-ಶೋಧನೆ' ಎಂಬ ಹೊಸ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿ, ಜಾರಿಗೊಳಿಸಿರುತ್ತದೆ.

344. ಜಿ.ಎಸ್.ಟಿ. ಪೂರ್ವದ ಲೆಕ್ಕಪರಿಶೋಧನೆಗಳನ್ನು ಪೂರ್ಣಗೊಳಿಸುವ ಹಾಗೂ ತೆರಿಗೆ ಬಾಕಿಯನ್ನು ತ್ವರಿತ ಗತಿಯಲ್ಲಿ ವಸೂಲು ಮಾಡಲು, ಜಿ.ಎಸ್.ಟಿ. ಪೂರ್ವದ ಕಾಯ್ದೆಗಳಿಗೆ ಸಂಬಂಧಿಸಿದಂತೆ 'ಕರ ಸಮಾಧಾನ ಯೋಜನೆ-2021'ನ್ನು ಜಾರಿಗೊಳಿಸಲಾಗುವುದು.

345. 2021-22ನೇ ಸಾಲಿಗೆ ವಾಣಿಜ್ಯ ತೆರಿಗೆಗಳ ಇಲಾಖೆಗೆ 76,473 ಕೋಟಿ ರೂ.ಗಳ ತೆರಿಗೆ ಸಂಗ್ರಹಣೆಯ ಗುರಿಯನ್ನು ನಿಗದಿಪಡಿಸಲಾಗಿದೆ.

**ನೋಂದಣಿ ಮತ್ತು ಮುದ್ರಾಂಕ**

346. 2020-21ನೇ ಸಾಲಿಗೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 12,655 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆಯ ಗುರಿ ನಿಗದಿಪಡಿಸಲಾಗಿದ್ದು, ಫೆಬ್ರವರಿ ಅಂತ್ಯಕ್ಕೆ 9,014 ಕೋಟಿ ರೂ.ಗಳ ರಾಜಸ್ವವನ್ನು ಕ್ರೋಢೀಕರಿಸಲಾಗಿರುತ್ತದೆ.

347. ಕೈಗೆಟಕುವ ದರಗಳ ಮನೆಗಳನ್ನು ಪ್ರೋತ್ಸಾಹಿಸಲು, 35 ಲಕ್ಷ ರೂ.ಗಳಿಂದ 45 ಲಕ್ಷ ರೂ.ಗಳವರೆಗಿನ ಮೌಲ್ಯದ ಅಪಾರ್ಟ್‌ಮೆಂಟ್‌ಗಳ ಮೊದಲನೇ ನೋಂದಣಿಗೆ

ಮುದ್ರಾಂಕ ಶುಲ್ಕವನ್ನು ಶೇ. 5 ರಿಂದ ಶೇ. 3 ಕ್ಕೆ ಕಡಿಮೆ ಮಾಡಲು ಪ್ರಸ್ತಾಪಿಸುತ್ತೇನೆ.

348. 2021–22ನೇ ಆರ್ಥಿಕ ವರ್ಷಕ್ಕೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 12,655 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

**ಅಬಕಾರಿ**

349. 2020–21ನೇ ಸಾಲಿಗೆ ಅಬಕಾರಿ ಇಲಾಖೆಗೆ 22,700 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆಯ ಗುರಿ ನಿಗದಿಪಡಿಸಲಾಗಿದ್ದು. ಫೆಬ್ರವರಿ ಅಂತ್ಯಕ್ಕೆ 20,900 ಕೋಟಿ ರೂ.ಗಳ ರಾಜಸ್ವವನ್ನು ಕ್ರೋಢೀಕರಿಸಲಾಗಿರುತ್ತದೆ. ನಿಗದಿತ ಗುರಿಯನ್ನು ಸಾಧಿಸಲಾಗುವುದೆಂಬ ನಿರೀಕ್ಷೆಯನ್ನು ಹೊಂದಿದ್ದೇವೆ.

350. 2021–22ನೇ ಆರ್ಥಿಕ ವರ್ಷಕ್ಕೆ ಅಬಕಾರಿ ಇಲಾಖೆಗೆ 24,580 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

**ಸಾರಿಗೆ**

351. 2020–21ನೇ ಸಾಲಿಗೆ 7,115 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆಯ ಗುರಿ ನಿಗದಿಪಡಿಸಲಾಗಿದ್ದು, ಜನವರಿ ಅಂತ್ಯಕ್ಕೆ 4,294 ಕೋಟಿ ರೂ.ಗಳ ರಾಜಸ್ವವನ್ನು ಕ್ರೋಢೀಕರಿಸಲಾಗಿರುತ್ತದೆ.

352. ಒಟ್ಟಾರೆಯಾಗಿ 2021–22ನೇ ಸಾಲಿಗೆ 7,515 ಕೋಟಿ ರೂ.ಗಳ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

**ಪರಿಷ್ಕೃತ ಅಂದಾಜು 2020–21**

353. 2020–21ರ ಪರಿಷ್ಕೃತ ಅಂದಾಜುಗಳ ಅನ್ವಯ ಆಯವ್ಯಯದಲ್ಲಿ ಅಂದಾಜಿಸಲಾದ 2,33,134 ಕೋಟಿ ರೂ.ಗಳಿಗೆ ಹೋಲಿಸಿದಲ್ಲಿ ಒಟ್ಟಾರೆ ಜಮೆ 2,30,381 ಕೋಟಿ ರೂ.ಗಳಾಗಿದೆ. ರಾಜ್ಯದ ರಾಜಸ್ವ ಕ್ರೋಢೀಕರಣದ ಪ್ರಯತ್ನಗಳು ಕೋವಿಡ್ ಸಾಂಕ್ರಾಮಿಕದಿಂದ ಕುಂಠಿತಗೊಂಡು 1,59,709 ಕೋಟಿ ರೂ.ಗಳಾಗಿರುತ್ತದೆ, ಇದರಲ್ಲಿ ಸ್ವಂತ ತೆರಿಗೆ ರಾಜಸ್ವ ಸಂಗ್ರಹಣೆಯು ಜಿ.ಎಸ್.ಟಿ. ಪರಿಹಾರ ಒಳಗೊಂಡಂತೆ 1,17,782 ಕೋಟಿ ರೂ.ಗಳಾಗಿರುತ್ತದೆ.

354. ಪರಿಷ್ಕೃತ ಅಂದಾಜಿನ ಪ್ರಕಾರ ಒಟ್ಟು ವೆಚ್ಚವು 2,29,925 ಕೋಟಿ ರೂ.ಗಳಾಗಿದೆ. ಇದು 2019–20ಕ್ಕೆ ಹೋಲಿಸಿದಲ್ಲಿ ಶೇ. 2.6 ರಷ್ಟು ಹೆಚ್ಚಳ ಕಂಡಿದೆ.

**ಆಯವ್ಯಯ ಅಂದಾಜುಗಳು 2021–22**

**ಸನ್ಮಾನ್ಯ ಸಭಾಧ್ಯಕ್ಷರೇ,**

355. 2021–22ನೇ ಸಾಲಿನಲ್ಲಿ ಒಟ್ಟು ಜಮೆಗಳು 2,43,734 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ. ಇದರಲ್ಲಿ 1,72,271 ಕೋಟಿ ರೂ. ರಾಜಸ್ವ ಜಮೆಗಳು ಹಾಗೂ 71,332 ಕೋಟಿ ರೂ.ಗಳ ಸಾಲ ಸೇರಿದಂತೆ 71,463 ಕೋಟಿ ರೂ.ಗಳ ಬಂಡವಾಳ ಜಮೆಗಳು ಒಳಗೊಂಡಿರುತ್ತದೆ. 1,87,405 ಕೋಟಿ ರೂ.ಗಳ

ರಾಜಸ್ವ ವೆಚ್ಚ, 44,237 ಕೋಟಿ ರೂ.ಗಳ ಬಂಡವಾಳ ವೆಚ್ಚ ಹಾಗೂ ಸಾಲದ ಮರುಪಾವತಿ 14,565 ಕೋಟಿ ರೂ.ಗಳ ವೆಚ್ಚವನ್ನು ಒಳಗೊಂಡು, ಒಟ್ಟು ವೆಚ್ಚವು 2,46,207 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ.

356. ರಾಜಸ್ವ ಕೊರತೆಯು 15,134 ಕೋಟಿ ರೂ.ಗಳೆಂದು ಅಂದಾಜು ಮಾಡಲಾಗಿದೆ. ವಿತ್ತೀಯ ಕೊರತೆ 59,240 ಕೋಟಿ ರೂ.ಗಳಾಗುತ್ತದೆಂದು ನಿರೀಕ್ಷಿಸಲಾಗಿದ್ದು, ಅದು ರಾಜ್ಯದ ಆಂತರಿಕ ಉತ್ಪನ್ನದ ಶೇ. 3.48 ರಷ್ಟಾಗಿರುತ್ತದೆ. 2021–22ರ ಕೊನೆಯಲ್ಲಿ 4,57,899 ಕೋಟಿ ರೂ.ಗಳ ಒಟ್ಟು ಹೊಣೆಗಾರಿಕೆಗಳು ರಾಜ್ಯದ ಆಂತರಿಕ ಉತ್ಪನ್ನದ ಶೇ. 26.9 ರಷ್ಟಾಗುತ್ತದೆಂದು ಅಂದಾಜು ಮಾಡಲಾಗಿದೆ. ಇದಕ್ಕಾಗಿ ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಅಧಿನಿಯಮ 2002ಕ್ಕೆ ಸೂಕ್ತ ತಿದ್ದುಪಡಿ ತರಲಾಗುವುದು.

## ಸಂಪನ್ಮೂಲಗಳ ಕ್ರೋಢೀಕರಣ

357. 2021–22ನೇ ಸಾಲಿನಲ್ಲಿ ಜಿ.ಎಸ್.ಟಿ. ನಷ್ಟಪರಿಹಾರವನ್ನು ಒಳಗೊಂಡಂತೆ ರಾಜ್ಯದ ಒಟ್ಟು ಸ್ವಂತ ತೆರಿಗೆ ರಾಜಸ್ವವು 1,24,202 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ.

358. ತೆರಿಗೆಯೇತರ ರಾಜಸ್ವಗಳಿಂದ 8,258 ಕೋಟಿ ರೂ.ಗಳನ್ನು ಸಂಗ್ರಹಿಸಬಹುದೆಂದು ನಿರೀಕ್ಷಿಸಲಾಗಿದೆ. ಕೇಂದ್ರ ತೆರಿಗೆಯ ಪಾಲಿನ ರೂಪದಲ್ಲಿ 24,273 ಕೋಟಿ ರೂ.ಗಳನ್ನು ಹಾಗೂ 15,538 ಕೋಟಿ ರೂ.ಗಳನ್ನು ಕೇಂದ್ರ ಸರ್ಕಾರದಿಂದ ಸಹಾಯಾನುದಾನ ರೂಪದಲ್ಲಿ ರಾಜ್ಯ ಸರ್ಕಾರವು

ನಿರೀಕ್ಷಿಸಿದೆ. ಈ ರಾಜಸ್ವ ಜಮೆಗಳಿಗೆ ಪೂರಕವಾಗಿ 71,332 ಕೋಟಿ ರೂ.ಗಳ ಒಟ್ಟು ಸಾಲಗಳು, 40 ಕೋಟಿ ರೂ.ಗಳ ಋಣೇತರ ಸ್ವೀಕೃತಿಗಳು ಮತ್ತು 91 ಕೋಟಿ ರೂ.ಗಳ ಸಾಲಗಳ ವಸೂಲು ಮೊತ್ತವನ್ನು ಅಂದಾಜಿಸಲಾಗಿದೆ.

359. ರಾಜ್ಯ ಸರ್ಕಾರದ ಒಡೆತನದ ವಿವಿಧ ಮಂಡಳಿಗಳು, ನಿಗಮಗಳು ಮತ್ತು ಸ್ಥಳೀಯ ಸಂಸ್ಥೆಗಳ ಆಂತರಿಕ ಸಂಪನ್ಮೂಲ ಸೃಜನೆಯ ಮೂಲಕ ಹಾಗೂ ತಮ್ಮ ಹಣಕಾಸು ಸಾಮರ್ಥ್ಯ ಮತ್ತು ಸ್ವಂತ ರಾಜಸ್ವಗಳ ಆಧಾರದ ಮೇಲೆ ಮಾಡಿದ ಸಾಲಗಳ ಮೂಲಕ 23,763 ಕೋಟಿ ರೂ.ಗಳನ್ನು ಕ್ರೋಢೀಕರಿಸಲಾಗುತ್ತದೆಂದು ನಿರೀಕ್ಷಿಸಲಾಗಿದೆ.

**ಸನ್ಮಾನ್ಯ ಸಭಾಧ್ಯಕ್ಷರೇ,**

360. ನಾನು ಇಂದು ಮಂಡಿಸಿರುವ ಮುಂಗಡ ಪತ್ರವು ನಮ್ಮ ಸರ್ಕಾರದ ಅಭಿವೃದ್ಧಿಯ ಮುನ್ನೋಟವನ್ನು ಪ್ರಸ್ತುತಪಡಿಸಿದೆ. ಸಮೃದ್ಧ ಕರ್ನಾಟಕ ನಿರ್ಮಾಣಕ್ಕೆ ನಮ್ಮ ಸರ್ಕಾರದ ಕಾರ್ಯಸೂಚಿಯನ್ನು ಸ್ಪಷ್ಟಪಡಿಸಿದೆ. ಈ ಯೋಜನೆಗಳ ಅನುಷ್ಠಾನಕ್ಕೆ ಸದನದ ಗೌರವಾನ್ವಿತ ಸದಸ್ಯರ ಸಹಕಾರವನ್ನು ಕೋರುತ್ತೇನೆ. ಈಗ ಆಯವ್ಯಯವನ್ನು ಗೌರವಾನ್ವಿತ ಸದನದ ಪರಿಗಣನೆಗಾಗಿ ಮಂಡಿಸುತ್ತಿದ್ದೇನೆ ಹಾಗೂ ಆಯವ್ಯಯ ಅಂದಾಜಿನನ್ವಯ 31ನೇ ಮಾರ್ಚ್ 2022ರವರೆಗಿನ ವೆಚ್ಚವನ್ನು ನಿರ್ವಹಿಸಲು ಪೂರ್ಣ ಆಯವ್ಯಯವನ್ನು ಅಂಗೀಕರಿಸಲು ಕೋರುತ್ತೇನೆ.

**ಜೈ ಹಿಂದ್**

**ಜೈ ಕರ್ನಾಟಕ**

## ಆಯವ್ಯಯ ವಿಹಂಗಮ ನೋಟ

₹ ಕೋಟಿಗಳಲ್ಲಿ

| | ಆಯವ್ಯಯ ಅಂದಾಜು 2020-21 | ಪರಿಷ್ಕೃತ ಅಂದಾಜು 2020-21 | ಆಯವ್ಯಯ ಅಂದಾಜು 2021-22 |
|---|---|---|---|
| **ಪ್ರಾರಂಭ ಶಿಲ್ಕು** | **720.48** | **1659.21** | **6649.68** |
| **ಎ. ರಾಜಸ್ವ ಲೆಕ್ಕ** | | | |
| **1. ಜಮೆ** | | | |
| ರಾಜ್ಯ ತೆರಿಗೆ | 128106.83 | 117781.73 | 124201.98 |
| ಕೇಂದ್ರ ತೆರಿಗೆಯಲ್ಲಿ ಪಾಲು | 28591.23 | 20053.41 | 24273.06 |
| ಕೇಂದ್ರ ಸರ್ಕಾರದ ಅನುದಾನಗಳು | 15454.46 | 14144.33 | 15537.76 |
| ತೆರಿಗೆಯೇತರ ರಾಜಸ್ವ | 7767.24 | 7729.59 | 8258.37 |
| **ಒಟ್ಟು–ಎ (1)** | **179919.76** | **159709.05** | **172271.17** |
| **11. ವೆಚ್ಚ** | | | |
| ಸಾಮಾಜಿಕ ಸೇವೆ | 65046.71 | 63981.69 | 67730.84 |
| ಆರ್ಥಿಕ ಸೇವೆ | 48536.23 | 49247.71 | 46905.15 |
| ಸಾಮಾನ್ಯ ಸೇವೆ | 59602.59 | 59962.41 | 66802.33 |
| ಸಹಾಯಾನುದಾನ ಮತ್ತು ಅಂಶದಾನ | 6590.92 | 6003.07 | 5966.46 |
| **ಒಟ್ಟು–ಎ (11)** | **179776.44** | **179194.89** | **187404.77** |
| **ಎ. ರಾಜಸ್ವ ಲೆಕ್ಕ ಹೆಚ್ಚುವರಿ/ಕೊರತೆ** | **143.32** | **-19485.84** | **-15133.60** |


## ಆಯವ್ಯಯ ವಿಹಂಗಮ ನೋಟ

₹ ಕೋಟಿಗಳಲ್ಲಿ


| | ಆಯವ್ಯಯ ಅಂದಾಜು 2020-21 | ಪರಿಷ್ಕೃತ ಅಂದಾಜು 2020-21 | ಆಯವ್ಯಯ ಅಂದಾಜು 2021-22 |
|---|---|---|---|
| ಬಿ. ಬಂಡವಾಳ ಲೆಕ್ಕ | | | |
| 1. ಜಮೆ: | | | |
| ಕೇಂದ್ರ ಸರ್ಕಾರದಿಂದ ಸಾಲ | 1844.50 | 1332.24 | 2231.82 |
| ಬಹಿರಂಗ ಮಾರುಕಟ್ಟೆ ಸಾಲ | 49573.00 | 67250.00 | 67100.00 |
| ಎನ್‌ಎಸ್‌ಎಸ್‌ಎಫ್, ಎನ್‌ಸಿಡಿಸಿ ಮತ್ತು ಆರ್.ಐ.ಡಿ.ಎಫ್ ಗಳಿಂದ ಸಾಲ | 1500.00 | 1800.00 | 2000.00 |
| ವಿವಿಧ ಬಂಡವಾಳ ಜಮೆಗಳು | 40.00 | 28.00 | 40.00 |
| ಸಾಲಗಳು ಮತ್ತು ಮುಂಗಡಗಳ ವಸೂಲಿ | 256.63 | 261.52 | 90.84 |
| **ಒಟ್ಟು–ಬಿ (1)** | **53214.13** | **70671.76** | **71462.66** |
| **11. ಬಟವಾಡೆ:** | | | |
| ಬಂಡವಾಳ ವೆಚ್ಚ | 43059.14 | 37146.29 | 41358.12 |
| ಕೇಂದ್ರ ಸರ್ಕಾರದ ಸಾಲಗಳ ಮರುಸಂದಾಯ | 1494.56 | 1494.56 | 1504.89 |
| ಮಾರುಕಟ್ಟೆ ಸಾಲಗಳ ಮರುಪಾವತಿ | 7100.08 | 7100.08 | 10000.07 |
| ಎಲ್‌ಐಸಿ, ಜಿಐಸಿ. ಎನ್‌ಎಸ್‌ಎಸ್‌ಎಫ್, ಎನ್‌ಸಿಡಿಸಿ ಮತ್ತು ಆರ್,ಐ,ಡಿ,ಎಫ್ ಸಾಲಗಳ ಮರುಸಂದಾಯ | 3010.64 | 3010.64 | 3059.82 |
| ಸಾಲಗಳ ಮತ್ತು ಮುಂಗಡಗಳ ಬಟವಾಡೆ | 3452.47 | 1978.27 | 2879.25 |
| **ಒಟ್ಟು–ಬಿ (11)** | **58116.89** | **50729.84** | **58802.15** |
| **ಸಂಚಿತ ನಿಧಿ** | **237893.33** | **229924.73** | **246206.92** |
| **ಡಿ. ಮುಕ್ತಾಯ ಶಿಲ್ಕು** | **495.43** | **6649.68** | **8515.28** |


**ಜಮೆ-ರೂಪಾಯಿ ಎಷ್ಟು ಭಾಗ ಯಾವುದರಿಂದ (2021-22 ಆಯವ್ಯಯ ಅಂದಾಜು)**


(ಪೈಸೆ)




(* ಜಿ.ಎಸ್.ಟಿ. ನಷ್ಟ ಪರಿಹಾರ ಒಳಗೊಂಡಿದೆ)


ವೆಚ್ಚ 2021-22 ಆಯವ್ಯಯ ಅಂದಾಜು-ರೂಪಾಯಿ ಯಾವ ಭಾಗ ಎಷ್ಟೆಷ್ಟು (ಪೈಸೆಗಳಲ್ಲಿ)
ಸಮಾಜಿಕ ಭದ್ರತಾ ಪಿಂಚಣಿಗಳು, 3
ಆಡಳಿತಾತ್ಮಕ ವೆಚ್ಚಗಳು, 1
ಸಹಾಯಾನುದಾನ & ಇತರೆ, 4
ವೇತನ & ಭತ್ಯಗಳು, 21
ಪಿಂಚಣಿ, 10
ಸಹಾಯಧನ, 10
ಋಣ ಮೇಲುಸ್ತುವಾರಿ, 18
ಇತರೆ ರಾಜಸ್ವ ವೆಚ್ಚ, 16
ಬಂಡವಾಳ ವೆಚ್ಚ, 17


ರಾಜ್ಯದ ಸ್ವಂತ ತೆರಿಗೆಗಳ ವಿವರಗಳು 2021-22 ಆಯವ್ಯಯ ಅಂದಾಜುಗಳು (ರೂ.ಕೋಟಿಗಳಲ್ಲಿ)
ಇತರ , 2979, 2%
ವಾಣಿಜ್ಯ ತೆರಿಗೆಗಳು , 76473,(*) 62%
ಮೋಟಾರು ವಾಹನ ತೆರಿಗೆ, 7515, 6%
ನೋಂದಣಿ ಮತ್ತು ಮುದ್ರಾಂಕ, 12655, 10%
ರಾಜ್ಯ ಅಬಕಾರಿ , 24580, 20%
(* ಜಿ.ಎಸ್.ಟಿ. ನಷ್ಟ ಪರಿಹಾರ ಒಳಗೊಂಡಿದೆ)


ಒಟ್ಟಾರೆ ಹಂಚಿಕೆ(ಒಟ್ಟು ಅಭಿಯಾಚನೆ+ಐ.ಇ.ಬಿ.ಆರ್.)2021–22(ರೂ.ಕೋಟಿಗಳಲ್ಲಿ)
(ಒಟ್ಟಾರೆ ಹಂಚಿಕೆಯ ಶೇಕಡವಾರು)
ಶಿಕ್ಷಣ, 29688, 11%
ನಗರಾಭಿವೃದ್ಧಿ, 27386, 10%
ಜಲಸಂಪನ್ಮೂಲ, 21181, 8%
ಇಂಧನ, 16515, 6%
ಗ್ರಾಮೀಣಾಭಿವೃದ್ಧಿ & ಪಂಚಾಯತಿ ರಾಜ್, 16036, 6%
ಕಂದಾಯ, 12384, 4%
ಆರೋಗ್ಯ & ಕುಟುಂಬ ಕಲ್ಯಾಣ, 11908, 4%
ಒಳಾಡಳಿತ ಮತ್ತು ಸಾರಿಗೆ, 10330, 4%
ಲೋಕೋಪಯೋಗಿ, 10256, 4%
ಸಮಾಜ ಕಲ್ಯಾಣ, 8864, 3%
ಕೃಷಿ ಮತ್ತು ತೋಟಗಾರಿಕೆ, 7297, 3%
ಮಹಿಳಾ ಮತ್ತು ಮಕ್ಕಳ ಕಲ್ಯಾಣ, 4531, 1%
ವಸತಿ, 2990, 1%
ಆಹಾರ ಮತ್ತು ನಾಗರೀಕ ಸರಬರಾಜು, 2374, 1%
ಇತರೆ, 94416, 34%

## NOTES